## ನಿತ್ಯ ಪಂಚಾಂಗ 10.05.2025 ಶನಿವಾರ



ಶ್ರೀ ವಿಶ್ವಾವಸು ನಾಮ ಸಂವತ್ಸರ,
ಉತ್ತರಾಯಣ ವಸಂತ ಋತು
ಚಾಂದ್ರಮಾನ, ವೈಶಾಖ ಶುದ್ಧ
ತ್ರಯೋದಶಿ, ಚಿತ್ತ ನಕ್ಷತ್ರ, ವೇದವ್ಯಾಸ ಜಯಂತಿ, ಕೊಳ್ಳೇಗಾಲ ವಿಶ್ವೇಶ್ವರ ರಥ, ಮಳೂರು ರಥ, ಮುಳಬಾಗಿಲು ಆಂಜನೇಯ ರಥ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | 4.30 – 6.00 | 12.00 – 1.30 | 3.00 – 4.30 |
| ಸೋಮ | 7.30 – 9.00 | 10.30 – 12.00 | 1.30 – 3.00 |
| ಮಂಗಳ | 3.00 – 4.30 | 9.00 – 10.30 | 12.00 – 1.30 |
| ಬುಧ | 12.00 – 1.30 | 7.30 – 9.00 | 10.30 – 12.00 |
| ಗುರು | 1.30 – 3.00 | 6.00 – 7.30 | 9.00 – 10.30 |
| ಶುಕ್ರ | 10.30 – 12.00 | 3.00 – 4.30 | 7.30 – 9.00 |
| ಶನಿ | 9.00 – 10.30 | 1.30 – 3.00 | 6.00 – 7.30 |

# ಮನೆಯಂಗಳಕ್ಕೆ ಸಂಚಾರಿ ಕಾವೇರಿ ನೀರು ಸರಬರಾಜು ಯೋಜನೆಗೆ ಡಿಸಿಎಂ ಚಾಲನೆ

**ಬೆಂಗಳೂರು, ಮೇ 09:** ಬೆಂಗಳೂರಿನಲ್ಲಿ ಟ್ಯಾಂಕರ್ ನೀರು ಪೂರೈಕೆ ದೊಡ್ಡ ಮಾಫಿಯಾವಾಗಿದೆ. ಇದನ್ನು ತಪ್ಪಿಸಿ ಸಾರ್ವಜನಿಕರಿಗೆ ಕಡಿಮೆ ದರದಲ್ಲಿ ನೀರು ಪೂರೈಸಲು ದೇಶದಲ್ಲೇ ಮೊದಲ ಬಾರಿಗೆ ಸಂಚಾರಿ ಕಾವೇರಿ ಯೋಜನೆ ಜಾರಿಗೊಳಿಸಲಾಗಿದೆ ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ತಿಳಿಸಿದರು. ವಿಧಾನಸೌಧದ ಆವರಣದಲ್ಲಿ ಶುಕ್ರವಾರ ನಡೆದ ಸರ್ವರಿಗೂ ಸಂಚಾರಿ ಕಾವೇರಿ, ಮನೆ ಬಾಗಿಲಿಗೆ ಸರಳ ಕಾವೇರಿ ಯೋಜನೆಗೆ ಬೆಂಗಳೂರು ನಗರಾಭಿವೃದ್ಧಿ ಸಚಿವರೂ ಆದ ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಚಾಲನೆ ನೀಡಿ ಮಾತನಾಡಿದರು. ಸುಮಾರು 3 ಸಾವಿರ ಕೊಳವೆ ಬಾವಿ ಕೊರೆಸಿ, ಟ್ಯಾಂಕರ್ ಗಳನ್ನು ಇಟ್ಟುಕೊಂಡು 3 ಸಾವಿರ ರೂಪಾಯಿವರೆಗೂ ಹಣ ವಸೂಲಿ ಮಾಡುವ ಪ್ರವೃತ್ತಿ ಹೊಂದಿದ್ದಾರೆ. ಇಂದು ಈ ಯೋಜನೆ ಮೂಲಕ 4 ಸಾವಿರ ಲೀಟರ್ ನೀರಿಗೆ 660 ರೂ. ಹಾಗೂ 6 ಸಾವಿರ ಲೀಟರ್ ನೀರಿಗೆ 740 ರೂ. ದರ ನಿಗದಿ ಮಾಡಲಾಗಿದೆ. ಇದು ಕೊಳವೆ ಬಾವಿ ನೀರಲ್ಲ. ಇದು ಬಿಡಬ್ಲ್ಯೂಎಸ್ಎಸ್‌ಬಿ ವತಿಯಿಂದ ನೀಡುತ್ತಿರುವ ಶುದ್ಧ ಕುಡಿಯುವ ನೀರು ಎಂದು ತಿಳಿಸಿದರು.

ನೀರಿನ ಮಾಫಿಯಾ ತಡೆಯಲು ಈ ಯೋಜನೆ ಚಾಲನೆ ನೀಡಲಾಗಿದೆ. ಇದು ಸಣ್ಣ ಯೋಜನೆಯಲ್ಲ. ಕಳೆದ ವರ್ಷ ಬರಗಾಲದಲ್ಲಿ ನೀರಿನ ಅಭಾವ ಎದುರಾದಾಗ ಪರಿಸ್ಥಿತಿಯನ್ನು ಅತ್ಯುತ್ತಮವಾಗಿ ನಿಭಾಯಿಸಲಾಯಿತು. ಕೆರೆಗಳನ್ನು ತುಂಬಿಸಿ, ಅಂತರ್ಜಲ ಹೆಚ್ಚಿಸಲು ಅಗತ್ಯ ಕ್ರಮ ಕೈಗೊಳ್ಳಲು ತೀರ್ಮಾನಿಸಿದ್ದೇವೆ. ಇತ್ತೀಚೆಗೆ ಸಿಎಂ ನೇತೃತ್ವದಲ್ಲಿ ಕೆರೆಗಳ ಅಭಿವೃದ್ಧಿ ಸಭೆ ಮಾಡಲಾಗಿದೆ. ಸಣ್ಣ ಮನೆಗಳಿಗೆ ನೀರಿನ ಸಂಪರ್ಕ ನೀಡಲು ಕೇವಲ 1 ಸಾವಿರ ಶುಲ್ಕ ಪಡೆಯಲು ತೀರ್ಮಾನಿಸಿದ್ದೇವೆ. ಅಪಾರ್ಟ್‌ಮೆಂಟ್‌ನವರಿಗೆ ಆರಂಭದಲ್ಲಿ 20% ಹಣ ಪಡೆದು ನಂತರ ಒಂದು ವರ್ಷ ಕಾಲಾವಕಾಶ ನೀಡಲು ಮುಂದಾಗಿದ್ದೇವೆ. ಹೀಗೆ ಹೊಸ ನೀತಿಗಳ ಮೂಲಕ ಎಲ್ಲವನ್ನು ಒಂದು ವ್ಯವಸ್ಥೆಯಲ್ಲಿ ತರುವ ಪ್ರಯತ್ನ ಮಾಡಲಾಗುತ್ತಿದೆ ಎಂದು ತಿಳಿಸಿದರು.

ಬೆಂಗಳೂರಿಗೆ ಸಂಬಂಧಿಸಿದ ವಿವಿಧ ಅಭಿವೃದ್ಧಿ ಕೆಲಸಗಳ ವಿಚಾರವಾಗಿ ಕೇಂದ್ರ ಸಚಿವರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದೇನೆ. ಇಂದು ಸರ್ವರಿಗೂ ಸರಳ ಕಾವೇರಿ, ಮನೆ ಬಾಗಿಲಿಗೆ ಸಂಚಾರಿ ಕಾವೇರಿ ಯೋಜನೆಗಳನ್ನು ಪ್ರಾರಂಭಿಸಿದ್ದು, ದೇಶದಲ್ಲೇ ಮೊದಲ ಬಾರಿಗೆ ಬೆಂಗಳೂರಿನಲ್ಲಿ ಇಂತಹ ಯೋಜನೆ ಜಾರಿಗೆ ತರಲಾಗಿದೆ. ನಿನ್ನೆ ನೆಲಮಂಗಲದಲ್ಲಿ ರೂ.1,900 ಕೋಟಿ ವೆಚ್ಚದಲ್ಲಿ ವೃಷಭಾವತಿ ನೀರನ್ನು ಸಂಸ್ಕರಿಸಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಕೆರೆಗಳನ್ನು ತುಂಬಿಸುವ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದೆ. ಪ್ರತಿ ನೀರಿನ ಹನಿಯು ಮಹತ್ವದ್ದಾಗಿದೆ. ಅನೇಕರು ಇದನ್ನು ಟೀಕೆ ಮಾಡಬಹುದು. ಆದರೆ ಇಂತಹ ಯೋಜನೆ ಇದೇ ಮೊದಲಲ್ಲ. ದೆಹಲಿಯಲ್ಲೂ ಯಮುನಾ ನದಿ ನೀರನ್ನು ಗಿಡ ಬೆಳೆಸಲು, ವಾಹನ ತೊಳೆಯಲು ಹಾಗೂ ಕೈಗಾರಿಕೆಗೆ ಪೂರೈಸುತ್ತಾರೆ ಎಂದರು.




ಕೊಳಚೆನೀರಿನ ವಿಚಾರಕ್ಕೆ ಸಂಬಂಧಿಸಿದಂತೆ ನಾನು ಪ್ರತ್ಯೇಕವಾಗಿ ಸಭೆ ಮಾಡಿ ಇದನ್ನು ಸರಿಪಡಿಸಲು ಕ್ರಮ ಕೈಗೊಳ್ಳಲಾಗುವುದು. ಈ ನೀರನ್ನು ಸಂಸ್ಕರಿಸಲು ಕೇಂದ್ರ ಸರ್ಕಾರ ಹಾಗೂ ವಿಶ್ವಬ್ಯಾಂಕ್ ನೆರವು ಪಡೆಯಲಾಗುವುದು. ಇನ್ನು ಕಸ ವಿಲೇವಾರಿ ವಿಚಾರವಾಗಿ ಕೆಲವರು ಮಾಫಿಯಾ ಮಾಡಿಕೊಂಡಿದ್ದರು. ನಾವು ತನಿಖೆ ಮಾಡಿಸಿದ್ದೇವೆ. ನ್ಯಾಯಾಲಯ ಈಗ ನಮಗೆ ಟೆಂಡರ್ ಕರೆಯಲು ಅವಕಾಶ ನೀಡಿದೆ. ಬೆಂಗಳೂರಿನ ಅಭಿವೃದ್ಧಿಗೆ ಕಸ ವಿಲೇವಾರಿ, ಕೊಳಚೆನೀರು, ಕುಡಿಯುವ ನೀರು, ವಿದ್ಯುತ್, ಸಂಚಾರ ಕ್ಷೇತ್ರಗಳ ಬಗ್ಗೆ ಅಗತ್ಯ ಯೋಜನೆಗಳನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ಬಿಡಬ್ಲ್ಯೂಎಸ್ಎಸ್‌ಬಿ ವತಿಯಿಂದ ಇತ್ತೀಚೆಗೆ ಸ್ಯಾಂಕಿ ಕೆರೆಯಲ್ಲಿ ಕಾವೇರಿ ಆರತಿ ಕಾರ್ಯಕ್ರಮವನ್ನು ಯಶಸ್ವಿಯಾಗಿ ಮಾಡಲಾಗಿದೆ. ಈಗ ಕರ್ನಾಟಕ ಸರ್ಕಾರ ಕೆಆರ್‌ಎಸ್ ಬಳಿ ಕಾವೇರಿ ಆರತಿ ಕಾರ್ಯಕ್ರಮ ಮಾಡಲು ನೀರಾವರಿ ಇಲಾಖೆಯಿಂದ ಸುಮಾರು 100 ಕೋಟಿ ಮೀಸಲಿಡಲಾಗಿದೆ. ಪ್ರವಾಸೋದ್ಯಮ, ಧಾರ್ಮಿಕ ದತ್ತಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳನ್ನು ಒಳಪಡಿಕೊಳ್ಳಲಾಗಿದೆ. ಇದಕ್ಕಾಗಿ ಸಮಿತಿ ಮಾಡಿ ರಾಮ್ ಪ್ರಸಾತ್ ಮನೋಹರ್ ಅವರ ಅಧ್ಯಕ್ಷರನ್ನಾಗಿ ಮಾಡಲಾಗಿದೆ. ದಸರಾ ವೇಳೆಗೆ ಕಾವೇರಿ ಆರತಿ ಮಾಡಲು ಸಿದ್ಧತೆ ಮಾಡಲಾಗುತ್ತಿದೆ ಎಂದರು. ಕೊಡಗಿನಿಂದ ಹಿಡಿದು ರಾಜ್ಯದ ಎಲ್ಲಾ ಭಾಗಗಳ ಸಂಸ್ಕೃತಿ ಸೇರಿಸಿ ವಾರದಲ್ಲಿ ಮೂರು ದಿನ ಪೂಜೆ ಸಲ್ಲಿಸಬೇಕು, ಬರುವ ಪ್ರವಾಸಿಗರು ಪೂಜೆ ಸಲ್ಲಿಸಲು ಅವಕಾಶ ಕಲ್ಪಿಸಿಕೊಡಲಾಗುವುದು. ಕಾವೇರಿ ಹಾಗೂ ನೀರಿನ ಮಹತ್ವ ಎಲ್ಲರಿಗೂ ಅರಿವಾಗಲಿ ಎಂದು ಈ ಕಾರ್ಯಕ್ರಮ ರೂಪಿಸಲಾಗಿದೆ. ಇದಕ್ಕಾಗಿ ಟೆಂಡರ್ ಕರೆಯಲಾಗಿದ್ದು, ಇಲಾಖೆಗಳಿಗೆ ಸೂಕ್ತ ಜವಾಬ್ದಾರಿ ನೀಡಲಾಗುವುದು ಎಂದು ಹೇಳಿದರು.

## ಸೂಕ್ಷ್ಮ ಚಟುವಟಿಕೆಗಳ ಮೇಲೆ ತೀವ್ರ ನಿಗಾಕ್ಕೆ ಗೃಹ ಸಚಿವರ ಆದೇಶ

**ಬೆಂಗಳೂರು, ಮೇ 9–** ಭಯೋತ್ಪಾದನೆಗೆ ಸಂಬಂಧಪಟ್ಟಂತೆ ಸ್ಲೀಪರ್ ಸೆಲ್‌ಗಳು ಸೇರಿದಂತೆ ಇತರ ಸೂಕ್ಷ್ಮ ಚಟುವಟಿಕೆಗಳ ಮೇಲೆ ನಿಗಾ ವಹಿಸಲು ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಗೃಹಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರದಿಂದ ಹೊಸದಾಗಿ ಯಾವುದೇ ಸಲಹೆ, ಸೂಚನೆ ಹಾಗೂ ಎಚ್ಚರಿಕೆಗಳು ಬಂದಿಲ್ಲ. ಗೃಹ ಇಲಾಖೆಯು ಆರಂಭ ದಿಂದಲೂ ರಾಜ್ಯದಲ್ಲಿ ಜಿಲ್ಲಾ ಪೊಲೀಸ್ ಮುಖ್ಯಾಧಿಕಾರಿಗಳಿಗೆ ಎಚ್ಚರಿಕೆಯಿಂದಿರಲು ತಾಕೀತು ಮಾಡಿದೆ. ಗುಪ್ತದಳದ ಮಾಹಿತಿಯನ್ನು ನಿಖರವಾಗಿ ಕಲೆ ಹಾಕಬೇಕು. ಬೆಂಗಳೂರಿನಲ್ಲಿ ಸ್ಲೀಪರ್ ಸೆಲ್‌ಗಳಿದ್ದರೆ ಅದನ್ನು ಪತ್ತೆ ಹಚ್ಚಿ ಕೇಂದ್ರ ತನಿಖಾ ಸಂಸ್ಥೆಗಳ ಜೊತೆ ಮಾಹಿತಿ ಹಂಚಿಕೊಳ್ಳಬೇಕು ಎಂದು ಸೂಚಿಸಲಾಗಿದೆ ಎಂದರು. ಈಗಾಗಲೇ ಅಣೆಕಟ್ಟು, ಬೃಹತ್ ಕೈಗಾರಿಕೆಗಳು, ಪ್ರತಿಷ್ಠಿತ ಸಂಸ್ಥೆಗಳು, ವಿದ್ಯುತ್ ಉತ್ಪಾದನಾ ಕೇಂದ್ರಗಳಿಗೆ ಭದ್ರತೆ ಒದಗಿಸಲಾಗಿದೆ ಎಂದರು.

# ಸುಹಾಸ್ ಹತ್ಯೆ ರಾಜ್ಯ ಸರ್ಕಾರದಿಂದ ನಿಷ್ಪಕ್ಷಪಾತ ತನಿಖೆ ಆಗುತ್ತಿಲ್ಲ




**ಬೆಂಗಳೂರು, ಮೇ 9:** ಸುಹಾಸ್ ಹತ್ಯೆ ಪ್ರಕರಣದ ಎನ್‌ಐಎ ತನಿಖೆ ಆಗಬೇಕು; ಈ ವಿಷಯದಲ್ಲಿ ರಾಜ್ಯಪಾಲರು ರಾಜ್ಯ ಸರಕಾರಕ್ಕೆ ಆಗ್ರಹಿಸಿ ಆದೇಶ ಮಾಡಿಸಲು ವಿನಂತಿಸಿದ್ದೇವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ರಾಜ್ಯಪಾಲರ ಭೇಟಿ ಬಳಿಕ ಸುದ್ದಿಗಾರರ ಜೊತೆ ಮಾತನಾಡಿದ ಅವರು, ಸುಹಾಸ್ ಹತ್ಯೆ ವಿಷಯದಲ್ಲಿ ನಿಷ್ಪಕ್ಷಪಾತ ತನಿಖೆಯ ನಿರೀಕ್ಷೆ ಹುಸಿಯಾಗಿದೆ. ಆದ್ದರಿಂದ ರಾಜ್ಯಪಾಲರನ್ನು ಭೇಟಿ ಮಾಡಿದ್ದೇವೆ. ಪ್ರಕರಣದಲ್ಲಿ ವಿದೇಶಿ ಹಣದ ಹರಿವಿನ ಚರ್ಚೆ ನಡೆಯುತ್ತಿದೆ. ಪಿಎಫ್‌ಐ ನಂಟು ಕೂಡ ಕಾಣುತ್ತಿದೆ ಎಂದರು.

ಸುಹಾಸ್ ಹತ್ಯೆ ಸಂದರ್ಭದಲ್ಲಿ ಬಿಜೆಪಿಯಿಂದ ಮಂಗಳೂರು ಚಲೋ ಮಾಡಲು ತೀರ್ಮಾನ ಮಾಡಿದ್ದೆವು. ಆಪರೇಷನ್ ಸಿಂಧೂರ ಪ್ರಾರಂಭವಾದ ಸಂದರ್ಭದಲ್ಲಿ ಶಾಂತಿ ಕಾಪಾಡಲು ಮತ್ತು ದೇಶದ ಜೊತೆ ನಿಲ್ಲಬೇಕೆಂದು ಹಾಗೇ ಇದ್ದೆವು. ಆದರೆ, ಸುಹಾಸ್ ಹತ್ಯೆ ಆದ ನಂತರದಲ್ಲಿ ನಡೆಯುತ್ತಿರುವ ತನಿಖೆಯು ಅನುಮಾನಕ್ಕೆ ಆಸ್ಪದ ಮಾಡಿಕೊಟ್ಟಿದೆ ಎಂದು ಟೀಕಿಸಿದರು.

ಈಚೆಗೆ ಮಂಗಳೂರಿನಲ್ಲಿ ಕೊಲೆಯಾದ ಸುಹಾಸ್ ಶೆಟ್ಟಿ ಅವರ ತಾಯಿ, ತಂದೆ ಮತ್ತು ಮಾವನ ಜೊತೆ ಸೇರಿ ಬಿಜೆಪಿ ಶಾಸಕರು, ಪ್ರಮುಖರ ನಿಯೋಗವು ರಾಜ್ಯಪಾಲರನ್ನು ಭೇಟಿ ಮಾಡಿದೆ ಎಂದು ವಿವರಿಸಿದರು. ಅನೇಕ ಕಾರುಗಳನ್ನು ಬಳಸಿದ್ದರೂ ಒಂದೆರಡು ಕಾರನ್ನಷ್ಟೇ ವಶಕ್ಕೆ ಪಡೆದಿದ್ದಾರೆ. ಕೇವಲ 10 ಜನರನ್ನಷ್ಟೆ ಬಂಧಿಸಿದ್ದಾರೆ. ಇನ್ನೂ 15– 20 ಜನರು ಇದರ ಹಿಂದಿರುವ ಮಾಹಿತಿ ಸಿಗುತ್ತಿದೆ. ಕೊಲೆಗಾರರಿಗೆ ರಕ್ಷಣೆ ಕೊಡುವ ಕೆಲಸ ಮಾಡಿದ್ದ ಮಹಿಳೆಯರನ್ನು ಬಂಧಿಸಿಲ್ಲ; ಹೊರದೇಶ ದಿಂದಲೂ ಹಣ ಬಂದ ಮಾಹಿತಿ ಸಿಗುತ್ತಿದೆ ಎಂದು ತಿಳಿಸಿದರು. ಕೊಲೆಯಲ್ಲಿ ಭಾಗಿ ಆದವರಿಗೆ ಪಿಎಫ್‌ಐ ಜೊತೆ ಮಾಹಿತಿ ಇರುವ ವಿಷಯ ಹೊರಬರುತ್ತಿದೆ. ಇದರ ಜೊತೆಗೇ ಬೇರೆ ಇಬ್ಬರು, ಮೂವರು ಹಿಂದೂ ಕಾರ್ಯಕರ್ತರಿಗೆ ಸಹ ?ಸುಹಾಸ್ ಅವರ ಮರ್ಡರ್ ಮಾಡಿದ್ದೇವೆ. ಮುಂದಿನ ಗುರಿ ನೀವು? ಎಂಬ ಬೆದರಿಕೆಯನ್ನೂ ಹಾಕಲಾಗುತ್ತಿದೆ ಎಂದು ಗಮನ ಸೆಳೆದರು.

ಫಾಝಿಲ್ ಅವರ ಕುಟುಂಬದವರು ಇದರಲ್ಲಿ ಇಲ್ಲ ಎಂದು ಸ್ಪೀಕರ್ ಅವರ ಹೇಳಿಕೆಯು ಪರೋಕ್ಷವಾಗಿ ರಕ್ಷಣೆ ಕೊಡುವಂತಿದೆ. ಗೃಹ ಸಚಿವ ಪರಮೇಶ್ವರ್ ಅವರು, ತನಿಖೆ ಪ್ರಾರಂಭಕ್ಕೂ ಮೊದಲು ಎನ್‌ಐಎಗೆ ಕೊಡಲು ಸಾಧ್ಯ ಇಲ್ಲ ಎಂದು ಹೇಳಿಕೆ ಕೊಟ್ಟಿದ್ದಾರೆ. ಈ ಹೇಳಿಕೆಗಳಿಂದ ಅಲ್ಲಿನ ಪೊಲೀಸರು ಯಾವ ರೀತಿ ಪ್ರಾಮಾಣಿಕವಾಗಿ ತನಿಖೆ ಮಾಡಲು ಸಾಧ್ಯವಿದೆ ಎಂದು ಪ್ರಶ್ನಿಸಿದರು. ಇನ್ನುಳಿದ ಹಿಂದೂ ಕಾರ್ಯಕರ್ತರಿಗೆ ಯಾವ ರೀತಿ ರಕ್ಷಣೆ ನಿರೀಕ್ಷಿಸಲು ಸಾಧ್ಯ ಎಂದು ಕೇಳಿದರು.

ಸ್ಥಳೀಯ ಕಾಂಗ್ರೆಸ್ ನಾಯಕರು ಆ ಕುಟುಂಬವನ್ನು ಮಾತನಾಡಿಸುವ ಕೆಲಸ ಮಾಡಿಲ್ಲ. ಮಂಗಳೂರಿಗೆ ಬಂದಿದ್ದ ಗೃಹ ಸಚಿವರು, ಅಲ್ಪಸಂಖ್ಯಾತ ಮುಖಂಡರು ಅವರನ್ನು ತರಾಟೆಗೆ ತೆಗೆದುಕೊಂಡಿದ್ದರು. ಅವರು ಹೊರಕ್ಕೆ ಹ ೦ ೕ ಗ ೦ ಲ ೂ ಬಿಡುವುದಿಲ್ಲ; ಗೃಹ ಸಚಿವರನ್ನು ತಡೆಯುವ ಕೆಲಸವನ್ನೂ ಮಾಡಿದ್ದಾರೆ ಎಂದರು. ಸುಹಾಸ್ ಅವರ ಹತ್ಯೆಯಲ್ಲಿ ಬಿಜೆಪಿ ರಾಜಕಾರಣ ಮಾಡುತ್ತಿಲ್ಲ; ಆದರೆ, ಬೆದರಿಕೆ ಬಂದ ಉಳಿದ ಹಿಂದೂ ಕಾರ್ಯಕರ್ತರಿಗೆ ರಕ್ಷಣೆ ಕೊಡಬೇಕಿದೆ ಎಂದು ಆಗ್ರಹಿಸಿದರು.

ಸುಹಾಸ್ ತಾಯಿ ಸುಲೋಚನಾ ಶೆಟ್ಟಿ, ಮಾವ ರಾಜೇಶ್ ಭಂಡಾರಿ, ವಿರೋಧ ಪಕ್ಷದ ನಾಯಕ ಆರ್. ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಮತ್ತು ಶಾಸಕ ವಿ. ಸುನೀಲ್ ಕುಮಾರ್, ವಿಧಾನಸಭೆಯ ವಿಪಕ್ಷ ಮುಖ್ಯ ಸಚೇತಕ ದೊಡ್ಡನಗೌಡ ಹೆಚ್. ಪಾಟೀಲ್, ವಿಧಾನಪರಿಷತ್ ವಿಪಕ್ಷ ಮುಖ್ಯ ಸಚೇತಕ ಎನ್. ರವಿಕುಮಾರ್, ಶಾಸಕರು, ವಿಧಾನಪರಿಷತ್ ಸದಸ್ಯರು ಮತ್ತು ಪಕ್ಷದ ಮುಖಂಡರು ಇದ್ದರು.

# ಸುಹಾಸ್ ಶೆಟ್ಟಿ ಕೊಲೆ ಪ್ರಕರಣ ಎನ್‌ಐಎಗೆ ವಹಿಸಲು ರಾಜ್ಯಪಾಲರಿಗೆ ಬಿಜೆಪಿ ಮನವಿ

**ಕರಾವಳಿ ಭಾಗಕ್ಕೆ ಪಾಕಿಸ್ತಾನದ ಸಂಪರ್ಕವಿದೆ**

**ಇಂಥವರ ವಿಚಾರದಲ್ಲಿ ಕಾಂಗ್ರೆಸ್ ಸರ್ಕಾರ ಮೃದು ಧೋರಣೆ ತಾಳಿದೆ, ಸರ್ಕಾರದ ಮೇಲೆ ವಿಶ್ವಾಸವಿಲ್ಲ ಪ್ರತಿಪಕ್ಷ ನಾಯಕ ಆರ್.ಅಶೋಕ್**



**ಬೆಂಗಳೂರು, ಮೇ 9:** ಸುಹಾಸ್ ಶೆಟ್ಟಿ ಕೊಲೆ ಪ್ರಕರಣದ ತನಿಖೆ ಮಾಡುತ್ತಿರುವ ಕಾಂಗ್ರೆಸ್ ಸರ್ಕಾರದ ಮೇಲೆ ನಮಗೆ ವಿಶ್ವಾಸವಿಲ್ಲ. ಆದ್ದರಿಂದ ಇದನ್ನು ಎನ್‌ಐಎಗೆ ವಹಿಸಲು ರಾಜ್ಯಪಾಲರಿಗೆ ಕೋರಲಾಗಿದೆ ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ತಿಳಿಸಿದರು.

ಬಿಜೆಪಿಯ ಪ್ರಮುಖರೊಂದಿಗೆ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತ್ ಅವರನ್ನು ರಾಜಭವನದಲ್ಲಿ ಭೇಟಿಮಾಡಿ ಮನವಿ ಸಲ್ಲಿಸಿದ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು. ರಾಜ್ಯಪಾಲರಿಗೆ ಹಿಂದೂ ಸಂಘಟನೆಯ ಕಾರ್ಯಕರ್ತ ಸುಹಾಸ್ ಶೆಟ್ಟಿಯ ಕೊಲೆಯ ಬಗ್ಗೆ ವಿವರಿಸಲಾಗಿದೆ.

ಇದು ಅಂತಾರಾಷ್ಟ್ರೀಯ ಮಟ್ಟದಲ್ಲಿ ಸುಪಾರಿ ನೀಡಿರುವ ಪ್ರಕರಣ. ಮುಸ್ಲಿಂ ಹುಡುಗನ ಕೊಲೆಯಾಗಿದ್ದಕ್ಕೆ ಆ ಕುಟುಂಬಕ್ಕೆ ಕಾಂಗ್ರೆಸ್ 25 ಲಕ್ಷ ರೂ. ಪರಿಹಾರ ನೀಡಿದ್ದು, ಆ ಹಣವನ್ನು ಬಳಸಿಯೇ ಸುಪಾರಿ ನೀಡಲಾಗಿದೆ. ಸ್ಪೀಕರ್ ಯು.ಟಿ.ಖಾದರ್ ಅವರು ಆ ಕುಟುಂಬದವರು ಒಳ್ಳೆಯವರು ಎಂದು ಹೇಳಿದ್ದಾರೆ. ಆ ಮನೆಯವರೇ ಸುಪಾರಿ ನೀಡಿದ್ದಾರೆ ಎಂದು ಪೊಲೀಸ್ ಆಯುಕ್ತರು ಹೇಳಿದ್ದಾರೆ. ಸ್ಪೀಕರ್ ಆಗಿ ಕೊಲೆ ಪ್ರಕರಣದ ಬಗ್ಗೆ ಮಾತನಾಡುವ ಅಗತ್ಯವೇನಿದೆ ಯಾವುದೇ ಸ್ಪೀಕರ್ ಕೊಲೆ ಬಗ್ಗೆ ಮಾತನಾಡಿದ ಇತಿಹಾಸವೇ ಇಲ್ಲ ಎಂದರು. ಕಾಂಗ್ರೆಸ್ ಸರ್ಕಾರ ಇಂತಹವರ ವಿಚಾರದಲ್ಲಿ ಮೃದು ಧೋರಣೆ ತಾಳಿದೆ. ಈ ಪ್ರಕರಣದ ತನಿಖೆಯಲ್ಲಿ ನಮಗೆ ವಿಶ್ವಾಸವಿಲ್ಲ. ಪಾಕಿಸ್ತಾನ ಜಿಂದಾಬಾದ್ ಘೋಷಣೆಗೆ, ಭಯೋತ್ಪಾದನೆ ಚಟುವಟಿಕೆಗೆ ಪ್ರೇರಣೆ ಕೊಡುವವರ ಸಂಪರ್ಕ ಇವರಿಗಿದೆ. ಕರಾವಳಿ ಭಾಗಕ್ಕೆ ಪಾಕಿಸ್ತಾನದ ಸಂಪರ್ಕವಿದೆ. ಪಾಕಿಸ್ತಾನ ಜಿಂದಾಬಾದ್ ಎಂದು ಹೇಳುವವರಿಗೆ ಆಪರೇಶನ್ ಸಿಂಧೂರದಂತೆಯೇ ಶಾಸ್ತಿ ಆಗಬೇಕಿದೆ. ಇದಕ್ಕೆ ಅಂತ್ಯ ಕಾಣಿಸಬೇಕಿದೆ. ಇದಕ್ಕಾಗಿ ಪ್ರಕರಣವನ್ನು ಎನ್‌ಐಎ ಗೆ ವಹಿಸಬೇಕು ಎಂದು ರಾಜ್ಯಪಾಲರಿಗೆ ಕೋರಲಾಗಿದೆ ಎಂದು ತಿಳಿಸಿದರು.

# ಪಾಕ್‌ಗೆ ತಕ್ಕ ಪಾಠ ಕಲಿಸುತ್ತಿರುವ ರಕ್ಷಣಾ ಇಲಾಖೆ ಪರಾಕ್ರಮಕ್ಕೆ ಕೋಟ ಶ್ಲಾಘನೆ




**ಬೆಂಗಳೂರು, ಮೇ 9:** ಭಾರತ ದೇಶಕ್ಕೆ ಯಾವುದೇ ಭಯೋತ್ಪಾದಕರು ತಲೆಹಾಕಬಾರದು ಎಂದು ಪಾಕಿಸ್ತಾನಕ್ಕೆ ತಕ್ಕ ಪಾಠವನ್ನು ನಮ್ಮ ರಕ್ಷಣಾ ಇಲಾಖೆ ಮಾಡುತ್ತದೆ ಎಂಬ ವಿಶ್ವಾಸವನ್ನು ದೇಶದ ಪ್ರತಿಯೊಬ್ಬ ಪ್ರಜೆಗಳು ಹೊಂದಿದ್ದಾರೆ ಎಂದು ಸಂಸದ ಮತ್ತು ಮಾಜಿ ಸಚಿವ ಕೋಟ ಶ್ರೀನಿವಾಸ ಪೂಜಾರಿ ತಿಳಿಸಿದರು. ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಪಾಕಿಸ್ತಾನದ ಉಗ್ರಗಾಮಿಗಳನ್ನು ಮಟ್ಟಹಾಕಲು ಮತ್ತು ಪಾಕಿಸ್ತಾನಕ್ಕೆ ಕಟ್ಟೆಚ್ಚರ ನೀಡಲು ಭಾರತವು ಅಪರೇಷನ್ ಸಿಂದೂರ ನಡೆಸುತ್ತಿದೆ ಎಂದು ತಿಳಿಸಿದರು. ಭಾರತದ ಈಗಿನ ಪರಿಸ್ಥಿತಿಯಲ್ಲಿ ನಾವು ಯಾವುದೇ ಪಕ್ಷ, ಧರ್ಮಮೀರಿ ಒಟ್ಟಾಗಿ ಭಾರತದ ಸೇನಾ ಕಾರ್ಯಾಚರಣೆಗೆ ಬೆಂಬಲ ನೀಡಿ ಪಾಕಿಸ್ತಾನಕ್ಕೆ ಬುದ್ಧಿ ಕಲಿಸಬೇಕು ಎಂದು ಅವರು ಮನವಿ ಮಾಡಿದರು.

3 ಕಾರಣಕ್ಕಾಗಿ ಎನ್‌ಐಎ ತನಿಖೆಗೆ ಆಗ್ರಹ

3 ಪ್ರಮುಖ ಕಾರಣಗಳಿಗಾಗಿ ಸುಹಾಸ್ ಶೆಟ್ಟಿ ಅವರ ಕೊಲೆ ಪ್ರಕರಣವನ್ನು ಎನ್‌ಐಎ ತನಿಖೆಗೆ ಒಪ್ಪಿಸಬೇಕು ಎಂದು ಅವರು ಆಗ್ರಹಿಸಿದರು. ಈ ಹತ್ಯೆಯ ಹಿಂದೆ ಕೇರಳ ರಾಜ್ಯ ಸೇರಿದಂತೆ ಇತರ ರಾಜ್ಯದ ಕೆಲವು ಮಂದಿ ಪಾತ್ರ ವಹಿಸಿದ್ದಾರೆ. ಈ ಹತ್ಯೆಗೆ ವಿದೇಶದಿಂದ ಹಣ ಹರಿದುಬಂದ ಮಾಹಿತಿ ಇದೆ. ಅಲ್ಲದೇ, ಪೊಲೀಸ್ ಇಲಾಖೆಯ ಕೆಲವು ಅಧಿಕಾರಿಗಳು ಹತ್ಯೆ ಪ್ರಕರಣದಲ್ಲಿ ಶಾಮೀಲಾಗಿರುವ ಶಂಕೆ ಇದೆ. ಇವೆಲ್ಲ ವಿಚಾರಗಳನ್ನು ಮಾನ್ಯ ರಾಜ್ಯಪಾಲರ ಗಮನಕ್ಕೆ ತಂದಿದ್ದೇವೆ. ಎನ್‌ಐಎ ತನಿಖೆಗೆ ಕೋರಿದ್ದೇವೆ ಎಂದು ವಿವರಿಸಿದರು.

# ಸುಹಾಸ್ ಪ್ರಕರಣ ಎನ್‌ಐಎ ತನಿಖೆಗೆ ವಹಿಸಲು ಅಭ್ಯಂತರ ಇಲ್ಲ: ಯು.ಟಿ.ಖಾದರ್ ಸ್ಪಷ್ಟನೆ



ಮಂಗಳೂರು, ಮೇ 9: ಹಿಂದೂ ಕಾರ್ಯಕರ್ತ ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣ ತನಿಖೆಯನ್ನು ಎನ್‌ಐಎಗೆ ನೀಡಲು ನಮ್ಮದೇನು ಅಭ್ಯಂತರವಿಲ್ಲ ಎಂದು ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ಹೇಳಿದ್ದಾರೆ. ಸುಹಾಸ್ ಶೆಟ್ಟಿ ಹತ್ಯೆ ಪ್ರಕರಣದ ತನಿಖೆಯನ್ನು ಎನ್‌ಐಎಗೆ ನೀಡಬೇಕು ಎಂದು ಬಿಜೆಪಿ ಒತ್ತಾಯಿಸುತ್ತಿರುವ ಹಿನ್ನೆಲೆಯಲ್ಲಿ ಮಂಗಳೂರಿನಲ್ಲಿ ಮಾತನಾಡಿದ ಅವರು ಇವರ ಬೇಡಿಕೆಗಳಿಗೆ ಸರ್ಕಾರ ಸ್ಪಂದಿಸುವ ವಿಶ್ವಾಸವಿದೆ. ಈ ಕುರಿತು ಆಡಳಿತ ಪಕ್ಷ, ಪ್ರತಿಪಕ್ಷ ಇದೆ ಅವರವರು ಮಾತನಾಡಿಕೊಳ್ಳಲಿ ಎಂದು ಹೇಳಿದರು.

ಪ್ರಕರಣದ ತನಿಖೆಯನ್ನು ಎನ್‌ಐಎಗೆ ಕೊಡಲು ನಮ್ಮದೇನು ಅಭ್ಯಂತರವಿಲ್ಲ, ಯಾರು ತನಿಖೆ ಮಾಡಬೇಕೆಂದು ಸರ್ಕಾರ ತೀರ್ಮಾನಿಸಲಿ. ಪ್ರಕರಣದ ಆರೋಪಿಗಳ ಬಂಧನವಾಗಿದೆ. ಕೃತ್ಯ ಎಸಗಿದವರು ತಪ್ಪಿಸಿಕೊಳ್ಳದ ರೀತಿ ಪೊಲೀಸರು ಮಾಡಿದ್ದಾರೆ, ಆರೋಪಿಗಳಿಗೆ ಕಠಿಣ ಶಿಕ್ಷೆ ಆಗಬೇಕು. ಪೊಲೀಸರು ಈ ಬಗ್ಗೆ ಕ್ರಮ ವಹಿಸುತ್ತಾರೆ ಅಲ್ಲದೆ ಯಾರನ್ನು ಕೊಲ್ಲುವ ಅಧಿಕಾರ ಯಾರಿಗೂ ಇಲ್ಲ ಹಾಗಾಗಿ ಎಲ್ಲಾ ರೀತಿಯ ತನಿಖೆ ಮಾಡಬೇಕು. ಮುಂದೆ ಯಾರು ಸಹ ಈ ರೀತಿ ಕೃತ್ಯ ಎಸಗಬಾರದು, ಪೊಲೀಸರು ಸಹ ಸರಿಯಾದ ವರದಿಯನ್ನು ಸಲ್ಲಿಸಬೇಕು ಎಂದು ಹೇಳಿದರು.ತಪ್ಪು ಮಾಡಿದವರನ್ನು ಬೆಂಬಲಿಸುವ ವ್ಯಕ್ತಿ ನಾನಲ್ಲ. ಉದ್ವಿಗ್ನ ವಾತಾವರಣ ನಿಯಂತ್ರಿಸಲು ವಿಷಯ ಮುಚ್ಚಿಡದೆ ಸತ್ಯವನ್ನು ಹೇಳಿದ್ದೇನೆ. ನನಗೆ ಸಿಕ್ಕ ಮಾಹಿತಿಯನ್ನು ಹೇಳಿದ್ದೆ. ಕೊಟ್ಟ ಮಾಹಿತಿಯನ್ನು ಗೌಪ್ಯವಾಗಿ ಇಡದೆ ಜನರ ಮುಂದೆ ಇಟ್ಟಿದ್ದೆ. ಪೊಲೀಸರು ನಿರ್ದಾಕ್ಷಿಣ್ಯ ಕ್ರಮ ತೆಗೆದುಕೊಂಡಿದ್ದಾರೆ. ದೇವರು, ದೇವರಂತ ಕ್ಷೇತ್ರದ ಜನ, ಆಶೀರ್ವಾದ ಮಾಡುವ ಧಾರ್ಮಿಕ ಮುಖಂಡರು ನಮ್ಮ ಜೊತೆ ಇರುವಾಗ ಟೀಕೆ ಮಾಡುವವರ ಬಗ್ಗೆ ತಲೆ ಕೆಡಿಸಿಕೊಳ್ಳುವುದಿಲ್ಲ. ರಾಜಕೀಯವಾಗಿ ಇದನ್ನು ತೆಗೆದುಕೊಂಡು ಹೋಗುವುದು ಅವರ ವ್ಯಕ್ತಿತ್ವವನ್ನು ತೋರಿಸುತ್ತೆ. ನನ್ನ ಮೇಲೆ ನನಗೆ ವಿಶ್ವಾಸವಿದೆ. ಇಂತಹ ಆರೋಪ ಹೊಸತಲ್ಲ. ಎಲ್ಲರೂ ಸಹ ನಮ್ಮನ್ನು ಕಾರ್ಯಕ್ರಮಕ್ಕೆ ಆಹ್ವಾನಿಸುತ್ತಾರೆ. ಅವಕಾಶ ಸಿಕ್ಕಾಗ ನಾವು ಹೋಗುತ್ತೇವೆ. ಇವರು ಹೇಳುತ್ತಿರುವ ಕ್ರಿಕೆಟ್ ಪಂದ್ಯ ನನಗೆ ಹೋಗೊದಕ್ಕೆ ಆಗಿಲ್ಲ. ದಕ್ಷಿಣಕನ್ನಡ ಜಿಲ್ಲೆಯಲ್ಲಿ ಸೌಹಾರ್ದತೆಯ ವಾತವರಣ ನಿರ್ಮಾಣವಾಗಬೇಕು ಎಂಬುದು ನನ್ನ ಆಶಯ ಎಂದು ಹೇಳಿದರು.

# ಮರುಬಳಕೆ ಇಂಧನ ಸ್ಥಾವರಗಳನ್ನು ಆರಂಭಿಸುವ ಒಡಂಬಡಿಕೆಗೆ ಅಂಕಿತ

**ಬೆಂಗಳೂರು, ಮೇ 9:** ಸಾರ್ವಜನಿಕ ಸ್ವಾಮ್ಯದ ಭಾರತೀಯ ಅನಿಲ ಪ್ರಾಧಿಕಾರವು (ಗ್ಯಾಸ್ ಅಥಾರಿಟಿ ಆಫ್ ಇಂಡಿಯಾ ಲಿಮಿಟೆಡ್– ಜಿಎಐಎಲ್) ರಾಜ್ಯದಲ್ಲಿ ಮುಂದಿನ ಐದು ವರ್ಷಗಳಲ್ಲಿ 5,000 ಕೋಟಿ ರೂಪಾಯಿ ಹೂಡಿಕೆಯೊಂದಿಗೆ 1,000 ಮೆಗಾವಾಟ್ (1 ಗಿಗಾವಾಟ್) ಉತ್ಪಾದನಾ ಸಾಮರ್ಥ್ಯದ ಮರುಬಳಕೆ ಇಂಧನ ಸ್ಥಾವರಗಳನ್ನು ಆರಂಭಿಸುವ ಒಡಂಬಡಿಕೆಗೆ ಶುಕ್ರವಾರ ಅಂಕಿತ ಹಾಕಲಾಯಿತು. ವಿಧಾನಸೌಧದಲ್ಲಿ ನಡೆದ ಸಮಾರಂಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ ಬಿ ಪಾಟೀಲ, ಇಂಧನ ಸಚಿವ ಕೆ ಜೆ ಜಾರ್ಜ್, ಕ್ರೆಡಲ್ ಅಧ್ಯಕ್ಷ ಟಿ ಡಿ ರಾಜೇಗೌಡ ಅವರ ಸಮ್ಮುಖದಲ್ಲಿ ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿ ಸೆಲ್ವಕುಮಾರ್ ಮತ್ತು ಜಿಐಎಎಲ್ ಕಾರ್ಯಕಾರಿ ನಿರ್ದೇಶಕ ಪರಿವೇಶ್ ಛುಗ್ ಸಿಂಗ್ ಅವರು ಪರಸ್ಪರ ಒಪ್ಪಂದಕ್ಕೆ ಸಹಿ ಹಾಕಿದರು. ಈ ಸಂದರ್ಭದಲ್ಲಿ ಮಾತನಾಡಿದ ಸಚಿವ ಪಾಟೀಲರು, ಅನಿಲ ಪ್ರಾಧಿಕಾರವು ರೈತರಿಂದ ಜಮೀನನ್ನು ಭೋಗ್ಯಕ್ಕೆ ಪಡೆದುಕೊಂಡು ಯೋಜನೆ ಆರಂಭಿಸಬಹುದು. ಅಥವಾ ಕೆಐಎಡಿಬಿ ಮೂಲಕ ಬೇಕಾದರೂ ಅಗತ್ಯ ಜಮೀನು ಒದಗಿಸಲಾಗುವುದು. ಈ ಯೋಜನೆಗೆ ಅಗತ್ಯವಿರುವ ಭೂಮಿ, ಅನುಮತಿ, ಇತ್ಯಾದಿಗಳನ್ನು ತ್ವರಿತವಾಗಿ ಒದಗಿಸಲಾಗುವುದು. ಎಂದು ಭರವಸೆ ನೀಡಿದರು. ಮರುಬಳಕೆ ಇಂಧನ ಕ್ಷೇತ್ರದಲ್ಲಿ ಗರಿಷ್ಠ ಪ್ರಮಾಣದ ಹೂಡಿಕೆ ಆಗುವಂತೆ ನಾವು ನೋಡಿಕೊಳ್ಳಲಿದ್ದೇವೆ. ಇದು ರಾಜ್ಯದ ಕೈಗಾರಿಕಾ ಬೆಳವಣಿಗೆಗೆ ನಿರ್ಣಾಯಕವಾಗಿದೆ. ನಮ್ಮಲ್ಲಿರುವ ಕಾರ್ಯ ಪರಿಸರ, ಕೌಶಲ್ಯಪೂರ್ಣ ಮಾನವ ಸಂಪನ್ಮೂಲ ಮತ್ತು ಭೂಮಿಯ ಲಭ್ಯತೆಗಳಿಂದಾಗಿ ಪರಿಸರಸ್ನೇಹಿ ಇಂಧನ ಕ್ಷೇತ್ರದ ಹೂಡಿಕೆಗೆ ಕರ್ನಾಟಕವು ಪ್ರಶಸ್ತ ತಾಣವಾಗಿದೆ ಎಂದು ಅವರು ಒತ್ತಿ ನುಡಿದಿದ್ದಾರೆ. ಇಂಧನ ಸಚಿವ ಕೆ.ಜೆ. ಜಾರ್ಜ್ ಮಾತನಾಡಿ, ಅನಿಲ ಪ್ರಾಧಿಕಾರವು ರಾಜ್ಯ ಸರ್ಕಾರದ ಜತೆ ಈ ಮಹತ್ವದ ಒಡಂಬಡಿಕೆ ಮಾಡಿಕೊಂಡಿರುವುದು ಭಾರತದ ಪರಿಸರಸ್ನೇಹಿ ಇಂಧನ ವಲಯದ ಸಾಧನೆಗೆ ಮತ್ತಷ್ಟು ಬಲ ತಂದುಕೊಡಲಿದೆ. ಪಾವಗಡದಲ್ಲಿರುವ ಸೋಲಾರ್ ಪಾರ್ಕಿನಲ್ಲಿ ವರ್ಷಕ್ಕೆ 2,050 ಮೆಗಾವಾಟ್ ಸೌರ ಮತ್ತು ಪವನ ವಿದ್ಯುತ್ ಉತ್ಪಾದಿಸಲಾಗುತ್ತಿದೆ. ಅಲ್ಲಿನ ರೈತರು ಈ ಯೋಜನೆಗೆ ಇನ್ನೂ 10 ಸಾವಿರ ಎಕರೆ ಭೂಮಿ ಬಿಟ್ಟುಕೊಡಲು ಮುಂದೆ ಬಂದ ಮೇಲೆ ಈ ಯೋಜನೆಯನ್ನು ವಿಸ್ತರಿಸಲು ತೀರ್ಮಾನಿಸಲಾಗಿದೆ ಎಂದರು. ರಾಜ್ಯದಲ್ಲಿ ಇದರಿಂದ ಉದ್ಯೋಗ ಸೃಷ್ಟಿ ಮತ್ತು ಮೂಲಸೌಕರ್ಯ ಅಭಿವೃದ್ಧಿ ಎರಡೂ ಈಡೇರಲಿದೆ ಎಂದರು. ಇದು ಜಿಐಎಲ್ (ಗೈಲ್) ಜತೆಗಿನ ರಾಜ್ಯ ಸರ್ಕಾರದ ದೀರ್ಘಕಾಲೀನ ಬಾಂಧವ್ಯದ ಆರಂಭವಾಗಿದೆ. ಈ ಮೂಲಕ ರಾಜ್ಯದ ಆರ್ಥಿಕ ಅಭಿವೃದ್ಧಿ ಮತ್ತು ಹವಾಮಾನಕ್ಕೆ ಸಂಬಂಧಿಸಿದ ಗುರಿಗಳನ್ನು ಸಾಧಿಸಬಹುದು ಎಂದು ಅವರು ಅಭಿಪ್ರಾಯ ಪಟ್ಟರು. ಕೈಗಾರಿಕಾ ಇಲಾಖೆ ಆಯುಕ್ತೆ ಗುಂಜನ್ ಕೃಷ್ಣ, ಕೆಐಎಡಿಬಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಮಹೇಶ, ಗೇಲ್ ಕಾರ್ಯನಿರ್ವಾಹಕ ನಿರ್ದೇಶಕ (ಮಾರುಕಟ್ಟೆ) ಸುಮಿತ್ ಕಿಶೋರ, ಕ್ರೆಡೆಲ್ ವ್ಯವಸ್ಥಾಪಕ ನಿರ್ದೇಶಕ ರುದ್ರಪ್ಪಯ್ಯ ಸೇರಿದಂತೆ ಇತರರು ಉಪಸ್ಥಿತರಿದ್ದರು.

Managing Editor : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com
Published from: K10,A/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363

22 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 22 | ಸಂಚಿಕೆ 304 | ನವದೆಹಲಿ | ಬೆಲೆ ₹ 10 | ಮೇ 10, 2025 ಶನಿವಾರ

# ಪಂಜಾಬ್‌ನ ಫಿರೋಜ್‌ಪುರ ಜನವಸತಿ ಪ್ರದೇಶಕ್ಕೆ ಡ್ರೋನ್ ದಾಳಿ

**ನವದೆಹಲಿ, ಮೇ 9:** ಕಾಶ್ಮೀರದ ಬಾರಾಮುಲ್ಲಾದಿಂದ ಗುಜರಾತ್‌ನ ಭುಜ್‌ವರೆಗೆ ಅಂತರರಾಷ್ಟ್ರೀಯ ಗಡಿ ಮತ್ತು ಪಾಕಿಸ್ತಾನದ ನಿಯಂತ್ರಣ ರೇಖೆಯ ಉದ್ದಕ್ಕೂ 26 ಸ್ಥಳಗಳಲ್ಲಿ ಡ್ರೋನ್‌ಗಳು ಕಾಣಿಸಿಕೊಂಡಿವೆ. ವಿಷಾದಕರವೆಂದರೆ, ಮಧ್ಯರಾತ್ರಿ 12 ಗಂಟೆಗೆ ಫಿರೋಜ್ಪುರದ ನಾಗರಿಕ ಪ್ರದೇಶವನ್ನು ಗುರಿಯಾಗಿಸಿಕೊಂಡು ಶಸ್ತ್ರಸಜ್ಜಿತ ಡ್ರೋನ್ ದಾಳಿ ನಡೆಸಲಾಗಿದ್ದು, ಸ್ಥಳೀಯ ಕುಟುಂಬದ ಸದಸ್ಯರಿಗೆ ತೀವ್ರ ಗಾಯಗಳಾಗಿವೆ. ಗಾಯಾಳುಗಳಿಗೆ ವೈದ್ಯಕೀಯ ನೆರವು ನೀಡಲಾಗಿದೆ ಮತ್ತು ಪ್ರದೇಶವನ್ನು ಭದ್ರತಾ ಪಡೆಗಳು ಸ್ವಚ್ಛಗೊಳಿಸಿವೆ. ಬಾರಾಮುಲ್ಲಾ, ಶ್ರೀನಗರ, ಅವಂತಿಪೋರಾ, ನಾಗ್ರೋಟಾ, ಜಮ್ಮು, ಫಿರೋಜ್‌ಪುರ, ಪಠಾಣ್‌ಕೋಟ್, ಫಜಿಲ್ಕಾ, ಲಾಲ್ಗಢ್ ಜಟ್ಟಾ, ಜೈಸಲ್ಮೇರ್, ಬಾರ್ಮರ್, ಭುಜ್, ಕುವಾರ್ಬೆಟ್ ಮತ್ತು ಲಖಿ ನಾಲಾ ಸೇರಿದಂತೆ ಸ್ಥಳಗಳಲ್ಲಿ ನಾಗರಿಕ ಮತ್ತು ಮಿಲಿಟರಿ ಗುರಿಗಳಿಗೆ ಡ್ರೋನ್‌ಗಳು ಸಂಭಾವ್ಯ ಬೆದರಿಕೆಯನ್ನು ಒಡ್ಡುತ್ತಿವೆ. ಪಾಕಿಸ್ತಾನಿ ಡ್ರೋನ್‌ಗಳನ್ನು ನೋಡಿದ ವರದಿಗಳ ನಂತರ ರಾಜಸ್ಥಾನದ ಜೈಸಲ್ಮೇರ್‌ನಲ್ಲಿ ಬ್ಲ್ಯಾಕ್‌ಔಟ್ ಜಾರಿಗೊಳಿಸಲಾಗಿದೆ

ದುರದೃಷ್ಟವಶಾತ್, ಫಿರೋಜ್‌ಪುರದ ನಾಗರಿಕ ಪ್ರದೇಶವನ್ನು ಶಸ್ತ್ರಸಜ್ಜಿತ ಡ್ರೋನ್ ಗುರಿಯಾಗಿಸಿಕೊಂಡು ಸ್ಥಳೀಯ ಕುಟುಂಬದ ಸದಸ್ಯರಿಗೆ ತೀವ್ರ ಗಾಯಗಳಾಗಿವೆ. ಗಾಯಾಳುಗಳಿಗೆ ವೈದ್ಯಕೀಯ



ನೆರವು ನೀಡಲಾಗಿದೆ ಮತ್ತು ಪ್ರದೇಶವನ್ನು ಭದ್ರತಾ ಪಡೆಗಳು ಸ್ವಚ್ಛಗೊಳಿಸಿವೆ.

ಭಾರತೀಯ ಸಶಸ್ತ್ರ ಪಡೆಗಳು ಹೆಚ್ಚಿನ ಜಾಗರೂಕತೆಯನ್ನು ಕಾಯ್ದುಕೊಂಡಿವೆ ಮತ್ತು ಅಂತಹ ಎಲ್ಲಾ ವೈಮಾನಿಕ ಬೆದರಿಕೆಗಳನ್ನು ಪ್ರತಿ–ಡ್ರೋನ್ ವ್ಯವಸ್ಥೆಗಳನ್ನು ಬಳಸಿಕೊಂಡು ಪತ್ತೆಹಚ್ಚಲಾಗುತ್ತಿದೆ ಮತ್ತು ತೊಡಗಿಸಿಕೊಂಡಿವೆ. ಪರಿಸ್ಥಿತಿಯನ್ನು ನಿಕಟ ಮತ್ತು ನಿರಂತರ ಕಣ್ಗಾವಲಿನಲ್ಲಿ ಇರಿಸಲಾಗಿದೆ ಮತ್ತು ಅಗತ್ಯವಿರುವಲ್ಲೆಲ್ಲಾ ತ್ವರಿತ ಕ್ರಮ ಕೈಗೊಳ್ಳಲಾಗುತ್ತಿದೆ.

ಇಂದು ಸಂಜೆ ಆರಂಭದಲ್ಲಿ, ಶುಕ್ರವಾರ ಸಂಜೆ ನಿಯಂತ್ರಣ ರೇಖೆಯ ಉದ್ದಕ್ಕೂ ಉರಿ, ಪೂಂಚ್ ಮತ್ತು ಕುಪ್ವಾರಾ ಪ್ರದೇಶಗಳಲ್ಲಿ ತೀವ್ರವಾದ ಶೆಲ್ ದಾಳಿ ನಡೆಸಲಾಯಿತು, ಇದು ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಹೆಚ್ಚಾಗುತ್ತಲೇ ಇದ್ದು, ಪ್ರದೇಶದಾದ್ಯಂತ ಬ್ಲ್ಯಾಕ್‌ಔಟ್ ಮತ್ತು ಸೈರನ್ ಮೊಳಗಿಸಲಾಗಿದೆ. ಬಾರ್ಮರ್, ಪೋಖ್ರಾನ್, ಜೈಸಲ್ಮೇರ್, ಫಲೋಡಿಯಲ್ಲಿ ಭಾರತ ಪಾಕಿಸ್ತಾನಿ ಡ್ರೋನ್‌ಗಳನ್ನು ಹೊಡೆದುರುಳಿಸಿತು, ಆದರೆ ಜಮ್ಮು ವಿಭಾಗದ ಅಖ್ನೂರ್ ಸೇರಿದಂತೆ ಜಮ್ಮುವಿನ ಹಲವಾರು ಜಿಲ್ಲೆಗಳಲ್ಲಿ ಸಂಪೂರ್ಣ ಬ್ಲ್ಯಾಕ್‌ಔಟ್ ಜಾರಿಗೊಳಿಸಲಾಗಿದೆ ಮತ್ತು ಜಮ್ಮು, ರಾಜಸ್ಥಾನದ ಬಾರ್ಮರ್, ಪೋಖ್ರಾನ್ ಮತ್ತು ಜೈಸಲ್ಮೇರ್‌ನಲ್ಲಿ ಫಿರಂಗಿ ಗುಂಡಿನ ದಾಳಿ ಮತ್ತು ಸ್ಫೋಟಗಳ ನಂತರ ಸೈರನ್‌ಗಳು ಮೊಳಗಿದವು. ಪಂಜಾಬ್‌ನ ಹಲವಾರು ಭಾಗಗಳಲ್ಲಿ ಡ್ರೋನ್‌ಗಳು ಕಂಡುಬಂದಿವೆ. ಪಂಜಾಬ್‌ನ ಹಲವಾರು ಜಿಲ್ಲಾಡಳಿತಗಳು ರಾತ್ರಿಯ ಸಮಯದಲ್ಲಿ ಬ್ಲ್ಯಾಕ್‌ಔಟ್ ಜಾರಿಗೊಳಿಸಲು ಆದೇಶಗಳನ್ನು ಹೊರಡಿಸಿವೆ.

ರಾಜಸ್ಥಾನದ ಪೋಖ್ರಾನ್ ಮತ್ತು ಜೈಸಲ್ಮೇರ್ನಲ್ಲಿ, ಪಾಕಿಸ್ತಾನದ ಕಡೆಯಿಂದ 30 ನಿಮಿಷಗಳ ಅವಧಿಯಲ್ಲಿ ಎರಡು ಡ್ರೋನ್ ದಾಳಿಗಳು ನಡೆದಿವೆ. ಮೊದಲ ದಾಳಿ ರಾತ್ರಿ ಸುಮಾರು 8:28 ಕ್ಕೆ, ನಂತರ ಎರಡನೇ ದಾಳಿ ರಾತ್ರಿ 9:02 ಕ್ಕೆ ನಡೆಯಿತು.

ಅದೇ ರೀತಿ, ಬಾರ್ಮರ್ನಲ್ಲಿ ರಾತ್ರಿ 9:30 ರ ಸುಮಾರಿಗೆ ಎರಡು ಡ್ರೋನ್ ದಾಳಿಗಳು ವರದಿಯಾಗಿವೆ. ಒಂದು ಉತ್ತರಲಿಯಾ ವಾಯುನೆಲೆ ನಿಲ್ದಾಣದ ಬಳಿಯ ಪ್ರದೇಶವನ್ನು ಗುರಿಯಾಗಿಸಿಕೊಂಡಿದೆ ಎಂದು ವರದಿಯಾಗಿದೆ, ಆದರೆ ಇನ್ನೊಂದು ಜಸ್ಸಿ ಮಿಲಿಟರಿ ಕಂಟೋನ್ಮೆಂಟ್ ಬಳಿ ಸಂಭವಿಸಿದೆ.

ವರದಿಗಳ ಪ್ರಕಾರ, ಪಾಕಿಸ್ತಾನವು ಜಮ್ಮುವನ್ನು ಅಡ್ಡಾದಿಡ್ಡಿ ಯುದ್ಧಸಾಮಗ್ರಿಗಳೊಂದಿಗೆ ಗುರಿಯಾಗಿಸಿಕೊಂಡಿದೆ ಮತ್ತು ಭಾರತೀಯ ವಾಯು ರಕ್ಷಣಾ ಬಂದೂಕುಗಳು ಪ್ರತೀಕಾರವಾಗಿ ಗುಂಡು ಹಾರಿಸುತ್ತಿವೆ. ಡ್ರೋನ್ ದಾಳಿಯನ್ನು ತಟಸ್ಥಗೊಳಿಸಲು ವಾಯು ರಕ್ಷಣಾ ವ್ಯವಸ್ಥೆಯನ್ನು ಸಕ್ರಿಯಗೊಳಿಸಲಾಗಿದೆ.

ಇದಲ್ಲದೆ, ಪಾಕಿಸ್ತಾನಿ ಪಡೆಗಳು ಜಮ್ಮು ಮತ್ತು ಕಾಶ್ಮೀರದ ನಿಯಂತ್ರಣ ರೇಖೆಯ ಉದ್ದಕ್ಕೂ "ಹಲವಾರು ಕದನ ವಿರಾಮ ಉಲ್ಲಂಘನೆ"ಗಳನ್ನು ನಡೆಸಿವೆ ಮತ್ತು ಪ್ರತಿಯಾಗಿ "ಸೂಕ್ತ ಉತ್ತರ"ವನ್ನು ಪಡೆದಿವೆ. ಶುಕ್ರವಾರ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು ಉನ್ನತ ಮಿಲಿಟರಿ ನಾಯಕತ್ವದೊಂದಿಗೆ ರಾಷ್ಟ್ರೀಯ ಭದ್ರತೆಯ ಸಮಗ್ರ ಪರಿಶೀಲನೆ ನಡೆಸಿದರು ಮತ್ತು ಉನ್ನತ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿದರು. ದೆಹಲಿಯಲ್ಲಿ ಹೈ ಅಲರ್ಟ್ ಘೋಷಿಸಲಾಯಿತು ಮತ್ತು ಎಲ್ಲಾ ನಗರ ಸರ್ಕಾರಿ ನೌಕರರ ರಜೆಗಳನ್ನು ರದ್ದುಗೊಳಿಸಲಾಗಿದೆ. ಕೇಂದ್ರ ಸರ್ಕಾರವು ಭಾರತದಾದ್ಯಂತ 24 ವಿಮಾನ ನಿಲ್ದಾಣಗಳನ್ನು ಈ ಹಿಂದೆ ಮುಚ್ಚಿದ್ದನ್ನು ಮೇ 15 ರಂದು ಬೆಳಿಗ್ಗೆ 5:29 ರವರೆಗೆ ವಿಸ್ತರಿಸಿದೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ನಡುವೆ ಶುಕ್ರವಾರ ದೆಹಲಿ ವಿಮಾನ ನಿಲ್ದಾಣಕ್ಕೆ ಮತ್ತು ಅಲ್ಲಿಂದ ಹೊರಡುವ ಒಟ್ಟು 138 ವಿಮಾನಗಳನ್ನು ಹಲವಾರು ವಿಮಾನಯಾನ ಸಂಸ್ಥೆಗಳು ರದ್ದುಗೊಳಿಸಿವೆ. ದೇಶಾದ್ಯಂತ ವಿಮಾನ ನಿಲ್ದಾಣಗಳಲ್ಲಿ ಭದ್ರತೆಯನ್ನು ಸಹ ಬಿಗಿಗೊಳಿಸಲಾಗಿದೆ.

ಸಂಜೆಯ ಆರಂಭದಲ್ಲಿ, ವಿದೇಶಾಂಗ ಕಾರ್ಯದರ್ಶಿ ವಿಕ್ರಮ್ ಮಿಶ್ರಿ ಅವರು ಮೇ 8 ರಂದು ಭಾರತದ ಅನೇಕ ಸ್ಥಳಗಳಲ್ಲಿ ಪಾಕಿಸ್ತಾನ ನಡೆಸಿದ ದಾಳಿಯನ್ನು ಉದ್ದೇಶಿಸಿ ಮಾತನಾಡುತ್ತಾ, ಪಾಕಿಸ್ತಾನದ ಪ್ರಚೋದನಕಾರಿ ಕ್ರಮಗಳು ಭಾರತೀಯ ನಗರಗಳು ಮತ್ತು ನಾಗರಿಕ ಮೂಲಸೌಕರ್ಯ ಹಾಗೂ ಮಿಲಿಟರಿ ಸ್ಥಾಪನೆಗಳನ್ನು ಗುರಿಯಾಗಿರಿಸಿಕೊಂಡಿವೆ ಎಂದು ಹೇಳಿದರು. ಭಾರತದ ಸಶಸ್ತ್ರ ಪಡೆಗಳು ಪ್ರಮಾಣಾನುಗುಣವಾಗಿ, ಸಮರ್ಪಕವಾಗಿ ಮತ್ತು ಜವಾಬ್ದಾರಿಯುತವಾಗಿ ಪ್ರತಿಕ್ರಿಯಿಸಿದವು ಎಂದು ಅವರು ಹೇಳಿದರು. ದಾಳಿಯ ಬಗ್ಗೆ ಪಾಕಿಸ್ತಾನದ ಅಧಿಕೃತ ನಿರಾಕರಣೆಯನ್ನು ಮಿಸ್ರಿ ಟೀಕಿಸಿದರು, ಇದನ್ನು ಸ್ಪಷ್ಟ ಸುಳ್ಳು ಎಂದು ಕರೆದರು ಮತ್ತು ಪಾಕಿಸ್ತಾನ ರಾಜ್ಯದ ದ್ವಂದ್ವತೆಯನ್ನು ಎತ್ತಿ ತೋರಿಸಿದರು, ಅದು ಹೊಸ ಆಳಕ್ಕೆ ಇಳಿಯುತ್ತಲೇ ಇದೆ ಎಂದು ಅವರು ಹೇಳಿದರು.

# ಜಮ್ಮು, ಪಠಾಣ್‌ಕೋಟ್, ಉಧಂಪುರ ಸೇನಾ ನೆಲೆಗಳ ಮೇಲೆ ದಾಳಿಗೆ ಪಾಕ್ ಯತ್ನ ವಿಫಲ

**ನವದೆಹಲಿ, ಮೇ 9:** ಪಾಕಿಸ್ತಾನ ಗುರುವಾರ ಸಂಜೆ ತಡರಾತ್ರಿ ಜಮ್ಮು, ಪಠಾಣ್ಕೋಟ್ ಮತ್ತು ಉಧಂಪುರದಲ್ಲಿರುವ ಮಿಲಿಟರಿ ನೆಲೆಗಳ ಮೇಲೆ ದಾಳಿ ಮಾಡಲು ಕ್ಷಿಪಣಿಗಳು ಮತ್ತು ಡ್ರೋನ್‌ಗಳನ್ನು ಬಳಸಿದೆ. ಈ ಎಲ್ಲಾ ಗುರಿಗಳು ಜಮ್ಮು ಕಾಶ್ಮೀರದ ಅಂತರರಾಷ್ಟ್ರೀಯ ಗಡಿಗೆ ಸಮೀಪದಲ್ಲಿವೆ. ಸ್ಥಾಪಿತ ಪ್ರಮಾಣಿತ ಕಾರ್ಯಾಚರಣಾ ಕಾರ್ಯವಿಧಾನಗಳಿಗೆ ಅನುಗುಣವಾಗಿ ಚಲನಶೀಲ ಮತ್ತು ಚಲನಶೀಲವಲ್ಲದ ಸಾಮರ್ಥ್ಯಗಳನ್ನು ಬಳಸಿಕೊಂಡು ಭಾರತೀಯ ಸಶಸ್ತ್ರ ಪಡೆಗಳು ಈ ದಾಳಿಗಳನ್ನು ತಟಸ್ಥಗೊಳಿಸಿದವು ಎಂದು ವರದಿ ಹೇಳಿದೆ. ದಾಳಿಯ ನಂತರ



ಯಾವುದೇ ಸಾವುನೋವುಗಳು ಅಥವಾ ನಷ್ಟಗಳು ವರದಿಯಾಗಿಲ್ಲ. ಪಾಕಿಸ್ತಾನದ ದಾಳಿಯ ನಂತರ, ಶ್ರೀನಗರ, ಜಮ್ಮು, ಪೂಂಚ್–ರಾಜೌರಿ, ಕುಪ್ವಾರಾ, ಜೈಸಲ್ಮೇರ್, ಚಂಡೀಗಢ, ಮೊಹಾಲಿ, ಗುರುದಾಸ್ಪುರ್ ಮತ್ತು ತರಣ್ ತರಣ್ ಸೇರಿದಂತೆ ಜಮ್ಮು ಕಾಶ್ಮೀರ, ಪಂಜಾಬ್, ರಾಜಸ್ಥಾನ ಮತ್ತು ಗುಜರಾತ್‌ನ ಅನೇಕ ನಗರಗಳಲ್ಲಿ ವಿದ್ಯುತ್ ಕಡಿತಗೊಳಿಸಲಾಯಿತು. ಕೆಲವು ಸ್ಥಳಗಳಲ್ಲಿ ಸಂಜೆಯಿಡಿ ದೊಡ್ಡ ಸ್ಫೋಟಗಳ ಶಬ್ದ ಕೇಳಿಬಂದಿದೆ ಎಂದು ಜನರು ತಿಳಿಸಿದ್ದಾರೆ. ರಾತ್ರಿ 8 ಗಂಟೆಯಿಂದ ವಿದ್ಯುತ್ ಕಡಿತಗೊಳಿಸಲಾಗಿದೆ. ಸೈರನ್



ಪಾಕ್ ಶೆಲ್ ದಾಳಿಯಿಂದ ರಕ್ಷಿಸಲು ನಿಯಂತ್ರಣ ರೇಖೆ ಆಸುಪಾಸಿನ ಜನರ ಸ್ಥಳಾಂತರ

ಮೊಳಗಿಸಲಾಯಿತು ಮತ್ತು ಬ್ಲ್ಯಾಕ್‌ಔಟ್ ವಿಧಿಸಲಾಯಿತು. ನಗರದಲ್ಲಿ ಕೆಲವು ದೊಡ್ಡ ಸ್ಫೋಟಗಳು ಕೇಳಿಬಂದವು ಮತ್ತು ರಾತ್ರಿಯ ಆಕಾಶವು ಸ್ಫೋಟಗಳಿಂದ ಬೆಳಗುತ್ತಿತ್ತು ಆದರೆ ಇಲ್ಲಿಯವರೆಗೆ ಯಾವುದೇ ಸಾವುನೋವುಗಳು ವರದಿಯಾಗಿಲ್ಲ. ಸರ್ಕಾರವು ಜನರನ್ನು ಮನೆಯೊಳಗೆ ಇರುವಂತೆ ಕೇಳಿದೆ ಮತ್ತು ಬುಧವಾರ ಶಾಲೆಗಳನ್ನು ಮುಚ್ಚಲಾಗಿದೆ ಎಂದು ಹೆಸರು ಹೇಳಲು ಇಚ್ಛಿಸದ ಜಮ್ಮುವಿನ ವ್ಯಕ್ತಿಯೊಬ್ಬರು ಹೇಳಿದ್ದಾರೆ. ಉತ್ತರ ಮತ್ತು ಪಶ್ಚಿಮ ಭಾರತದ ಇಪ್ಪತ್ತೈದು ವಿಮಾನ ನಿಲ್ದಾಣಗಳನ್ನು ಸಹ ತಾತ್ಕಾಲಿಕವಾಗಿ ಮುಚ್ಚಲಾಯಿತು.



ಜಮ್ಮುವಿನಲ್ಲಿ ನಿರಾಶ್ರಿತರಿಗೆ ಸಿಎಂ ಉಮರ್ ಅಬ್ದುಲ್ಲಾ ಸಾಂತ್ವನ ಹೇಳಿದರು.

# ಪಾಕಿಸ್ತಾನದಿಂದ ಟರ್ಕಿ ಡ್ರೋನ್ ಬಳಕೆ ರಕ್ಷಣ ಇಲಾಖೆ ಅಧಿಕಾರಿಗಳ ಮಾಹಿತಿ



**ನವದೆಹಲಿ, ಮೇ 9:** ಪಾಕಿಸ್ತಾನವು ಗುರುವಾರ ರಾತ್ರಿ ನಡೆಸಿದ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ವೇಳೆ ಟರ್ಕಿ ಡ್ರೋನ್‌ಗಳನ್ನು ಬಳಸಿದೆ. ಅಲ್ಲದೆ ನಾಗರಿಕ ವಿಮಾನಗಳನ್ನು ಗುರಾಣಿಯಾಗಿ ಬಳಸಿಕೊಂಡಿದೆ ಎಂದು ವಿದೇಶಾಂಗ ಇಲಾಖೆ ಸುದ್ದಿಗೋಷ್ಠಿಯಲ್ಲಿ ಸರ್ಕಾರ ಹೇಳಿದೆ. ವಿದೇಶಾಂಗ ಕಾರ್ಯದರ್ಶಿ ವಿಕ್ರಂ ಮಿಸ್ತ್ರಿ, ಕರ್ನಲ್ ಸೋಫಿಯಾ ಖುರೇಶಿ ಮತ್ತು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಗುರುವಾರದ ದಾಳಿಯ ಬಗ್ಗೆ ಮಾಹಿತಿ ನೀಡಿದರು. ಗುರುವಾರ ರಾತ್ರಿ ಪಾಕಿಸ್ತಾನವು 300ರಿಂದ 400 ಡ್ರೋನ್‌ಗಳನ್ನು ಬಳಸಿದೆ. ಭಾರತವನ್ನು ಗುರಿಯಾಗಿಸಲು ಪಾಕಿಸ್ತಾನ ಟರ್ಕಿಯ ಆಸಿಸ್‌ಗಾರ್ಡ್ ಸೊಂಗಾರ್ ಡ್ರೋನ್ ಬಳಸಿದೆ ಎಂದು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ತಿಳಿಸಿದ್ದಾರೆ.

ಪಾಕಿಸ್ತಾನ ಸೇನೆಯು ಪಶ್ಚಿಮ ಗಡಿಯಲ್ಲಿ ಭಾರತೀಯ ವಾಯುಪ್ರದೇಶವನ್ನು ಪದೇ ಪದೇ ಉಲ್ಲಂಘಿಸಿ, ಮಿಲಿಟರಿ ಮೂಲ ಸೌಕರ್ಯವನ್ನು ಗುರಿಯಾಗಿಸಿ ಕೊಂಡಿತ್ತು. ಇದಲ್ಲದೆ, ನಿಯಂತ್ರಣ ರೇಖೆಯ ಉದ್ದಕ್ಕೂ ಭಾರೀ ಗಾತ್ರದ ಶಸ್ತ್ರಾಸ್ತ್ರಗಳನ್ನು ಹಾರಿಸಿತು. 36 ಸ್ಥಳಗಳಲ್ಲಿ ಒಳನುಸುಳುವಿಕೆ ಪ್ರಯತ್ನದಲ್ಲಿ 300 ರಿಂದ 400 ಡ್ರೋನ್‌ಗಳನ್ನು ನಿಯೋಜಿಸಲಾಗಿತ್ತು ಎಂದು ಕರ್ನಲ್ ಸೋಫಿಯಾ ಖುರೇಷಿ ಹೇಳಿದರು

ಭಾರತೀಯ ಸಶಸ್ತ್ರ ಪಡೆಗಳು ಈ ಡ್ರೋನ್‌ಗಳನ್ನು ಚಲನಶೀಲ ಮತ್ತು ಚಲನಶೀಲವಲ್ಲದ ವಿಧಾನಗಳನ್ನು ಬಳಸಿ ಹೊಡೆದುರುಳಿಸಿದವು. ಇಂತಹ ದೊಡ್ಡ ಪ್ರಮಾಣದ ವೈಮಾನಿಕ ಒಳನುಗ್ಗುವಿಕೆಗಳ ಸಂಭಾವ್ಯ ಉದ್ದೇಶ ವಾಯು ರಕ್ಷಣಾ ವ್ಯವಸ್ಥೆಗಳನ್ನು ಪರೀಕ್ಷಿಸುವುದು ಮತ್ತು ಗುಪ್ತಚರ ಮಾಹಿತಿಯನ್ನು ಸಂಗ್ರಹಿಸುವುದಾಗಿತ್ತು. ಡ್ರೋನ್‌ಗಳ ಅವಶೇಷಗಳ ವಿಧಿವಿಜ್ಞಾನ ತನಿಖೆಯನ್ನು ನಡೆಸಲಾಗುತ್ತಿದೆ. ಆರಂಭಿಕ ವರದಿಗಳು ಅವು ಟರ್ಕಿಶ್ ಆಸಿಸ್‌ಗಾರ್ಡ್ ಸೊಂಗಾರ್ ಡ್ರೋನ್‌ಗಳು ಎಂದು ಸೂಚಿಸುತ್ತವೆ" ಎಂದು ಮಾಹಿತಿ ನೀಡಿದರು."ಮೇ 7 ರಂದು ರಾತ್ರಿ 8.30 ಕ್ಕೆ ವಿಫಲವಾದ ಅಪ್ರಚೋದಿತ ಡ್ರೋನ್ ಮತ್ತು ಕ್ಷಿಪಣಿ ದಾಳಿಯನ್ನು ನಡೆಸಿದರೂ ಪಾಕಿಸ್ತಾನ ತನ್ನ ನಾಗರಿಕ ವಾಯುಪ್ರದೇಶವನ್ನು ಮುಚ್ಚಲಿಲ್ಲ. ಭಾರತದ ಮೇಲಿನ ದಾಳಿಯು ತ್ವರಿತ ವಾಯುರಕ್ಷಣಾ ಪ್ರತಿಕ್ರಿಯೆಯನ್ನು ಉಂಟುಮಾಡುತ್ತದೆ ಎಂದು ಸಂಪೂರ್ಣವಾಗಿ ತಿಳಿದಿದ್ದರೂ ಪಾಕಿಸ್ತಾನ ನಾಗರಿಕ ವಿಮಾನವನ್ನು ಗುರಾಣಿಯಾಗಿ ಬಳಸುತ್ತಿದೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಅಂತಾರಾಷ್ಟ್ರೀಯ ಗಡಿ ಬಳಿ ಹಾರಾಟ ನಡೆಸುತ್ತಿದ್ದ ಅಂತಾರಾಷ್ಟ್ರೀಯ ವಿಮಾನಗಳು ಸೇರಿದಂತೆ ನಾಗರಿಕ ವಿಮಾನಗಳಿಗೆ ಇದು ಸುರಕ್ಷಿತವಲ್ಲ" ಎಂದು ವಿಂಗ್ ಕಮಾಂಡರ್ ವ್ಯೋಮಿಕಾ ಸಿಂಗ್ ಹೇಳಿದ್ದಾರೆ.

# ಪಾಕ್ ಪ್ರಜೆಗಳನ್ನು ವಾಪಸ್ ಕಳುಹಿಸಿ: ವಿಜಯೇಂದ್ರ

**ಬೆಂಗಳೂರು, ಮೇ 09:** ರಾಜ್ಯಗಳಲ್ಲಿರುವ ಪಾಕಿಸ್ತಾನದ ಪ್ರಜೆಗಳನ್ನು 48 ಗಂಟೆಗಳ ಒಳಗಾಗಿ ಅವರ ದೇಶಕ್ಕೆ ಕಳಿಸಬೇಕೆಂದು ಕೇಂದ್ರ ಸರಕಾರ ಸೂಚನೆ ನೀಡಿದೆ. ಆದರೆ, ನಮ್ಮ ರಾಜ್ಯದಲ್ಲಿ ಕಾಂಗ್ರೆಸ್ ಸರಕಾರ ಈ ವಿಷಯವನ್ನು ಗಂಭೀರವಾಗಿ ಪರಿಗಣಿಸಿಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷರಾದ ಬಿ.ವೈ.ವಿಜಯೇಂದ್ರ ಅವರು ಆಕ್ಷೇಪಿಸಿದರು.ಬಿಜೆಪಿ, ರಾಜ್ಯದಲ್ಲಿ ಸಹಿ ಸಂಗ್ರಹ ಅಭಿಯಾನ ನಡೆಸಿದೆ. 60 ಸಾವಿರಕ್ಕೂ ಹೆಚ್ಚು ಸಹಿ ಪಡೆದು ಇವತ್ತು ನಾವು ಜಿಲ್ಲಾಧಿಕಾರಿಗಳು, ರಾಜ್ಯಪಾಲರನ್ನೂ ಭೇಟಿ ಮಾಡಿದ್ದೇವೆ. ಪಾಕಿಸ್ತಾನದ ಪ್ರಜೆಗಳನ್ನು ರಾಜ್ಯದಿಂದ ವಾಪಸ್ ಕಳಿಸಬೇಕೆಂದು ರಾಜ್ಯ ಸರಕಾರಕ್ಕೆ ಸೂಚನೆ ನೀಡಬೇಕೆಂದು ಮಾನ್ಯ ರಾಜ್ಯಪಾಲರಿಗೆ ಇಂದು ಬಿಜೆಪಿ ನಿಯೋಗವು ಮನವಿ ಸಲ್ಲಿಸಿತು. ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರ ನೇತೃತ್ವದ ಬಿಜೆಪಿ ನಿಯೋಗವು ಈ ಕುರಿತಂತೆ ಸಂಗ್ರಹಿತ ಸಹಿಗಳುಳ್ಳ ಮನವಿಯನ್ನು ಸಲ್ಲಿಸಿತು. ವಿರೋಧ ಪಕ್ಷದ ನಾಯಕ ಆರ್.ಅಶೋಕ್, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ವಿರೋಧ ಪಕ್ಷದ ಉಪನಾಯಕ ಅರವಿಂದ ಬೆಲ್ಲದ್, ಶಾಸಕ ವೇದವ್ಯಾಸ ಕಾಮತ್, ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ವಿಧಾನಪರಿಷತ್ ಸದಸ್ಯರಾದ ಗೋಪಿನಾಥ್ ರೆಡ್ಡಿ, ಪ್ರತಾಪಸಿಂಹ ನಾಯಕ್,



ಪ್ರಕೋಷ್ಠಗಳ ರಾಜ್ಯ ಸಂಯೋಜಕ ಎಸ್. ದತ್ತಾತ್ರೀ, ಹಾಲು ಉತ್ಪಾದಕರ ಪ್ರಕೋಷ್ಠದ ರಾಜ್ಯ ಸಂಚಾಲಕ ಬೇಳೂರು ರಾಘವೇಂದ್ರ ಶೆಟ್ಟಿ, ಕಾನೂನು ಪ್ರಕೋಷ್ಠದ ರಾಜ್ಯ ಸಂಚಾಲಕ ವಸಂತ ಕುಮಾರ್, ಶಿಕ್ಷಣ ಪ್ರಕೋಷ್ಠದ ರಾಜ್ಯ ಸಂಚಾಲಕ ಡಾ. ಸಿ.ಬಿ. ಶಶಿಧರ್, ವಿಧಾನಪರಿಷತ್ ಸದಸ್ಯ ಬಿ.ಜಿ. ಪಾಟೀಲ್, ವ್ಯಾಪಾರ ಮತ್ತು ವಾಣಿಜ್ಯ ಪ್ರಕೋಷ್ಠದ ರಾಜ್ಯ ಸಂಚಾಲಕ ವಿಜಯ್ ಕುಮಾರ್, ರಾಜ್ಯ ಮಾಧ್ಯಮ ಸಹ–ಸಂಚಾಲಕ ಪ್ರಶಾಂತ್ ಕೆಡಂಜಿ ಮತ್ತು ಪಕ್ಷದ ಮುಖಂಡರು ಉಪಸ್ಥಿತರಿದ್ದರು. ಇದು ರಾಷ್ಟ್ರದ ಭದ್ರತೆಯ ವಿಷಯ ಎಂದು ಗಮನ ಸೆಳೆದಿದ್ದೇವೆ. ರಾಜ್ಯದಲ್ಲಿರುವ ಪಾಕಿಸ್ತಾನದ ಪ್ರಜೆಗಳನ್ನು ಕೂಡಲೇ ವಾಪಸ್ ಕಳಿಸುವ ಕುರಿತು ರಾಜ್ಯ ಸರಕಾರಕ್ಕೆ ನಿರ್ದೇಶನ ಕೊಡುವಂತೆ ಮನವಿ ಮಾಡಿದ್ದೇವೆ ಎಂದು ವಿಜಯೇಂದ್ರ ಹೇಳಿದರು.

# ಬೆಂಗಳೂರಿನಲ್ಲಿ ತಿರಂಗಾ ಯಾತ್ರೆ: ಸಾವಿರಾರು ಜನ ಭಾಗಿ



ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಪ್ರದೇಶ ಕಾಂಗ್ರೆಸ್ ಅಧ್ಯಕ್ಷ ಡಿ.ಕೆ ಶಿವಕುಮಾರ್ ನೇತೃತ್ವದಲ್ಲಿ ನಡೆದ ಈ ತಿರಂಗಾ ಯಾತ್ರೆಯಲ್ಲಿ ಸಚಿವರಾದ ಎಚ್.ಕೆ.ಪಾಟೀಲ್, ರಾಮಲಿಂಗಾರೆಡ್ಡಿ, ಕೆ.ಎಚ್ ಮುನಿಯಪ್ಪ, ಬೋಸರಾಜು, ಕೆ. ಸುಧಾಕರ್, ಡಾ .ಕೆ ಸುಧಾಕರ್ ದಿನೇಶ್ ಗುಂಡೂರಾವ್ ಸೇರಿದಂತೆ ಕಾಂಗ್ರೆಸ್‌ನ ಹಲವು ಮುಖಂಡರು, ನೂರಾರು ಕಾರ್ಯಕರ್ತರುಗಳು ತ್ರಿವರ್ಣ ಧ್ವಜ ಹಿಡಿದು ಹೆಜ್ಜೆ ಹಾಕಿದರು.

**ಬೆಂಗಳೂರು, ಮೇ.9–** ಪಹಲ್ಗಾಮ್ ದಾಳಿಗೆ ಪ್ರತಿಕಾರವಾಗಿ ಭಯೋತ್ಪಾದನೆ ವಿರುದ್ಧ ಭಾರತೀಯ ಸೇನೆ ನಡೆಸಿದ ಸಿಂದೂರ್ ಕಾರ್ಯಾಚರಣೆ ಹಾಗೂ ಇತರ ಕ್ರಮಗಳನ್ನು ಬೆಂಬಲಿಸಿ ಬೆಂಗಳೂರಿನಲ್ಲಿಂದು ತಿರಂಗಾ ಯಾತ್ರೆ ನಡೆಯಿತು. ಕೆ. ಆರ್.ಸರ್ಕಲ್‌ನಿಂದ ವಿಧಾನಸೌಧ ಹಾಗೂ ಹೈಕೋರ್ಟ್‌ನ ನಡುವಿನ ಮುಖ್ಯರಸ್ತೆಯ ಮಾರ್ಗವಾಗಿ ಚಿನ್ನಸ್ವಾಮಿ ಸ್ಟೇಡಿಯಂ ಕ್ರೀಡಾಂಗಣದ ವೃತ್ತದವರೆಗೂ ನಡೆದ ತಿರಂಗಾ ಯಾತ್ರೆಯಲ್ಲಿ ಸಾವಿರಾರು ಜನ ಭಾಗವಹಿಸಿದ್ದರು.

ಭಯೋತ್ಪಾದನೆಯನ್ನು ನಿರಂತರ ಕಾರ್ಯಾಚರಣೆ ಮೂಲಕ ಬುಡಸಮೇತ ಕಿತ್ತುಹಾಕಬೇಕು ಎಂದು ಉಪಮುಖ್ಯಮಂತ್ರಿ ಹಾಗೂ ಕೆಪಿಸಿಸಿ ಅಧ್ಯಕ್ಷ ಡಿ.ಕೆ.ಶಿವಕುಮಾರ್ ಕರೆ ನೀಡಿದ್ದಾರೆ.ನಗರದಲ್ಲಿಂದು ತಿರಂಗಾ ಯಾತ್ರೆಗೂ ಮುನ್ನ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಡೀ ವಿಶ್ವವೇ ಭಾರತವನ್ನು ಗಮನಿಸುತ್ತಿದೆ. ಭಾರತ ನಡೆಸುತ್ತಿರುವ ಕಾರ್ಯಾಚರಣೆಯಿಂದ ದೇಶದ ಘನತೆ ಹೆಚ್ಚಿದೆ. ತ್ರಿವರ್ಣ ಧ್ವಜದ ಗೌರವ ಮತ್ತಷ್ಟು ಹೆಚ್ಚಾಗಿದೆ ಎಂದರು.ಭಾರತದ ಸೇನೆಗೆ ತಕ್ಕ ಸಾಮರ್ಥ್ಯವಿದೆ. ಪಾಕಿಸ್ತಾನಕ್ಕೆ ದಿಟ್ಟ ಉತ್ತರ ನೀಡಲಾಗುತ್ತಿದೆ. ಇದೇ ವೇಳೆ ಭಯೋತ್ಪಾದನೆಯಂತ ಜಾಗತಿಕ ಸಮಸ್ಯೆಯನ್ನು ಭಾರತದಲ್ಲಿ ಬುಡಸಮೇತ ನಿರ್ಮೂಲನೆ ಮಾಡಬೇಕು.

ಕೇಂದ್ರ ಸರ್ಕಾರದ ಕ್ರಮಗಳಿಗೆ ಜಾತಿ, ಧರ್ಮ, ಪಕ್ಷಭೇದ ಮರೆತು ಒಟ್ಟಾಗಿ ಬೆಂಬಲ ವ್ಯಕ್ತಪಡಿಸಬೇಕಿದೆ. ಈ ಕಾರಣಕ್ಕಾಗಿ ಇಂದು ತ್ರಿವರ್ಣ ಧ್ವಜ ಹಿಡಿದು ಕೆ.ಆರ್.ಸರ್ಕಲ್ನಿಂದ ಚಿನ್ನಸ್ವಾಮಿ ಸ್ಟೇಡಿಯಂವರೆಗೂ ತಿರಂಗಾ ಯಾತ್ರೆ ನಡೆಸಲಾಗುತ್ತಿದೆ. ಇದು ಸರ್ಕಾರದ ಕಾರ್ಯಕ್ರಮ. ಅದಕ್ಕಾಗಿ ಎಲ್ಲರೂ ಭಾಗವಹಿಸಬೇಕು ಎಂದು ಕರೆ ನೀಡಲಾಗಿದೆ ಎಂದರು. ತ್ರಿವರ್ಣ ಧ್ವಜಗಳ ಹಾರಾಟ ಬೆಂಗಳೂರಿಗೆ ಹೊಸ ಕಳೆಯನ್ನೇ ತಂದುಕೊಟ್ಟಿತು. ತಿರಂಗಾ ಧ್ವಜದ ಹಾರಾಟದಿಂದಾಗಿ ಮುಖಂಡರುಗಳ ಮುಖಗಳೇ ಕಾಣದಂತೆ ಮುಚ್ಚಿಹೋಗಿತ್ತು. ಸಮುದ್ರದ ಅಲೆಯ ಮಾದರಿಯಲ್ಲಿ ತಿರಂಗಾ ಧ್ವಜ ಹಿಡಿದ ಸಾವಿರಾರು ಮಂದಿ ಪಾದಯಾತ್ರೆಯಲ್ಲಿ ಬಂದಿದ್ದು ನಯನ ಮನೋಹರವಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಗಣ್ಯರು ಕೂಡ ಕಾರ್ಯಕರ್ತರ ಪಾದಯಾತ್ರೆಯ ಜನಜಂಗುಳಿ ನಡುವೆ ನಡೆದುಬಂದಿದ್ದು ಪೊಲೀಸರಿಗೆ ಭದ್ರತೆಯ ಪೀಕಲಾಟ ಕಂಡುಬಂದಿತ್ತು. ಒಂದು ಹಂತದಲ್ಲಿ ಹಗ್ಗ ಬಳಸಿ ಮುಖ್ಯಮಂತ್ರಿ ಹಾಗೂ ಗಣ್ಯರಿಗೆ ವಿಶೇಷ ರಕ್ಷಣೆ ನೀಡುವ ಪ್ರಯತ್ನವನ್ನು ಪೊಲೀಸರು ಮಾಡಿದರು. ಆದರೆ ಅದಕ್ಕೆ ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿ ಅವಕಾಶ ನಿರಾಕರಿಸಿದರು. ಜನರ ನಡುವೆಯೇ ಕಾಂಗ್ರೆಸ್ ನಾಯಕರೂ ಕೂಡ ತಿರಂಗಾ ಯಾತ್ರೆಗೆ ಹೆಜ್ಜೆ ಹಾಕಿದರು. ವಂದೇಮಾತರಂ ಹಾಗೂ ಭಾರತ್ ಮಾತಾ ಕಿ ಜೈ ಘೋಷಣೆಗಳು ಮೊಳಗಿದವು. ಆಪರೇಷನ್ ಸಿಂಧೂರ್ ಕಾರ್ಯಾಚರಣೆಯನ್ನು ಬೆಂಬಲಿಸುವ ಸೇನೆಯ ಬಗ್ಗೆ ಶ್ಲಾಘಿಸುವ ಭಿತ್ತಿಪತ್ರಗಳು ಕಂಡುಬಂದವು.ತಿರಂಗಾ ಯಾತ್ರೆಯಲ್ಲಿನ 3 ಕಿ.ಮೀ. ಉದ್ದದ ರಸ್ತೆಯಲ್ಲೂ ಏಕಮುಖ ಸಂಚಾರವನ್ನು ನಿರ್ಬಂಧಿಸಲಾಗಿತ್ತು. ನಿನ್ನೆ ಮಧ್ಯಾಹ್ನ ಇದ್ದಕ್ಕಿದ್ದಂತೆ ಬೆಂಗಳೂರು ಉಸ್ತುವಾರಿ ಸಚಿವರಾಗಿರುವ ಡಿ.ಕೆ.ಶಿವಕುಮಾರ್ ತಿರಂಗಾ ಯಾತ್ರೆ ನಡೆಸುವ ನಿರ್ಧಾರವನ್ನು ಕೈಗೊಂಡರು. ಏಕಾಏಕಿ ಪ್ರಕಟಿಸಲಾದ ಈ ಕಾರ್ಯಕ್ರಮ ಸರ್ಕಾರಿ ಪ್ರಾಯೋಜಿತವಾಗಿದ್ದು, ಯಾವುದೇ ಪಕ್ಷಬೇಧವಿಲ್ಲದೆ ಎಲ್ಲರೂ ಭಾಗವಹಿಸಬೇಕು ಎಂದು ಕರೆ ನೀಡಿದ್ದರು. ಆದರೆ ಕಾಂಗ್ರೆಸ್ ಹೊರತುಪಡಿಸಿ ಬೇರೆ ಯಾವ ಪಕ್ಷದ ಮುಖಂಡರೂ ತಿರಂಗಾ ಯಾತ್ರೆಯಲ್ಲಿ ಭಾಗವಹಿಸಲಿಲ್ಲ.

## ಮುನ್ನೆಚ್ಚರಿಕೆ ಕ್ರಮವಾಗಿ ಅಣೆಕಟ್ಟುಗಳಿಗೆ ಭದ್ರತೆ: ಡಿಸಿಎಂ ಡಿ.ಕೆ. ಶಿವಕುಮಾರ್

ಕಾರ್ಯಕ್ರಮದ ನಂತರ ಮಾಧ್ಯಮಗಳಿಗೆ ಶಿವಕುಮಾರ್ ಅವರು ಪ್ರತಿಕ್ರಿಯೆ ನೀಡಿದರು. ರಾಜ್ಯದಲ್ಲಿ ಅಣೆಕಟ್ಟುಗಳಿಗೆ ಭದ್ರತೆ ಒದಗಿಸಿರುವ ಬಗ್ಗೆ ಕೇಳಿದಾಗ, ಮುನ್ನೆಚ್ಚರಿಕೆ ಕ್ರಮವಾಗಿ ಎಲ್ಲಾ ಅಣೆಕಟ್ಟುಗಳಿಗೆ ಭದ್ರತೆ ಒದಗಿಸಲಾಗಿದೆ. ಈ ಪರಿಸ್ಥಿತಿಯಲ್ಲಿ ನಿರ್ಲಕ್ಷ್ಯ ವಹಿಸಬಾರದು ಎಂದು ಸರ್ಕಾರ ಈ ಕ್ರಮ ಕೈಗೊಂಡಿದೆ. ತಾಂತ್ರಿಕ ಸಿಬ್ಬಂದಿಗಳ ಹೊರತಾಗಿ ಯಾವುದೇ ಪ್ರವಾಸಿಗರಿಗೆ ಅಣೆಕಟ್ಟಿನ ಬಳಿ ಅವಕಾಶ ನೀಡಬಾರದು ಎಂದು ನಿರ್ದೇಶನ ನೀಡಿದ್ದೇವೆ. ಇದು ದೇಶದ ವಿಚಾರ ಸಾರ್ವಜನಿಕರು ಈ ವಿಚಾರವಾಗಿ ಸಹಕಾರ ನೀಡಬೇಕು ಎಂದು ತಿಳಿಸಿದರು. ಬೆಂಗಳೂರಿನ ಭದ್ರತೆ ಬಗ್ಗೆ ಕೇಳಿದಾಗ, ಬೆಂಗಳೂರಿನ ಭದ್ರತೆ ವಿಚಾರವಾಗಿ ಪೊಲೀಸ್ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುತ್ತಿದ್ದಾರೆ. ಅಗತ್ಯ ಸಂದರ್ಭದಲ್ಲಿ ಸಾರ್ವಜನಿಕರಿಗೆ ಸಂಬಂಧಪಟ್ಟ ಸಂದೇಶವನ್ನು ರವಾನಿಸುತ್ತೇವೆ. ದೇಶದ ಐಕ್ಯತೆ ಗಮನದಲ್ಲಿಟ್ಟುಕೊಂಡು ಯೋಧರಿಗೆ ಆತ್ಮಸ್ಥೈರ್ಯ ತುಂಬಲು ಮುಂದಾಗಿದ್ದೇವೆ. ಸಚಿವ ಸಂಪುಟ ಸಭೆಯಲ್ಲಿ ಇತರೆ ವಿಚಾರ ಚರ್ಚೆ ಮಾಡಿ ನಂತರ ಮಾಹಿತಿ ನೀಡುತ್ತೇವೆ ಎಂದರು.

ಭಾರತ ಬಲಿಷ್ಠವಾಗಿದೆ, ಅದು ಪಾಕಿಸ್ತಾನವನ್ನು ಪರಿಣಾಮಕಾರಿಯಾಗಿ ಎದುರಿಸುತ್ತದೆ ಮತ್ತು ಸೋಲಿಸುತ್ತದೆ. ಇಂದಿರಾ ಗಾಂಧಿಯವರ ಕಾಲದಲ್ಲಿ ಪಾಕಿಸ್ತಾನವನ್ನು ಸೋಲಿಸಿದಂತೆಯೇ, ಭಾರತವು ಈ ಪರಿಸ್ಥಿತಿಯನ್ನು ಎದುರಿಸುತ್ತದೆ ಮತ್ತು ಈ ಬಾರಿಯೂ ಗೆಲ್ಲುತ್ತದೆ. ಪಾಕಿಸ್ತಾನಕ್ಕೆ ಸೂಕ್ತ ಉತ್ತರವನ್ನು ನೀಡುತ್ತಿರುವ ನಮ್ಮ ಸೇನೆಯು ಕಾರ್ಯಕ್ಷಮತೆಯ ಬಗ್ಗೆ ನನಗೆ ತುಂಬಾ ಹೆಮ್ಮೆ ಇದೆ. ಸೈನಿಕರು ನಮ್ಮ ಧ್ವಜವನ್ನು ಎತ್ತರಕ್ಕೆ ಹಾರಿಸಿದ್ದಾರೆ. ನಾವೆಲ್ಲರೂ ಒಟ್ಟಾಗಿ ಅವರನ್ನು ಬೆಂಬಲಿಸಬೇಕು. ಭಯೋತ್ಪಾದನೆಯನ್ನು ನಿರ್ಮೂಲನೆ ಮಾಡಬೇಕು. ಕೇಂದ್ರ ಸರ್ಕಾರದ ನಿರ್ಧಾರವನ್ನು ಎಲ್ಲರೂ ಒಟ್ಟಾಗಿ ಬೆಂಬಲಿಸಬೇಕು

**– ಡಿ.ಕೆ.ಶಿವಕುಮಾರ್**

ಜಮ್ಮು ಮತ್ತು ಕಾಶ್ಮೀರದ ಮೇಲೆ ಪಾಕಿಸ್ತಾನದ ದಾಳಿ ಕುರಿತು ನಡೆದ ಜೈ ಹಿಂದ್ ತಿರಂಗಾ ಯಾತ್ರೆಯ ಸಂದರ್ಭದಲ್ಲಿ ಮಾಧ್ಯಮದ ಪ್ರಶ್ನೆಗಳಿಗೆ ಡಿಸಿಎಂ ಪ್ರತಿಕ್ರಿಯೆ"

# ಪಶ್ಚಿಮ ಗಡಿಯ ಭದ್ರತಾ ಪರಿಸ್ಥಿತಿ: ಅಧಿಕಾರಿಗಳ ಜೊತೆ ರಾಜನಾಥ್ ಸಿಂಗ್ ಮಹತ್ವದ ಸಭೆ



**ನವದೆಹಲಿ,ಮೇ 9:** ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆಯ ಮಧ್ಯೆ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಶುಕ್ರವಾರ ಪಶ್ಚಿಮ ಗಡಿಯಲ್ಲಿನ ಭದ್ರತಾ ಪರಿಸ್ಥಿತಿ ಮತ್ತು ಭಾರತೀಯ ಸಶಸ್ತ್ರ ಪಡೆಗಳ ಕಾರ್ಯಾಚರಣೆಯ ಸನ್ನದ್ಧತೆಯನ್ನು ಪರಿಶೀಲಿಸಲು ಉನ್ನತ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿದ್ದಾರೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ.

ಈ ಸಭೆಯಲ್ಲಿ ರಕ್ಷಣಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಅನಿಲ್ ಚೌಹಾಣ್, ಸೇನಾ ಸಿಬ್ಬಂದಿ ಮುಖ್ಯಸ್ಥ ಜನರಲ್ ಉಪೇಂದ್ರ ದ್ವಿವೇದಿ, ನೌಕಾಪಡೆಯ ಮುಖ್ಯಸ್ಥ ಅಡ್ಮಿರಲ್ ದಿನೇಶ್ ಕೆ ತ್ರಿಪಾಠಿ, ವಾಯುಪಡೆಯ ಮುಖ್ಯಸ್ಥ ಏರ್ ಚೀಫ್ ಮಾರ್ಷಲ್ ಎಪಿ ಸಿಂಗ್ ಮತ್ತು ರಕ್ಷಣಾ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಭಾಗವಹಿಸಿದ್ದರು. ಪಾಕಿಸ್ತಾನವು ಇಡೀ ಪಶ್ಚಿಮ ಗಡಿಯಲ್ಲಿ ನಡೆಸಿದ ಬಹು ಡ್ರೋನ್ ದಾಳಿಯನ್ನು ಭಾರತ ಪರಿಣಾಮಕಾರಿಯಾಗಿ ವಿಫಲಗೊಳಿಸಿದ ಕೆಲವೇ ಗಂಟೆಗಳಲ್ಲಿ ಈ ನಿರ್ಣಾಯಕ ಸಭೆ ನಡೆದಿದೆ.

ಇದಲ್ಲದೆ, ಜಮ್ಮು ಮತ್ತು ಕಾಶ್ಮೀರದ ನಿಯಂತ್ರಣ ರೇಖೆಯ ಉದ್ದಕ್ಕೂ ಪಾಕಿಸ್ತಾನಿ ಪಡೆಗಳು ಹಲವಾರು ಕದನ ವಿರಾಮ ಉಲ್ಲಂಘನೆಗಳನ್ನು ಸಹ ನಡೆಸಿದ್ದವು. ಏತನ್ಮಧ್ಯೆ, ಜಮ್ಮುವಿನ ಸಾಂಬಾ ಸೆಕ್ಟರ್‌ನಲ್ಲಿ ಗಡಿಯಾಚೆಯಿಂದ ಒಳನುಸುಳುವಿಕೆ ಪ್ರಯತ್ನವನ್ನು ಬಿಎಸ್‌ಎಫ್ ವಿಫಲಗೊಳಿಸಿತು. ಬಿಎಸ್‌ಎಫ್ ಒಳನುಸುಳುವಿಕೆ ಪ್ರಯತ್ನವನ್ನು ವಿಫಲಗೊಳಿಸಿತು, ಕನಿಷ್ಠ ಏಳು ಭಯೋತ್ಪಾದಕರನ್ನು ತಟಸ್ಥಗೊಳಿಸಿತು ಮತ್ತು ಪಾಕಿಸ್ತಾನ ಪೋಸ್ಟ್ ಧಂಧರ್‌ಗೆ ವ್ಯಾಪಕ ಹಾನಿಯನ್ನುಂಟುಮಾಡಿತು.

# ನಾಗರಿಕ ರಕ್ಷಣಾ ಅಧಿಕಾರಿಗಳ ಸೇವೆ ಬಳಕೆ ರಾಜ್ಯಗಳಿಗೆ ಗೃಹ ಸಚಿವಾಲಯ ಸೂಚನೆ




**ನವದೆಹಲಿ, ಮೇ 9:** ಭಾರತ ಮತ್ತು ಪಾಕಿಸ್ತಾನದ ನಡುವೆ ಹೆಚ್ಚುತ್ತಿರುವ ಉದ್ವಿಗ್ನತೆ ಮತ್ತು ಪ್ರಸ್ತುತ ಪ್ರತಿಕೂಲ ಪರಿಸ್ಥಿತಿಯ ಮಧ್ಯೆ, ಅಗತ್ಯ ಮುನ್ನೆಚ್ಚರಿಕೆ ಕ್ರಮಗಳ ಪರಿಣಾಮಕಾರಿ ಅನುಷ್ಠಾನವನ್ನು ಖಚಿತಪಡಿಸಿಕೊಳ್ಳಲು ನಾಗರಿಕ ರಕ್ಷಣಾ ನಿಯಮಗಳ ಅಡಿಯಲ್ಲಿ ತುರ್ತು ಅಧಿಕಾರಗಳನ್ನು ಚಲಾಯಿಸುವಂತೆ ಗೃಹ ಸಚಿವಾಲಯ ಶುಕ್ರವಾರ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳನ್ನು ಕೇಳಿದೆ.

ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಮುಖ್ಯ ಕಾರ್ಯದರ್ಶಿಗಳು ಮತ್ತು ಆಡಳಿತಾಧಿಕಾರಿಗಳಿಗೆ ಬರೆದ ಪತ್ರದಲ್ಲಿ, 1968 ರ ನಾಗರಿಕ ರಕ್ಷಣಾ ನಿಯಮಗಳ ಸೆಕ್ಷನ್ 11 ಅನ್ನು ಉಲ್ಲೇಖಿಸಿ, ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ಜನರ ಜೀವ ಮತ್ತು ಆಸ್ತಿಯನ್ನು ರಕ್ಷಿಸಲು ಮತ್ತು ಅಗತ್ಯ ಸೇವೆಗಳ ನಿರಂತರ ಕಾರ್ಯಾಚರಣೆಯನ್ನು ನಿರ್ವಹಿಸಲು ರಾಜ್ಯ ಸರ್ಕಾರಗಳು ಅಗತ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುವ ಅಧಿಕಾರವನ್ನು ಹೊಂದಿವೆ ಎಂದು ಗೃಹ ಸಚಿವಾಲಯ ಹೇಳಿದೆ. "ಪ್ರಸ್ತುತ ಪ್ರತಿಕೂಲ ದಾಳಿಯ ಸನ್ನಿವೇಶದಲ್ಲಿ, 1968 ರ ನಾಗರಿಕ ರಕ್ಷಣಾ ನಿಯಮಗಳ ಸೆಕ್ಷನ್ 11 ರ ಕಡೆಗೆ ನಿಮ್ಮ ಗಮನವನ್ನು ಸೆಳೆಯಲು ನಾನು ಬಯಸುತ್ತೇನೆ, ಇದು ರಾಜ್ಯ ಸರ್ಕಾರಗಳಿಗೆ ಇತರ ವಿಷಯಗಳ ಜೊತೆಗೆ, ರಾಜ್ಯ ಸರ್ಕಾರದ ಅಭಿಪ್ರಾಯದಲ್ಲಿ, ವ್ಯಕ್ತಿಗಳು ಮತ್ತು ಆಸ್ತಿಯನ್ನು ಗಾಯ ಅಥವಾ ಹಾನಿಯಿಂದ ರಕ್ಷಿಸಲು ಅಥವಾ ಪ್ರತಿಕೂಲ ದಾಳಿಯ ಸಂದರ್ಭದಲ್ಲಿ ಪ್ರಮುಖ ಸೇವೆಗಳ ಸರಿಯಾದ ನಿರ್ವಹಣೆಯನ್ನು ಖಚಿತಪಡಿಸಿಕೊಳ್ಳಲು ಅಗತ್ಯವಾದ ಕ್ರಮಗಳನ್ನು ತೆಗೆದುಕೊಳ್ಳಲು ಅಧಿಕಾರ ನೀಡುತ್ತದೆ" ಎಂದು ಪತ್ರದಲ್ಲಿ ತಿಳಿಸಲಾಗಿದೆ. "ಸ್ಥಳೀಯ ಪ್ರಾಧಿಕಾರದ ನಿಧಿಗಳು ಶುಲ್ಕಗಳು ಮತ್ತು ವೆಚ್ಚಗಳ ಪಾವತಿಗೆ ಅನ್ವಯವಾಗುತ್ತವೆ ಮತ್ತು ಸ್ಥಳೀಯ ಪ್ರಾಧಿಕಾರದ ಎಲ್ಲಾ ಇತರ ಕರ್ತವ್ಯಗಳು ಮತ್ತು ಬಾಧ್ಯತೆಗಳಿಗಿಂತ ಅಂತಹ ಅನುಸರಣೆಗೆ ಆದ್ಯತೆ ನೀಡಲಾಗುತ್ತದೆ" ಎಂದು ಅದು ಹೇಳಿದೆ.

# 8,000ಕ್ಕೂ ಹೆಚ್ಚು ಖಾತೆ ನಿರ್ಬಂಧಕ್ಕೆ ಕೇಂದ್ರ ಸೂಚನೆ: ಎಕ್ಸ್ ನಕಾರ

**ನವದೆಹಲಿ, ಮೇ 9:** ಸಾಮಾಜಿಕ ಜಾಲತಾಣ ಎಕ್ಸ್ (ಹಿಂದಿನ ಟ್ವಿಟರ್) ಕೇಂದ್ರ ಸರ್ಕಾರದಿಂದ 8,000ಕ್ಕೂ ಹೆಚ್ಚು ಖಾತೆಗಳನ್ನು ಭಾರತದಲ್ಲಿ ಬ್ಲಾಕ್ ಮಾಡುವಂತೆ ಆದೇಶವನ್ನು ಪಡೆದಿದೆ ಎಂದು ಮೇ 08ರ ಗುರುವಾರ ಹೇಳಿದೆ. ಈ ಆದೇಶದಲ್ಲಿ, ಅಂತರರಾಷ್ಟ್ರೀಯ ಸುದ್ದಿ ಸಂಸ್ಥೆಗಳು ಮತ್ತು ಪ್ರಮುಖ ಎಕ್ಸ್ ಬಳಕೆದಾರರ ಖಾತೆಗಳು ಒಳಗೊಂಡಿದೆ ಎಂದು ಎಕ್ಸ್‌ನ ಗ್ಲೋಬಲ್ ಗವರ್ನಮೆಂಟ್ ಅಫೈರ್ಸ್ ತಂಡ ತಿಳಿಸಿದೆ.




ಅದಾಗ್ಯೂ, ಬಿಜೆಪಿ ಸರ್ಕಾರದ ಈ ಕ್ರಮವನ್ನು ಮುಕ್ತ ಅಭಿವ್ಯಕ್ತಿಯ ಮೂಲಭೂತ ಹಕ್ಕಿಗೆ ವಿರುದ್ಧ ಎಂದು ಎಕ್ಸ್ ಟೀಕಿಸಿದ್ದು, ಅದಾಗ್ಯೂ, ಸರ್ಕಾರದ ಈ ಆದೇಶವನ್ನು ಪಾಲಿಸುವ ಪ್ರಕ್ರಿಯೆಯನ್ನು ತಾನು ಆರಂಭಿಸಿರುವುದಾಗಿ ಎಂದು ಹೇಳಿದೆ. ಈ ಬಗ್ಗೆ ಟ್ವೀಟ್ ಮಾಡಿರುವ ಎಕ್ಸ್‌ನ ಗ್ಲೋಬಲ್ ಗೌವರ್ನಮೆಂಟ್ ಅಫೈರ್ಸ್, ಭಾರತ ಸರ್ಕಾರದ ಈ ಕಾರ್ಯನಿರ್ವಾಹಕ ಆದೇಶಗಳು ಭಾರಿ ದಂಡ ಮತ್ತು ಕಂಪನಿಯ ಸ್ಥಳೀಯ ಉದ್ಯೋಗಿಗಳಿಗೆ ಜೈಲು ಶಿಕ್ಷೆಯಂತಹ ಸಂಭಾವ್ಯ ದಂಡನೆಗಳನ್ನು ಒಳಗೊಂಡಿವೆ ಎಂದು ಹೇಳಿದೆ.

ಅದಾಗ್ಯೂ, ಬ್ಲಾಕ್ ಮಾಡಲು ಹೇಳಲಾಗಿರುವ ಹೆಚ್ಚಿನ ಖಾತೆಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರವು ಯಾವ ಪೋಸ್ಟ್‌ಗಳು ಭಾರತದ ಸ್ಥಳೀಯ ಕಾನೂನುಗಳನ್ನು ಉಲ್ಲಂಘಿಸಿವೆ ಎಂಬುದರ ಬಗ್ಗೆ ಯಾವುದೇ ಸ್ಪಷ್ಟತೆ ಅಥವಾ ಪುರಾವೆಗಳನ್ನು ನೀಡಿಲ್ಲ ಎಂದು ಎಕ್ಸ್ ಆರೋಪಿಸಿದೆ. ಗಣನೀಯ ಸಂಖ್ಯೆಯ ಖಾತೆಗಳಿಗೆ, ಬ್ಲಾಕ್ ಮಾಡಲು ಯಾವುದೇ ಸಾಕ್ಷ್ಯ ಅಥವಾ ಸಮರ್ಥನೆಯನ್ನು ನೀಡಲಾಗಿಲ್ಲ. ಅದಾಗ್ಯೂ, ಕೇಂದ್ರ ಸರ್ಕಾರದ ಈ ಆದೇಶಗಳನ್ನು ತಾನು ಒಪ್ಪುವುದಿಲ್ಲ ಎಂದು ಎಕ್ಸ್ ಸ್ಪಷ್ಟಪಡಿಸಿದೆ. ಸಂಪೂರ್ಣ ಖಾತೆಗಳನ್ನು ಬ್ಲಾಕ್ ಮಾಡುವುದು ಅನಗತ್ಯವಾಗಿದ್ದು, ಅದು ಸೆನ್ಸಾರ್‌ಶಿಪ್‌ಗೆ ಸಮಾನ ವಾಗಿರುವತ್ತದೆ, ಇದು ಈಗಿರುವ ಮತ್ತು ಭವಿಷ್ಯದ ವಿಷಯಗಳ ಮೇಲೆ ಪರಿಣಾಮ ಬೀರುತ್ತದೆ ಎಂದು ಎಕ್ಸ್ ಆತಂಕ ವ್ಯಕ್ತಪಡಿಸಿದೆ.

ಸರ್ಕಾರದ ಈ ಆದೇಶವು ಇದು ಮುಕ್ತ ಅಭಿವ್ಯಕ್ತಿಯ ಮೂಲಭೂತ ಹಕ್ಕಿಗೆ ಧಕ್ಕೆ ತರುತ್ತದೆ ಎಂದು ಹೇಳಿರುವ ಎಕ್ಸ್, ಆದಾಗ್ಯೂ, ಭಾರತದಲ್ಲಿ ಈ ಸಮಾಜಿಕ ವೇದಿಕೆಯನ್ನು ಲಭ್ಯವಾಗಿಡುವುದು ಭಾರತೀಯರಿಗೆ ಮಾಹಿತಿಯನ್ನು ಪಡೆಯಲು ಅತ್ಯಂತ ಮುಖ್ಯ ಎಂದು ಪರಿಗಣಿಸಿ, ಆದೇಶವನ್ನು ಪಾಲಿಸುವ ಕಠಿಣ ನಿರ್ಧಾರವನ್ನು ತೆಗೆದುಕೊಂಡಿದೆ. ಎಕ್ಸ್ ಈ ಕಾರ್ಯನಿರ್ವಾಹಕ ಆದೇಶಗಳನ್ನು ಸಾರ್ವಜನಿಕಗೊಳಿಸುವುದು ಪಾರದರ್ಶಕತೆಗೆ ಅತ್ಯಗತ್ಯ ಎಂದು ಪರಿಗಣಿಸಿರುವುದಾಗಿ ಹೇಳಿದ್ದು, ಅದನ್ನು ಪ್ರಕಟಿಸದೆ ಇರುವುದು ಜವಾಬ್ದಾರಿಯನ್ನು ಕಡಿಮೆ ಮಾಡುತ್ತದೆ ಮತ್ತು ಅನಿಯಂತ್ರಿತ ನಿರ್ಧಾರ ತೆಗೆದುಕೊಳ್ಳುವಿಕೆಗೆ ಕಾರಣವಾಗಬಹುದು ಎಂದು ಎಕ್ಸ್ ಹೇಳಿದೆ. ಆದರೆ, ಕಾನೂನು ನಿರ್ಬಂಧಗಳಿಂದಾಗಿ ಈ ಆದೇಶಗಳನ್ನು ಪ್ರಕಟಿಸಲು ಸಾಧ್ಯವಾಗಿಲ್ಲ ಎಂದು ಅದು ಸ್ಪಷ್ಟಪಡಿಸಿದೆ.

ಅದಾಗ್ಯೂ, ಈ ಆದೇಶಗಳ ವಿರುದ್ಧ ತನ್ನ ಕಾನೂನು ಆಯ್ಕೆಗಳನ್ನು ತಾನು ಪರಿಶೀಲಿಸುತ್ತಿರುವುದಾಗಿ ಎಕ್ಸ್ ಹೇಳಿದ್ದು, ಭಾರತದ ಕಾನೂನುಗಳ ಪ್ರಕಾರ ಎಕ್ಸ್‌ಗೆ ಈ ಆದೇಶಗಳ ವಿರುದ್ಧ ನೇರವಾಗಿ ಕಾನೂನು ಸವಾಲು ಹಾಕುವ ಸಾಮರ್ಥ್ಯ ಸೀಮಿತವಾಗಿದೆ ಎಂದು ಅದು ಹೇಳಿದೆ. ಆದರೆ, ಈ ಆದೇಶದಿಂದ ತೊಂದರೆಗೆ ಒಳಗಾದ ಬಳಕೆದಾರರು ನ್ಯಾಯಾಲಯದ ಮೂಲಕ ಸೂಕ್ತ ಪರಿಹಾರವನ್ನು ಕೋರಲು ಅದು ಕೇಳಿಕೊಂಡಿದೆ. ಈ ಸಂಬಂಧ ಕೆಲವು ಕಾನೂನು ಸಹಾಯ ಸಂಸ್ಥೆಗಳಾದ iProbono India, National Legal Services Authority, Karnataka Legal Services Authority, ªÀÄvÀÄÛ Supreme Court Legal Services ಗಳ ಸಂಪರ್ಕ ವಿವರಗಳನ್ನು ಎಕ್ಸ್ ಒದಗಿಸಿದೆ.

ಈ ನಡುವೆ, ಮಾನವ ಹಕ್ಕುಗಳು ಮತ್ತು ಅಲ್ಪಸಂಖ್ಯಾತರ ವಿಷಯಗಳ ಮೇಲೆ ಕೇಂದ್ರೀಕರಿಸುವ ಸುದ್ದಿ ಸಂಸ್ಥೆ Maktoob Media, ಇಂಡಿಯನ್ ಎಕ್ಸ್‌ಪ್ರೆಸ್‌ನ ಉಪ ಸಂಪಾದಕ, ಹಿರಿಯ ಪತ್ರಕರ್ತ ಮುಝಮಿಲ್ ಜಲೀಲ್, ಸುದ್ದಿ ವೆಬ್ಸೈಟ್ ಕಾಶ್ಮೀರಿಯತ್, ಅರ್ಪಿತ್ ಶರ್ಮಾ, ರಕ್ಷಣಾ ವಿಷಯಗಳ ಮ್ಯಾಗಝೀನ್ ಫೋರ್ಸ್, ಜಾಕ್ಸನ್ ಹಿಂಕಲ್, ಮಾರಿಯೋ ನೌಫಲ್‌ರಂತಹ ಪ್ರಮುಖ ಬಳಕೆದಾರರ ಖಾತೆಗಳು ಸಹ ಬ್ಲಾಕ್ ಆಗಿವೆ ಎಂದು ವರದಿಯಾಗಿದೆ. ಕೇಂದ್ರ ಸರ್ಕಾರದ ಈ ಕ್ರಮದ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಮಿಶ್ರ ಪ್ರತಿಕ್ರಿಯೆಗಳು ವ್ಯಕ್ತವಾಗಿವೆ. ಕೆಲವರು ಈ ಖಾತೆಗಳು ತಪ್ಪು ಮಾಹಿತಿ ಹರಡುತ್ತವೆ ಎಂದು ಸರ್ಕಾರದ ಕ್ರಮವನ್ನು ಸಮರ್ಥಿಸಿದರೆ, ಇತರರು ಇದನ್ನು ಮುಕ್ತ ಅಭಿವ್ಯಕ್ತಿ ಮತ್ತು ಪತ್ರಿಕಾ ಸ್ವಾತಂತ್ರ್ಯದ ಮೇಲಿನ ದಾಳಿ ಎಂದು ಟೀಕಿಸಿದ್ದಾರೆ. 2024ರಲ್ಲಿ ತನ್ನ ವಿರುದ್ಧ ನಡೆದ ಬೃಹತ್ ರೈತ ಪ್ರತಿಭಟನೆಯ ಸಂದರ್ಭದಲ್ಲಿ ಕೂಡಾ ಕೇಂದ್ರ ಸರ್ಕಾರ ಎಕ್ಸ್‌ನ ಹಲವು ಖಾತೆಗಳನ್ನು ಬ್ಲಾಕ್ ಮಾಡುವಂತೆ ಆದೇಶಿಸಿತ್ತು. ಈ ವೇಳೆ ಕೂಡಾ ಎಕ್ಸ್ ಈ ಆದೇಶವನ್ನು ಮುಕ್ತ ಅಭಿವ್ಯಕ್ತಿಗೆ ಧಕ್ಕೆ ಎಂದು ಟೀಕಿಸಿತ್ತು

# ಭಾರತ-ಪಾಕ್ ಉದ್ವಿಗ್ನತೆ

## ನಾಗರಿಕರಿಗೆ ಹಲವು ದೇಶಗಳ ಎಚ್ಚರಿಕೆ

**ನವದೆಹಲಿ, ಮೇ 9:** ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವ ಮಧ್ಯೆ, ಯುನೈಟೆಡ್ ಸ್ಟೇಟ್ಸ್, ಯುನೈಟೆಡ್ ಕಿಂಗ್ಡಮ್ ಮತ್ತು ಕೆನಡಾ ಸೇರಿದಂತೆ ಹಲವು ದೇಶಗಳು ತನ್ನ ದೇಶದ ಪ್ರಯಾಣಿಕರಿಗೆ ಎಚ್ಚರಿಕೆ ನೀಡಿದ್ದು, ಜಮ್ಮು ಮತ್ತು ಕಾಶ್ಮೀರಕ್ಕೆ ತೆರಳದಂತೆ ಕಟ್ಟೆಚ್ಚರ ನೀಡಿವೆ.

ಪಹಲ್ಗಾಮ್ ಭಯೋತ್ಪಾದಕ ದಾಳಿಗೆ ಪ್ರತಿಕ್ರಿಯೆಯಾಗಿ ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿಯಾಗಿಸಿಕೊಂಡು ಭಾರತ ನಡೆಸಿದ ಆಪರೇಷನ್ ಸಿಂಧೂರ್ ಕಾರ್ಯಾಚರಣೆ ನಂತರ ಈ ಪ್ರಯಾಣ ನಿರ್ದೇಶನಗಳು ಬಂದಿವೆ.

ತನ್ನ ದೇಶದ ನಾಗರಿಕರಿಗೆ ಎಚ್ಚರಿಕೆ ನೀಡಿರುವ ಅಮೆರಿಕ, ತನ್ನ ದೇಶದ ಪ್ರಯಾಣಿಕರಿಗೆ ಜಮ್ಮು ಮತ್ತು ಕಾಶ್ಮೀರದ ಕೇಂದ್ರಾಡಳಿತ ಪ್ರದೇಶಕ್ಕೆ ತೆರಳದಂತೆ ಸೂಚಿಸಿದೆ. ಭಾರತ-ಪಾಕಿಸ್ತಾನ ಗಡಿ ಮತ್ತು ನಿಯಂತ್ರಣ ರೇಖೆಯ ಸುತ್ತಮುತ್ತಲಿನ ಪ್ರದೇಶಗಳಿಗೆ ಪ್ರಯಾಣಿಸುವುದನ್ನು ತಪ್ಪಿಸುವಂತೆಯೂ ಅದು ನಾಗರಿಕರಿಗೆ ಸಲಹೆ ನೀಡಿದೆ. ಅಮೆರಿಕ ವಿದೇಶಾಂಗ ಇಲಾಖೆಯು, ಪಾಕಿಸ್ತಾನಕ್ಕೆ ಸಾಮಾನ್ಯವಾಗಿ ಪ್ರಯಾಣವನ್ನು ಮರುಪರಿಶೀಲಿಸಿ ಎಂಬ ಸಲಹೆಯನ್ನು ಸಹ ನೀಡಿದೆ. ಅಮೆರಿಕದ ನಾಗರಿಕರು ಸುರಕ್ಷಿತವಾಗಿ ಪ್ರಯಾಣ ರದ್ದು ಮಾಡುವುದು ಸಾಧ್ಯವಾದರೆ ಸಕ್ರಿಯ ಸಂಘರ್ಷದ ಪ್ರದೇಶಗಳನ್ನು ತೊರೆಯಲು ಅಥವಾ ಸ್ಥಳದಲ್ಲಿ ಆಶ್ರಯ ಪಡೆಯಲು ನಾವು ಸಲಹೆ ನೀಡುತ್ತೇವೆ ಎಂದು ಉಲ್ಲೇಖಿಸಿದೆ.

ಭಾರತ ಮತ್ತು ಪಾಕಿಸ್ತಾನದ ಹಲವು ಪ್ರದೇಶಗಳಿಗೆ ಜಮ್ಮು ಮತ್ತು ಕಾಶ್ಮೀರಕ್ಕೆ ಪ್ರಯಾಣ ಎಚ್ಚರಿಕೆ ನೀಡಿದ ದೇಶಗಳ ಪಟ್ಟಿ ಹೀಗಿದೆ: ಯುನೈಟೆಡ್ ಸ್ಟೇಟ್ಸ್, ಯುನೈಟೆಡ್ ಕಿಂಗ್ಡಮ್, ಕೆನಡಾ, ಆಸ್ಟ್ರೇಲಿಯಾ, ಚೀನಾ, ಸಿಂಗಾಪುರ, ನೆದರ್ಲ್ಯಾಂಡ್ಸ್, ಸ್ವೀಡನ್ ದೇಶಗಳು ಸೇರಿವೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಉದ್ವಿಗ್ನತೆ ಹೆಚ್ಚುತ್ತಿರುವಂತೆ, ದೇಶದ ಹಲವಾರು ವಿಮಾನ ನಿಲ್ದಾಣಗಳು ಸ್ಥಗಿತಗೊಂಡ ನಂತರ ದೈನಂದಿನ ದೇಶೀಯ ವಿಮಾನ ಸಂಚಾರದ ಕನಿಷ್ಠ ಶೇಕಡಾ 11 ರಷ್ಟು ಪರಿಣಾಮ ಬೀರಿದೆ ಎಂದು ಶುಕ್ರವಾರ ದತ್ತಾಂಶಗಳು ತೋರಿಸಿವೆ.

ಉದ್ಯಮದ ಮಾಹಿತಿಯ ಪ್ರಕಾರ, ಸರಾಸರಿ ದೈನಂದಿನ ದೇಶೀಯ ವಿಮಾನಗಳು ಏಪ್ರಿಲ್‌ನಲ್ಲಿ 3,265 ರಿಂದ 2,907 ಕ್ಕೆ ಇಳಿದಿವೆ (ಮೇ 8 ರಂತೆ). ಮೇ 9,10ರ ಅವಧಿಯಲ್ಲಿ ಸುಮಾರು 670 ವಿಮಾನಯಾನ ಮಾರ್ಗಗಳು ಪರಿಣಾಮ ಬೀರುತ್ತವೆ. ಇದರಲ್ಲಿ ಫ್ಲೈಟ್ರಾಡರ್ 24 ಡೇಟಾ ಪ್ರಕಾರ, ಮುಚ್ಚಲ್ಪಟ್ಟ 24 ವಿಮಾನ ನಿಲ್ದಾಣಗಳಲ್ಲಿ 334 ಒಳಬರುವ ಮತ್ತು 336 ಹೊರಹೋಗುವ ವಿಮಾನಗಳು ಸೇರಿವೆ. ಶ್ರೀನಗರ, ಚಂಡೀಗಢ, ಅಮೃತಸರ, ಜಮ್ಮು ಮತ್ತು ಲೇಹ್ ವಿಮಾನ ನಿಲ್ದಾಣಗಳು ಹೆಚ್ಚು ಪರಿಣಾಮ ಬೀರುವ ಮಾರ್ಗಗಳಾಗಿವೆ. ಇತರ ಪ್ರಭಾವಿತ ವಿಮಾನ ನಿಲ್ದಾಣಗಳಲ್ಲಿ ಪಟಿಯಾಲ, ಭುಂತರ್, ಪಠಾಣ್ಕೋಟ್, ಬಿಕಾನೇರ್, ಜೈಸಲ್ಮೇರ್, ಮುಂದ್ರಾ, ಕೇಶೋದ್ ಮತ್ತು ರಾಜ್ಕೋಟ್ ಸೇರಿವೆ.

# ಯುದ್ಧ ಬೇಡ, ಮಾತುಕತೆ ಮೂಲಕ ಸಮಸ್ಯೆ ಬಗೆಹರಿಸಿಕೊಳ್ಳಿ: ಮುಫ್ತಿ




**ನವದೆಹಲಿ, ಮೇ 9:** ಭಾರತ ಮತ್ತು ಪಾಕಿಸ್ತಾನದ ನಡುವೆ ವೈಮಾನಿಕ ದಾಳಿ ನಡೆಯುತ್ತಲೇ ಇದೆ. ಇದರಿಂದ ನೂರಾರು ಜನರು ಪ್ರಾಣ ಕಳೆದುಕೊಂಡಿದ್ದಾರೆ. ಜಮ್ಮು ಮತ್ತು ಕಾಶ್ಮೀರದ ಮಾಜಿ ಮುಖ್ಯಮಂತ್ರಿ ಹಾಗೂ ಪೀಪಲ್ಸ್ ಡೆಮಾಕ್ರಟಿಕ್ ಪಕ್ಷದ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಈ ಬಗ್ಗೆ ಪ್ರತಿಕ್ರಿಯಿಸಿದ್ದು, ?ಮಾತುಕತೆ ಮತ್ತು ರಾಜತಾಂತ್ರಿಕತೆಯ ಮೂಲಕ ಭಾರತ ಮತ್ತು ಪಾಕಿಸ್ತಾನದ ನಡುವಿನ ಸಂಘರ್ಷವನ್ನು ಪರಿಹರಿಸಲು ಒತ್ತಾಯಿಸುತ್ತಾ ಭಾವುಕರಾಗಿದ್ದಾರೆ. ಎರಡೂ ದೇಶಗಳು ಮಿಲಿಟರಿ ಕಾರ್ಯಾಚರಣೆಗಳನ್ನು ನಿಲ್ಲಿಸಿ ಶಾಂತಿ ಮಾತುಕತೆಯ ಮೂಲಕ ಸಮಸ್ಯೆಯನ್ನು ಬಗೆಹರಿಸಿಕೊಳ್ಳುವತ್ತ ಯೋಚಿಸಬೇಕು. ಇಲ್ಲದಿದ್ದರೆ ಅನ್ಯಾಯವಾಗಿ ಮಹಿಳೆಯರು, ಮಕ್ಕಳು, ವೃದ್ಧರು, ಅಮಾಯಕರು ಜೀವ ಕಳೆದುಕೊಳ್ಳಬೇಕಾಗುತ್ತದೆ. ಈ ಗುಂಡಿನ ಚಕಮಕಿಯಲ್ಲಿ ಮಕ್ಕಳು ಮತ್ತು ಮಹಿಳೆಯರು ಸಿಕ್ಕಿಹಾಕಿಕೊಳ್ಳುತ್ತಿದ್ದಾರೆ.

ಇದರಲ್ಲಿ ಅವರ ತಪ್ಪೇನು ಮಿಲಿಟರಿ ಕಾರ್ಯಾಚರಣೆಯು ಎಂದಿಗೂ ಪರಿಹಾರ ಅಥವಾ ಶಾಂತಿಯನ್ನು ಒದಗಿಸುವುದಿಲ್ಲ ಎಂದು ಹೇಳಿದ್ದಾರೆ.

# ಸಾಂಬಾದಲ್ಲಿ ಬಿಎಸ್‌ಎಫ್ ಒಳನುಸುಳುವಿಕೆ ವಿಫಲ 7 ಭಯೋತ್ಪಾದಕರ ಹತ್ಯೆ

**ಜಮ್ಮು, ಮೇ 9 :** ಭಾರತ ಮತ್ತು ಪಾಕಿಸ್ತಾನದ ನಡುವಿನ ಭಾರೀ ಶೆಲ್ ದಾಳಿ ಮತ್ತು ಹೆಚ್ಚಿದ ಉದ್ವಿಗ್ನತೆಯ ನಡುವೆ, ಗಡಿ ಭದ್ರತಾ ಪಡೆ ಜಮ್ಮುವಿನ ಸಾಂಬಾ ಸೆಕ್ಟರ್‌ನಲ್ಲಿ ಒಳನುಸುಳುವಿಕೆಯನ್ನು ಯಶಸ್ವಿಯಾಗಿ ವಿಫಲಗೊಳಿಸಿದೆ ಮತ್ತು ಏಳು ಭಯೋತ್ಪಾದಕರನ್ನು ತಟಸ್ಥಗೊಳಿಸಿದೆ. ಮೇ 8-9ರ ಮಧ್ಯರಾತ್ರಿ ಜಮ್ಮುವಿನ ಸಾಂಬಾ ಸೆಕ್ಟರ್‌ನಲ್ಲಿ, ಭಯೋತ್ಪಾದಕರ ದೊಡ್ಡ ಗುಂಪಿನ ಒಳನುಸುಳುವಿಕೆ ಪ್ರಯತ್ನವನ್ನು ಕಣ್ಗಾವಲು ಗ್ರಿಡ್ ಪತ್ತೆ ಮಾಡಿದೆ ಎಂದು ಬಿಎಸ್‌ಎಫ್ ಮೂಲಗಳು ತಿಳಿಸಿವೆ. "ಈ ಒಳನುಸುಳುವಿಕೆ ಪ್ರಯತ್ನಕ್ಕೆ ಪಾಕ್ ರೇಂಜರ್ಸ್ ಪೋಸ್ಟ್ ಧಂಧರ್‌ನಿಂದ ಗುಂಡಿನ ದಾಳಿ ಬೆಂಬಲ ನೀಡಿತು" ಎಂದು ಬಿಎಸ್‌ಎಫ್ ಮೂಲಗಳು ತಿಳಿಸಿವೆ. ಎಚ್ಚರದಿಂದಿದ್ದ ಬಿಎಸ್‌ಎಫ್ ಪಡೆಗಳು ಒಳನುಸುಳುವಿಕೆಯನ್ನು ತಟಸ್ಥಗೊಳಿಸಿದ್ದು, ಕನಿಷ್ಠ ಏಳು ಭಯೋತ್ಪಾದಕರನ್ನು ಕೊಂದು ಪಾಕ್ ಪೋಸ್ಟ್ ಧಂಧರ್‌ಗೆ ವ್ಯಾಪಕ ಹಾನಿಯನ್ನುಂಟುಮಾಡಿದೆ ಎಂದು ಮೂಲಗಳು ತಿಳಿಸಿವೆ.



ಇದಕ್ಕೂ ಮೊದಲು ಬಿಎಸ್‌ಎಫ್ ಜಮ್ಮು ಗುರುವಾರ ಎಕ್ಸ್ ಪೋಸ್ಟ್‌ನಲ್ಲಿ ಸಾಂಬಾ ಸೆಕ್ಟರ್‌ನ ಐಬಿ ಉದ್ದಕ್ಕೂ ಸೈನಿಕರು ರಾತ್ರಿ 11 ಗಂಟೆಗೆ ಭಯೋತ್ಪಾದಕರ ಒಳನುಸುಳುವಿಕೆಯನ್ನು ಗಮನಿಸಿ ಅವರಿಗೆ ಸವಾಲು ಹಾಕಿದ್ದಾರೆ ಎಂದು ಹೇಳಿದೆ.




ಬಾರಾಮುಲ್ಲಾ ಜಿಲ್ಲೆಯ ಉರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಗಾಯಾಳುಗಳನ್ನು ಜಮ್ಮು ಮತ್ತು ಕಾಶ್ಮೀರ ಲೆಫ್ಟಿನೆಂಟ್ ಗವರ್ನರ್ ಮನೋಜ್ ಸಿನ್ಹಾ ಶುಕ್ರವಾರ ಭೇಟಿಯಾಗಿ ಸಾಂತ್ವನ ಹೇಳಿದರು.

# ಜೈನಕಾಶಿ ಮೂಡಬಿದ್ರೆಗೆ ವಿದೇಶಿ ಪ್ರವಾಸಿಗರ ಭೇಟಿ



**ಮುಂಬಯಿ, ಮೇ 9:** ಈ ವರ್ಷದ ಕೊನೆ ಬಾರಿಯ ಪ್ರವಾಸಿಗರನ್ನು ಹೊತ್ತು ತಂದ 7ಸೀ ವಯೋಜರ್ ಹಡಗಿನಲ್ಲಿ ನಮ್ಮ ದಕ್ಷಿಣ ಕನ್ನಡ ಜಿಲ್ಲೆ ಮಂಗಳೂರುಗೆ ಬಂದ ಹಡಗಿನಲ್ಲಿ ಬಂದವರಲ್ಲಿ ಸುಮಾರು ಜನ ಪ್ರವಾಸಿಗರು ಇತಿಹಾಸ ಪ್ರಸಿದ್ಧ ಸಾವಿರ ಕಂಬ ಬಸದಿಗೆ ಇಂದಿಲ್ಲಿ ಸಂದರ್ಶನ ಮಾಡಿದರು.

ಪ್ರವಾಸಿಗರಲ್ಲಿ ಅಮೇರಿಕಾ ದೇಶದ ಪ್ರಜೆಗಳು ಹೆಚ್ಚಿನವರಾಗಿದ್ದು ಈ ಸಂದರ್ಭ ಉಪಸ್ಥಿತರಿದ್ದ ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಪಟ್ಟಾಚಾರ್ಯ ಪಂಡಿತಚಾರ್ಯ ವರ್ಯ ಮಹಾ ಸ್ವಾಮೀಜಿ ಶ್ರೀ ದಿಗಂಬರ ಜೈನ ಮಠ ಮೂಡುಬಿದಿರೆ ಬಸದಿ ಇತಿಹಾಸ ಹಾಗೂ ಧರ್ಮಕ್ಕೆ ಸಂಬಂಧಪಟ್ಟ ವಿಷಯಗಳ ಮಾಹಿತಿಯನ್ನಿತ್ತರು. ಲೋಕ ಶಾಂತಿಗಾಗಿ ಸಾಮೂಹಿಕ ಪ್ರಾರ್ಥನೆ ಸಲ್ಲಿಸಲಾಗಿದ್ದು, ಪಾಕ್ ಭಯೋತ್ಪದಕ ಉಗ್ರ ದಾಳಿಯಿಂದ ಹುತಾತ್ಮರಾದ

ಭಾರತಿಯ ಸೈನಿಕರಿಗೆ ಹಾಗೂ ನಾಗರೀಕರಿಗೆ ಉತ್ತಮ ಸದ್ಗತಿ ಕೋರಿ ಪ್ರಾರ್ಥಿಸಲಾಯಿತು. ಮಂಗಳೂರು ಲಿಯಾ ಟ್ರಾವೆಲ್ಸ್ ರೋಹನ್ ಮತ್ತಿತರ ಪ್ರವಾಸಿ ಮಾರ್ಗದರ್ಶಕರು ಜತೆಗಿದ್ದರು. ಶ್ರೀಗಳು ಎಲ್ಲರಿಗೂ ಶುಭಯಾತ್ರೆ ಕೋರಿ ಹರಸಿ ಆಶೀರ್ವಾದ ಮಾಡಿದರು.

# ಗಡಿ ಜನರಿಗೆ ರಕ್ಷಣೆ ಆಗತ್ಯ: ಜಮಾತೆ-ಇ-ಇಸ್ಲಾಮಿ ಹಿಂದ್

**ನವದೆಹಲಿ, ಮೇ 9:** ಭಾರತ ಮತ್ತು ಪಾಕಿಸ್ತಾನದ ನಡುವಿನ ನಿರಂತರ ಉದ್ವಿಗ್ನತೆ, ಶೆಲ್ ದಾಳಿ ಮತ್ತು ದಾಳಿಗಳ ಬಗ್ಗೆ ಜಮಾತೆ-ಇ-ಇಸ್ಲಾಮಿ ಹಿಂದ್ ಅಧ್ಯಕ್ಷ ಸೈಯದ್ ಸಾದತುಲ್ಲಾ ಹುಸ್ಸೈನಿ ಗಂಭೀರ ಕಳವಳ ವ್ಯಕ್ತಪಡಿಸಿದ್ದಾರೆ.



ಯುದ್ಧ ಮತ್ತು ಕಲಹ ಯಾರ ಹಿತಾಸಕ್ತಿಯಲ್ಲೂ ಅಲ್ಲ; ಗಡಿ ಪ್ರದೇಶಗಳಲ್ಲಿ ನಾಗರಿಕರಿಗೆ ರಕ್ಷಣೆ ಬೇಕು ಎಂದು ಆಗ್ರಹಿಸಿದ್ದಾರೆ. ಸಂಘರ್ಷವನ್ನು ಹೆಚ್ಚಿಸುವ ಉದ್ದೇಶವಿಲ್ಲ ಎಂದು ಭಾರತ ಸರ್ಕಾರ ಪದೇ ಪದೇ ಹೇಳುತ್ತಿರುವುದನ್ನು ಹುಸ್ಸೈನಿ ಸ್ವಾಗತಿಸಿದರು.

ಭಾರತ ಮತ್ತು ಪಾಕಿಸ್ತಾನ ಎರಡೂ ದೇಶಗಳು ತಮ್ಮ ಜನರ ಸಮೃದ್ಧಿ-ಪ್ರಗತಿಗಾಗಿ ಶ್ರಮಿಸುತ್ತಿರುವಾಗ ಬಡತನ ಮತ್ತು ಅಭಾವದೊಂದಿಗೆ ಹೋರಾಡುತ್ತಿವೆ ಎಂದು ಅವರು ಒತ್ತಿ ಹೇಳಿದರು. ಎರಡೂ ರಾಷ್ಟ್ರಗಳು ಪರಮಾಣು ಶಕ್ತಿಗಳಾಗಿರುವುದರಿಂದ ಯುದ್ಧ ಮತ್ತು ಅಶಾಂತಿ ಯಾರ ಹಿತಾಸಕ್ತಿಗೂ ಪೂರಕವಾಗಿರುವುದಿಲ್ಲ. ಎರಡೂ ದೇಶಗಳ ಬಡ ಜನಸಂಖ್ಯೆಗೆ ಹೆಚ್ಚು ಹಾನಿ ಮಾಡುತ್ತದೆ ಎಂದು ಅವರು ಎಚ್ಚರಿಸಿದರು. ಸುಸ್ಥಿರ ಶಾಂತಿಯತ್ತ ತ್ವರಿತ ಮತ್ತು ಸ್ಪಷ್ಟ ಕ್ರಮಗಳನ್ನು ತೆಗೆದುಕೊಳ್ಳುವಂತೆ ಅವರು ಎರಡೂ ಕಡೆಯ ರಾಜಕೀಯ ಮತ್ತು ಮಿಲಿಟರಿ ನಾಯಕತ್ವವನ್ನು ಒತ್ತಾಯಿಸಿದರು.

ಭಾರತದ ಗಡಿ ಪ್ರದೇಶಗಳಲ್ಲಿ ನಾಗರಿಕ ಸಾವುನೋವುಗಳ ವರದಿಗಳನ್ನು ಉಲ್ಲೇಖಿಸಿದ ಹುಸ್ಸೈನಿ, ಮುಗ್ಧ ನಾಗರಿಕರು ಎದುರಿಸುತ್ತಿರುವ ಬೆದರಿಕೆಗಳು ತುರ್ತು ಗಮನವನ್ನು ಬಯಸುತ್ತವೆ ಎಂದು ಒತ್ತಿ ಹೇಳಿದ ಅವರು, ಕೊಲ್ಲಲ್ಪಟ್ಟವರ ಕುಟುಂಬಗಳಿಗೆ ಅವರು ಹೃತ್ಪೂರ್ವಕ ಸಂತಾಪ ಸೂಚಿಸಿದರು.

ಅವರಿಗೆ ಅಗತ್ಯ ನೆರವು ಮತ್ತು ರಕ್ಷಣೆಯನ್ನು ಒದಗಿಸಲು ಸರ್ಕಾರವನ್ನು ಆದ್ಯತೆ ನೀಡುವಂತೆ ಕರೆ ನೀಡಿದರು. ಪಾಕಿಸ್ತಾನದ ಶೆಲ್ ದಾಳಿಯಲ್ಲಿ 4 ಮಕ್ಕಳು ಸೇರಿದಂತೆ ಕನಿಷ್ಠ 16 ನಾಗರಿಕರು ಸಾವನ್ನಪ್ಪಿದ್ದಾರೆ. ಒಬ್ಬ ಸೈನಿಕ ಕೂಡ ಸಾವನ್ನಪ್ಪಿದ್ದಾನೆ.

ಮಾಧ್ಯಮ ವರದಿಗಳ ಪ್ರಕಾರ, ಗಡಿಯ ಇನ್ನೊಂದು ಬದಿಯಲ್ಲಿ ಹಲವಾರು ನಾಗರಿಕರು ಸಹ ಸಾವನ್ನಪ್ಪಿದ್ದಾರೆ. ಜನಾಂಗ, ಧರ್ಮ, ಭಾಷೆ, ರಾಷ್ಟ್ರೀಯತೆ ಅಥವಾ ವರ್ಗವನ್ನು ಲೆಕ್ಕಿಸದೆ ಮುಗ್ಧ ನಾಗರಿಕರನ್ನು, ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳನ್ನು ಕೊಲ್ಲುವುದು ತೀವ್ರ ದುರಂತ. ಎಲ್ಲ ಸಂದರ್ಭಗಳಲ್ಲಿಯೂ ಮುಗ್ಧ ಮಾನವ ಜೀವಗಳ ರಕ್ಷಣೆಯನ್ನು ಖಚಿತಪಡಿಸಿಕೊಳ್ಳುವುದು ಎಲ್ಲರ ಸಾಮೂಹಿಕ ಜವಾಬ್ದಾರಿಯಾಗಿದೆ ಎಂದು ಅವರು ಹೇಳಿದರು.

ಗಡಿಯ ಪಾಕಿಸ್ತಾನದ ಭಾಗದಲ್ಲಿ ನಾಗರಿಕರ ಸಾವುಗಳ ಮಾಧ್ಯಮ ವರದಿಗಳನ್ನು ಅವರು ಒಪ್ಪಿಕೊಂಡರು. ಅವರ ಗುರುತನ್ನು ಲೆಕ್ಕಿಸದೆ, ಮುಗ್ಧ ನಾಗರಿಕರನ್ನು; ವಿಶೇಷವಾಗಿ ಮಹಿಳೆಯರು ಮತ್ತು ಮಕ್ಕಳನ್ನು ಕೊಲ್ಲುವುದು ತೀವ್ರ ದುರಂತ ಎಂದು ಹೇಳಿದರು. ಎಲ್ಲಾ ಸಂದರ್ಭಗಳಲ್ಲಿಯೂ ಮುಗ್ಧ ಮಾನವ ಜೀವಗಳ ರಕ್ಷಣೆಯನ್ನು ಖಚಿತಪಡಿಸಿಕೊಳ್ಳಲು ಎಲ್ಲ ದೇಶಗಳ ಸಾಮೂಹಿಕ ಜವಾಬ್ದಾರಿಯನ್ನು ಅವರು ಒತ್ತಿ ಹೇಳಿದರು. ಈ ಪ್ರದೇಶದಲ್ಲಿ ಭಯೋತ್ಪಾದನೆಯನ್ನು ಗಂಭೀರ ಸಮಸ್ಯೆ ಎಂದು ಎತ್ತಿ ತೋರಿಸಿದ ಹುಸೇನಿ, ಭಾರತ ಮತ್ತು ಪಾಕಿಸ್ತಾನ ಎರಡೂ ನಾಗರಿಕರಿಗೆ ಭಾರಿ ನಷ್ಟವನ್ನುಂಟುಮಾಡಿವೆ. ಈಗ ಸಂಕುಚಿತ ಹಿತಾಸಕ್ತಿಗಳನ್ನು ಮೀರಿ ಈ ಪ್ರಮುಖ ಸಮಸ್ಯೆಗೆ ಶಾಶ್ವತ ಪರಿಹಾರವನ್ನು ಕಂಡುಕೊಳ್ಳುವತ್ತ ಗಮನಹರಿಸುವ ಸಮಯ ಬಂದಿದೆ ಎಂದು ಅವರು ಹೇಳಿದರು.

ಪಾಕಿಸ್ತಾನದ ಸಶಸ್ತ್ರ ಪಡೆಗಳು ಗುರುವಾರ ರಾತ್ರಿ ಮತ್ತು ಶುಕ್ರವಾರ ಬೆಳಿಗ್ಗೆ ಭಾರತದ ಪಶ್ಚಿಮ ಗಡಿಯಲ್ಲಿ ಡ್ರೋನ್‌ಗಳು ಮತ್ತು ಇತರ ಶಸ್ತ್ರಾಸ್ತ್ರಗಳನ್ನು ಬಳಸಿ ಅನೇಕ ದಾಳಿಗಳನ್ನು ನಡೆಸಿದವು ಎಂದು ಭಾರತೀಯ ಸೇನೆ ಹೇಳಿದೆ. ಆದರೆ, ಯಾವುದೇ ಸಾವುನೋವುಗಳು ವರದಿಯಾಗಿಲ್ಲ. ಪಾಕಿಸ್ತಾನ ಸಶಸ್ತ್ರ ಪಡೆಗಳು 2025ರ ಮೇ 8 ಮತ್ತು 9ರ ಮಧ್ಯರಾತ್ರಿ ಇಡೀ ಪಶ್ಚಿಮ ಗಡಿಯಲ್ಲಿ ಡ್ರೋನ್‌ಗಳು ಮತ್ತು ಇತರ ಯುದ್ಧಸಾಮಗ್ರಿಗಳನ್ನು ಬಳಸಿ ಅನೇಕ ದಾಳಿಗಳನ್ನು ನಡೆಸಿದವು ಎಂದು ಸೇನೆಯು ಎಕ್ಸ್‌ನಲ್ಲಿ ಪೋಸ್ಟ್ ಮಾಡಿದೆ.

# ಬೆಂಗಳೂರಿನಲ್ಲಿ ಸೆ.8 ರಿಂದ 10ರ ವರೆಗೆ ಅಖಿಲ ಭಾರತ ಮಟ್ಟದ ಸ್ಪೀಕರ್‌ಗಳ ಸಮಾವೇಶ

**ಮಂಗಳೂರು, ಮೇ.9–** ಕಾಮನ್ ವೆಲ್ತ್ ಸಂಸದೀಯ ಸಂಘದ ಅಖಿಲ ಭಾರತ ಮಟ್ಟದ ಸ್ಪೀಕರ್‌ಗಳ ಸಮಾವೇಶವನ್ನು ಸೆಪ್ಟೆಂಬರ್ 8ರಿಂದ 10ರವರೆಗೆ ಬೆಂಗಳೂರಿನಲ್ಲಿ ಆಯೋಜಿಸಲು ಸಿದ್ಧತೆ ನಡೆಸಲಾಗಿದೆ. ಪ್ರಥಮ ಬಾರಿಗೆ ಕರ್ನಾಟಕಕ್ಕೆ ಈ ಸಮ್ಮೇಳನದ ಆತಿಥ್ಯ ವಹಿಸುವ ಅವಕಾಶ ದೊರೆತಿದೆ ಎಂದು ವಿಧಾನಸಭೆ ಸ್ಪೀಕರ್ ಯು.ಟಿ.ಖಾದರ್ ಹೇಳಿದರು.

ಶುಕ್ರವಾರ ಇಲ್ಲಿ ಸುದ್ದಿ ಗೋಷ್ಠಿಯಲ್ಲಿ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಒಂದೆರಡು ಸ್ಥಳಗಳನ್ನು ಗುರುತಿಸಲಾಗಿದ್ದು, ಯಾವುದಾದರೂ ಒಂದು ಸ್ಥಳವನ್ನು ಆಯ್ಕೆ ಮಾಡಲಾಗುವುದು. ಸೆಪ್ಟೆಂಬರ್ 11ರಂದು, ಸಮ್ಮೇಳನದಲ್ಲಿ ಭಾಗವಹಿಸುವ ಸ್ಪೀಕರ್‌ಗಳಿಗೆ ರಾಜ್ಯ ಪ್ರವಾಸಕ್ಕೆ ಕರೆದೊಯ್ಯಲು ಯೋಚಿಸಲಾಗಿದೆ. ಮೈಸೂರು, ಮಂಗಳೂರು ಹಾಗೂ ಬೇಲೂರು–ಹಳೇಬೀಡು ಈ ಮೂರು ಪ್ರವಾಸಿ ತಾಣ ಗಳಲ್ಲಿ ಯಾವುದಾದರೂ ಒಂದು ಸ್ಥಳವನ್ನು ಅಂತಿಮಗೊಳಿಸಲಾಗುವುದು ಎಂದರು.



ಸಮ್ಮೇಳನಕ್ಕೆ ರಾಜ್ಯ ಸರ್ಕಾರ ಸಂಪೂರ್ಣ ಸಹಕಾರ ನೀಡಿದೆ. ವಿಧಾನಸಭೆ ಸ್ಪೀಕರ್ ಮತ್ತು ವಿಧಾನ ಪರಿಷತ್ ಸಭಾಪತಿ ನೇತೃತದಲ್ಲಿ ಸಮ್ಮೇಳನ ನಡೆಯಲಿದೆ. ದೇಶದ ಎಲ್ಲ ರಾಜ್ಯಗಳ ಸ್ಪೀಕರ್ ಹಾಗೂ ಉಪ ಸ್ಪೀಕರ್ ಗಳು, ವಿಧಾನ ಪರಿಷತ್‌ನ ಸಭಾಪತಿ, ಉಪ ಸಭಾಪತಿಗಳು, ಕಾರ್ಯದರ್ಶಿಗಳು, ಹಿರಿಯ ಅಧಿಕಾರಿಗಳು ಭಾಗವಹಿಸಲಿದ್ದಾರೆ.

ಪ್ರಜಾಪ್ರಭುತ್ವ ಬಲಿಷ್ಠಗೊಳಿಸುವುದು, ಸ್ಪೀಕರ್‌ಗಳ ಪಾತ್ರ ಸೇರಿದಂತೆ ಕೆಲವು ನಿರ್ದಿಷ್ಟ ವಿಷಯಗಳ ಮೇಲೆ ಸಮ್ಮೇಳನದಲ್ಲಿ ಚರ್ಚಿಸಲಾಗುತ್ತದೆ. ಸೆಪ್ಟೆಂಬರ್ 8ರಂದು ಸಂಜೆ 6.30ಕ್ಕೆ ವಿಧಾನ ಸೌಧದಲ್ಲಿ ಲೋಕಸಭಾ ಸ್ಪೀಕರ್ ಓಂ ಬಿರ್ಲಾ ಉಪಸ್ಥಿತಿಯಲ್ಲಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮೇಳನಕ್ಕೆ ಚಾಲನೆ ನೀಡುವರು. ಉದ್ಘಾಟನೆ ಮತ್ತು ಸಮಾರೋಪ ಕಾರ್ಯಕ್ರಮಗಳಿಗೆ ಶಾಸಕರನ್ನು ಆಹ್ವಾನಿಸಲಾಗುವುದು. ನಂತರದ ಕಾರ್ಯಕ್ರಮಗಳಲ್ಲಿ ಆಹ್ವಾನಿತರು ಮಾತ್ರ ಭಾಗವಹಿಸುತ್ತಾರೆ ಎಂದು ಹೇಳಿದರು.



ರಾಷ್ಟ್ರೀಯ ಧ್ವಜ ಪ್ರದರ್ಶನ ನಿಯಮ ಹೇಳುತ್ತದೆ: ಧ್ವಜವು ನೆಲ ಅಥವಾ ನೆಲವನ್ನು ಮುಟ್ಟಲು ಬಿಡಬಾರದು. ಶುಕ್ರವಾರ ಬೆಂಗಳೂರಿನ ವಿಧಾನಸೌಧದಲ್ಲಿ ಕೆಪಿಸಿಸಿ ಆಯೋಜಿಸಿದ್ದ ಭಾರತೀಯ ಸೇನೆಯನ್ನು ಬೆಂಬಲಿಸಿ ತಿರಂಗಾ ಯಾತ್ರೆಯ ಸಂದರ್ಭದಲ್ಲಿ ವಿಧಾನಸೌಧದ ಬಳಿ ಕಂಡುಬಂದ ತ್ರಿವರ್ಣ ಧ್ವಜ.

### ಭಾರತ ಹಾಗೂ ಪಾಕಿಸ್ತಾನ ನಡುವಿನ ದಾಳಿ-ಪ್ರತಿದಾಳಿ

## ವಿಮಾನ ಸಂಚಾರ ವ್ಯವಸ್ಥೆ ಮೇಲೂ ಗಂಭೀರ ಪರಿಣಾಮ

**ಬೆಂಗಳೂರು, ಮೇ.9–**ಭಾರತ ಹಾಗೂ ಪಾಕಿಸ್ತಾನ ನಡುವಿನ ದಾಳಿ–ಪ್ರತಿದಾಳಿಗಳು ದೇಶದ ವಿಮಾನ ಸಂಚಾರ ವ್ಯವಸ್ಥೆ ಮೇಲೂ ಗಂಭೀರ ಪರಿಣಾಮ ಬೀರಿದೆ.

ಪ್ರತಿದಾಳಿ ಸಾಧ್ಯತೆಯ ಹಿನ್ನೆಲೆ ಎಲ್ಲ ವಿಮಾನ ನಿಲ್ದಾಣಗಳಲ್ಲಿ ಕಟ್ಟೆಚ್ಚರ ವಹಿಸಲಾಗಿದ್ದು, ವಿಮಾನ ಹಾರಾಟ ಕೂಡ ರದ್ದಾಗಿವೆ. ಇನ್ನು ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣವು ತನ್ನ ಪ್ರಯಾಣಿಕರಿಗೆ ಮಹತ್ವದ ಮಾಹಿತಿ ನೀಡಿದೆ.



ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಆಗಮಿಸುವ ಪ್ರಯಾಣಿಕರು ತಮ್ಮ ವಿಮಾನ ನಿರ್ಗಮನದ ಕನಿಷ್ಠ ಮೂರು ಗಂಟೆಗಳಿಗೂ ಮುನ್ನವೇ ವಿಮಾನ ನಿಲ್ದಾಣಕ್ಕೆ ಆಗಮಿಸುವಂತೆ ಕೋರಿದೆ. ವಿಮಾನ ನಿಲ್ದಾಣದಲ್ಲಿ ಭದ್ರತಾ ತಪಾಸಣೆಯನ್ನು ಹೆಚ್ಚಿಸಿದ ಕಾರಣ ಈ ಸೂಚನೆಯನ್ನು ನೀಡಿರುವುದಾಗಿ ತಿಳಿಸಿದೆ.

ಪ್ರಯಾಣಿಕರು ತಾವು ಪ್ರಯಾಣ ಮಾಡಲಿರುವ ವಿಮಾನಗಳ ವೇಳಾಪಟ್ಟಿಗಳ ಕುರಿತು ಆಯಾ ವಿಮಾನಯಾನ ಸಂಸ್ಥೆಗಳನ್ನು ಸಂಪರ್ಕಿಸುವಂತೆ ವಿನಂತಿ ಮಾಡಿದೆ. ಕೆಲವು ವಾಯುಯಾನ ಪ್ರದೇಶಗಳಲ್ಲಿ ವಿಮಾನ ಹಾರಾಟಕ್ಕೆ ನಿರ್ಬಂಧ ಇರುವುದರಿಂದ ಇದು ನಮ್ಮ ಸಂಪರ್ಕ ಜಾಲದಲ್ಲಿನ ಕೆಲವು ವಿಮಾನಗಳ ಸೇವೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆಯಿದೆ. ಈ ಕಾರಣ, ಪ್ರಯಾಣಿಕರು ವಿಮಾನ ನಿಲ್ದಾಣಕ್ಕೆ ಆಗಮಿಸುವ ಮುನ್ನ, ತಾವು ಪ್ರಯಾಣ ಮಾಡಲಿರುವ ವಿಮಾನಗಳ ವೇಳಾಪಟ್ಟಿಗಳ ಕುರಿತು ಆಯಾ ವಿಮಾನಯಾನ ಸಂಸ್ಥೆಗಳ ಜೊತೆಗೆ ಸಂಪರ್ಕಿಸಿ, ಪರಿಶೀಲಿಸಿ ಎಂದು ಹೇಳಿದೆ.

ಪ್ರಯಾಣಿಕರು ತಮ್ಮ ವಿಮಾನಗಳ ವೇಳಾಪಟ್ಟಿಯಲ್ಲಿನ ಬದಲಾವಣೆಗಳನ್ನು ಆಯಾ ವಿಮಾನಯಾನ ಸಂಸ್ಥೆಗಳ ಅಧಿಕೃತ ಟ್ವಿಟರ್ (ಎಕ್ಸ್) ಖಾತೆಗಳ ಮೂಲಕವೂ ಪಡೆಯಬಹುದು ಎಂದು ತಿಳಿಸಿದೆ. ಭಾರತ ಮತ್ತು ಪಾಕಿಸ್ತಾನದ ನಡುವಿನ ಉದ್ವಿಗ್ನತೆ ಹೆಚ್ಚುತ್ತಿರುವ ಹಿನ್ನೆಲೆ ಈ ಕ್ರಮ ಕೈಗೊಳ್ಳಲಾಗಿದೆ. ಇದರಿಂದಾಗಿ ನಾಗರಿಕ ವಿಮಾನಯಾನ ಭದ್ರತಾ ಬ್ಯೂರೋ ಎಲ್ಲ ವಿಮಾನಗಳಿಗೆ ಕಡ್ಡಾಯ ದ್ವಿತೀಯ ಲ್ಯಾಡರ್ ಪಾಯಿಂಟ್ ತಪಾಸಣೆ, ವಿಮಾನ ನಿಲ್ದಾಣದ ಟರ್ಮಿನಲ್ ಕಟ್ಟಡಗಳಲ್ಲಿ ಹೊರಗಿನವರ ಪ್ರವೇಶ ನಿಷೇಧ ಮತ್ತು ಒಟ್ಟಾರೆ ಭದ್ರತೆ ಸೇರಿದಂತೆ ಕಠಿಣ ಕ್ರಮಗಳನ್ನು ಕೈಗೊಳ್ಳುವಂತೆ ಸೂಚಿಸಿದೆ.

ಪಾಕಿಸ್ತಾನದ ಜತೆಗಿನ ಸಂಘರ್ಷದ ಹಿನ್ನೆಲೆಯಲ್ಲಿ ಭಾರತದ 27 ವಿಮಾನ ನಿಲ್ದಾಣಗಳ ಕಾರ್ಯಾಚರಣೆಯನ್ನು ಮುಂಜಾನೆವರೆಗೆ ಸ್ಥಗಿತಗೊಳಿಸಲಾಗಿತ್ತು. ಭಾರತೀಯ ವಿಮಾನಯಾನ ಸಂಸ್ಥೆಗಳು ಗುರುವಾರ ಒಟ್ಟು 430 ವಿಮಾನಗಳ ಹಾರಾಟವನ್ನು ರದ್ದುಪಡಿಸಿದ್ದು, ದೇಶದ ಒಟ್ಟು ವೇಳಾಪಟ್ಟಿಯ ಶೇ 3ರಷ್ಟು ವಿಮಾನಗಳು ಹಾರಾಟ ನಿಲ್ಲಿಸಿವೆ. 27 ವಿಮಾನ ನಿಲ್ದಾಣಗಳನ್ನು ಮೇ 10ರ ವರೆಗೂ ಬಂದ್ ಮಾಡಲಾಗಿದ್ದು, ಶ್ರೀನಗರ, ಜಮ್ಮು, ಲೇಹ್, ಚಂಡೀಗಢ, ಅಮೃತಸರ, ಲೂಧಿಯಾನ, ಪಟಿಯಾಲ, ಬಟಿಂಡಾ, ಹಲ್ವಾರ, ಪಠಾಣ್ಕೋಟ್, ಶಿಮ್ಲಾ, ಧರ್ಮಶಾಲಾ, ಜೈಸಲ್ಮೇರ್, ಜೋಧ್ಪುರ, ಬಿಕಾನೇರ್, ಜಾಮ್ನಗರ, ರಾಜ್ಕೋಟ್, ಪೋರಬಂದರ್, ಗ್ವಾಲಿಯರ್ ಮತ್ತು ಹಿಂಡನ್ ಸೇರಿದಂತೆ ಹಲವು ವಿಮಾನ ನಿಲ್ದಾಣಗಳನ್ನು ಬಂದ್ ಮಾಡಲಾಗಿದೆ.

ವಿಮಾನಯಾನ ಸಂಸ್ಥೆಗಳ ಅಂದಾಜಿನ ಪ್ರಕಾರ ಮೇ 8ರಂದು ಮುನ್ನೆಚ್ಚರಿಕೆ ಕ್ರಮವಾಗಿ ಸುಮಾರು 450 ದೇಶೀಯ ವಿಮಾನಗಳನ್ನು ರದ್ದುಗೊಳಿಸಲಾಗಿದ್ದು, ಜಮ್ಮು, ಶ್ರೀನಗರ, ಲೇಹ್, ಅಮೃತಸರ ಮತ್ತು ಶಿಮ್ಲಾ ಸೇರಿದಂತೆ ವಾಯುವ್ಯ ಭಾರತದಾದ್ಯಂತ 20ಕ್ಕೂ ಹೆಚ್ಚು ವಿಮಾನ ನಿಲ್ದಾಣಗಳನ್ನು ಸರ್ಕಾರ ಸ್ಥಗಿತಗೊಳಿಸಿತ್ತು.

### ಭೂವ್ಯಾಜ್ಯ, ಸಿವಿಲ್ ತಗಾದೆ

## ಅಧಿಕಾರಿಗಳು, ಸಿಬ್ಬಂದಿ ಭಾಗಿಯಾದರೆ ನಿರ್ದಾಕ್ಷಿಣ್ಯ ಕ್ರಮ: ಪೊಲೀಸ್ ಆಯುಕ್ತ ದಯಾನಂದ ಎಚ್ಚರಿಕೆ




**ಬೆಂಗಳೂರು, ಮೇ.9–** ಭೂ ವ್ಯಾಜ್ಯ, ಸಿವಿಲ್ ತಗಾದೆಗಳಲ್ಲಿ ಪೊಲೀಸ್ ಅಧಿಕಾರಿಗಳು ಅಥವಾ ಸಿಬ್ಬಂದಿಗಳು ಭಾಗಿಯಾಗಿರುವ ದೂರುಗಳು ಕಂಡುಬಂದರೆ ಅವರುಗಳ ವಿರುದ್ಧ ಕಟ್ಟುನಿಟ್ಟಾಗಿ ನಿರ್ದಾಕ್ಷಿಣ್ಯ ಕ್ರಮ ಕೈಗೊಳ್ಳುವುದಾಗಿ ನಗರ ಪೊಲೀಸ್ ಆಯುಕ್ತ ಬಿ.ದಯಾನಂದ ಎಚ್ಚರಿಕೆ ನೀಡಿದರು.

ನಗರದ ಆಡುಗೋಡಿಯ ಸಿಎಆರ್ ಕವಾಯತು ಮೈದಾನದಲ್ಲಿ ಇಂದು ಏರ್ಪಡಿಸಿದ್ದ ಮಾಸಿಕ ಸೇವಾ ಕವಾಯತಿನಲ್ಲಿ ಭಾಗವಹಿಸಿ ಮಾತನಾಡಿದ ಅವರು, ಇತ್ತೀಚಿನ ದಿನಗಳಲ್ಲಿ 2–3 ಪ್ರಕರಣಗಳು ಪೊಲೀಸರ ವಿರುದ್ಧವೇ ದಾಖಲಾಗಿವೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಪೊಲೀಸ್ ಸಿಬ್ಬಂದಿಗಳು, ಅಧಿಕಾರಿಗಳು ಶಿಸ್ತು ಸಂಯಮಕ್ಕೆ ಚ್ಯುತಿ ಬಾರದಂತೆ ಹದ್ದುಬಸ್ತಿನ ಕಾರ್ಯನಿರ್ವಹಣೆಗೆ ಹಿರಿಯ ಅಧಿಕಾರಿಗಳು ಎಚ್ಚರಿಕೆ ವಹಿಸಬೇಕು. ಠಾಣೆಗಳಲ್ಲಿ ತಮ್ಮ ಸಿಬ್ಬಂದಿಗಳ ಕಾರ್ಯನಿರ್ವಹಣೆ ಮತ್ತು ಚಟುವಟಿಕೆಗಳ ಮೇಲೆ ಇನ್ಸ್‌ಪೆಕ್ಟರ್‌ಗಳು, ಎಸಿಪಿಗಳು ನಿಗಾ ವಹಿಸಬೇಕು. ಅನೈತಿಕ ಹಾಗೂ ಅಕ್ರಮ ಚಟುವಟಿಕೆಗಳು ನಡೆಯದಂತೆ ಹಾಗೂ ಅದರಲ್ಲಿ ಭಾಗವಹಿಸದಂತೆ ಕಟ್ಟುನಿಟ್ಟಿನ ಎಚ್ಚರಿಕೆ ವಹಿಸುವಂತೆ ಆದೇಶಿಸಿದರು.

ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ಅಪರಾಧ ಕೃತ್ಯಗಳಲ್ಲಿ ಭಾಗಿಯಾಗುವುದು ಕಂಡುಬಂದರೆ ಅದಕ್ಕೆ ಆಯಾ ವ್ಯಾಪ್ತಿಯ ಹಿರಿಯ ಅಧಿಕಾರಿಗಳನ್ನೇ ಹೊಣೆ ಮಾಡಲಾಗುತ್ತದೆ. ಹದ್ದು ಬಸ್ತಿನ ಪೊಲೀಸ್‌ಗಿರಿಗೆ ಎಲ್ಲರೂ ಬದ್ಧರಾಗಿ ನಡೆದುಕೊಳ್ಳಬೇಕು ಎಂದರು.

ಬೆಂಗಳೂರು ನಗರದಲ್ಲಿ ಅಪರಾಧ ಕೃತ್ಯಗಳು ಇಳಿಮುಖವಾಗುತ್ತಿವೆ. ಅದರಲ್ಲೂ ಮನೆ ಹಾಗೂ ವಾಹನಗಳ ಕಳ್ಳತನದಂತಹ ಪ್ರಕರಣಗಳು ತಗ್ಗಿವೆ. ಪೊಲೀಸ್ ಠಾಣೆಗಳಲ್ಲಿ ಅಹವಾಲು ಸ್ವೀಕಾರ, ರಾತ್ರಿ ಗಸ್ತು ಹೆಚ್ಚಳ, ನಾಕಾ ಬಂಧಿ ಆಯೋಜಿಸಿದ್ದ ರಿಂದಾಗಿ ಅಪರಾಧ ಕೃತ್ಯಗಳು ತಗ್ಗಿವೆ ಎಂದು ಹೇಳಿದರು. ಸೈಬರ್ ಅಪರಾಧಗಳಲ್ಲೂ ಗಣನೀಯ ಇಳಿಕೆ ಕಂಡುಬಂದಿವೆ. ಕಳೆದ 2 ವರ್ಷಗಳಿಂದ ಸಾರ್ವ ಜನಿಕರಲ್ಲಿ ನಿರಂತರ ಜಾಗೃತಿ ಮೂಡಿಸಲಾಗುತ್ತಿದೆ. ಡಿಜಿಟಲ್ ಡಿಸ್ಪ್ಲೇ, ಆಡಿಯೊ ಸಂದೇಶ, ವಿಡಿಯೊ ಮಾಹಿತಿಗಳು ಸೈಬರ್ ಅಪರಾಧಗಳು ತಗ್ಗಲು ಕಾರಣವಾಗಿವೆ ಎಂದು ಆಯುಕ್ತರು ಪ್ರಶಂಸಿಸಿದರು.

ಅಪರಾಧ ಪತ್ತೆ ಕಾರ್ಯಾಚರಣೆ ಮತ್ತಷ್ಟು ಚುರುಕುಗೊಳ್ಳಬೇಕು ಎಂದು ಆಯುಕ್ತರು ಇದೇ ಸಂದರ್ಭದಲ್ಲಿ ಅವರು ಒತ್ತಿ ಹೇಳಿದರು.

ಉತ್ತಮ ಕಾರ್ಯಕ್ಷಮತೆ ಪ್ರದರ್ಶಿಸಿದ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಪ್ರಶಂಸನಾ ಪತ್ರ ನೀಡಿ ಅಭಿನಂದಿಸಿದರು.

### ಎಚ್‌ಎಎಲ್ ಸಿಬ್ಬಂದಿಗೆ ರಜೆ ರದ್ದು

## ಭಾರತ–ಪಾಕಿಸ್ತಾನ ಯುದ್ಧ ಉದ್ವಿಗ್ನತೆ, ದೇಶಾದ್ಯಂತ ಕಟ್ಟೆಚ್ಚರ

**ಬೆಂಗಳೂರು, ಮೇ.9 –** ಭಾರತ ಹಾಗೂ ಪಾಕ್ ನಡುವೆ ಯುದ್ಧದ ಉದ್ವಿಗ್ನತೆ ಹೆಚ್ಚಾಗುತ್ತಿರುವ ಹಿನ್ನೆಲೆ ದೇಶದಾದ್ಯಂತ ಹೈಅಲರ್ಟ್ ಘೋಷಣೆ ಮಾಡಲಾಗಿದೆ.

ಇನ್ನು ರಕ್ಷಣಾ ವಲಯದ ಎಲ್ಲ ಸಿಬ್ಬಂದಿಗೂ ರಜೆ ರದ್ದು ಮಾಡಲಾಗಿದ್ದು, ಹಗಲಿರುಳು ದೇಶಕ್ಕಾಗಿ ಕರ್ತವ್ಯ ನಿರ್ವಹಿಸುವಂತೆ ಸೂಚಿಸಲಾಗಿದೆ.ಬೆಂಗಳೂರಿನಲ್ಲಿರುವ ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ (ಹೆಚ್‌ಎಎಲ್) ಕೂಡ ಭಾರತೀಯ ಸೇನೆಯ ಬೆನ್ನೆಲುಬಾಗಿರುವುದರಿಂದ ಎಲ್ಲ ಸಿಬ್ಬಂದಿಗೆ ರಜೆ ರದ್ದು ಮಾಡಲಾಗಿದೆ.

ಹೆಚ್ಚುವರಿಗೆ ಸಮಯ ಕೆಲಸ ಮಾಡಲು ಎಲ್ಲರೂ ಸಜ್ಜಾಗಿ ಎಂದು ಕರೆ ನೀಡಲಾಗಿದೆ.ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್ ಬೆಂಗಳೂರಿನಲ್ಲಿ ಪ್ರಧಾನ ಕಚೇರಿ ಹೊಂದಿದ್ದು, ಸೇನೆ ಹಾಗೂ ರಕ್ಷಣಾ ವಲಯಕ್ಕೆ ತನ್ನದೇ ಸಹಕಾರ ನೀಡುತ್ತಿದೆ. ಇದು ಸರ್ಕಾರಿ ಸ್ವಾಮ್ಯದ ಏರೋಸ್ಪೇಸ್ ಹಾಗೂ ರಕ್ಷಣಾ ಉತ್ಪನ್ನಗಳ ತಯಾರಿಕಾ ಸಂಸ್ಥೆಯಾಗಿರುವ ಹಿನ್ನೆಲೆ ಈ ಸನ್ನಿವೇಶದಲ್ಲಿ ಸಿಬ್ಬಂದಿ ಸಹಕಾರ ಕೂಡ ಅತಿ ಮುಖ್ಯ ಎನ್ನಲಾಗಿದೆ. ಈ ಹಿನ್ನೆಲೆ ಎಲ್ಲ ಸಿಬ್ಬಂದಿಗೂ ರಜೆ ರದ್ದು ಮಾಡಿ, ಹೆಚ್ಚುವರಿ ಸಮಯ ಕೆಲಸ ಮಾಡಲು ಸಿದ್ಧರಾಗುವಂತೆ ಸೂಚನೆ ನೀಡಲಾಗಿದೆ.

ಆಪರೇಷನ್ ಸಿಂಧೂರ್ ಬಳಿಕ ಪಾಕಿಸ್ತಾನವು ಭಾರತದ ಮೇಲೆ ಪ್ರತಿದಾಳಿ ಯತ್ನಗಳನ್ನು ನಡೆಸುತ್ತಲೇ ಇದೆ. ನಿನ್ನೆ ರಾತ್ರಿಯೂ ಡ್ರೋನ್, ಜೆಟ್‌ಗಳ ಮೂಲಕ ಭಾರತದತ್ತ ನುಗ್ಗಿ ಬರುವ ಪ್ರಯತ್ನವನ್ನು ನಮ್ಮ ಸೇನೆ ತಡೆದಿದೆ. ಪಾಕ್‌ನ ಎಲ್ಲ ದಾಳಿ ಯತ್ನಕ್ಕೂ ಅಲ್ಲೇ ಪ್ರತಿದಾಳಿ ನಡೆಸಿ ತಡೆದಿದೆ. ಇತ್ತ ಗಡಿಭಾಗ ಜಮ್ಮು ಕಾಶ್ಮೀರದಲ್ಲೂ ಪಾಕ್ ಉಗ್ರರ ಅಟ್ಟಹಾಸ ಶುರುವಾಗಿದೆ. ಈ ಹಿನ್ನೆಲೆ ಯುದ್ಧದ ಸನ್ನಿವೇಶಕ್ಕೆ ಎಲ್ಲರನ್ನೂ ಸಜ್ಜುಗೊಳಿಸಲಾಗುತ್ತಿದೆ.

ಭಾರತ ಮತ್ತು ಪಾಕಿಸ್ತಾನ ಆಡಳಿತದಲ್ಲಿರುವ ಕಾಶ್ಮೀರವನ್ನು ಬೇರ್ಪಡಿಸುವ ನಿಯಂತ್ರಣ ರೇಖೆಯ ಪಾಕಿಸ್ತಾನದ ಉಲ್ಲಂಘನೆಗೆ ಸೂಕ್ತ ಪ್ರತ್ಯುತ್ತರ ನೀಡಿದ್ದೇವೆ ಎಂದು ಭಾರತೀಯ ಸೇನೆ ದಾಳಿ ನಡೆಸುವುದನ್ನು ತೋರಿಸುವ ಒಂದು ಸಣ್ಣ ವೀಡಿಯೊ ಕ್ಲಿಪ್ ಬಿಡುಗಡೆ ಮಾಡಿದೆ. ಎಕ್ಸ್‌ನ ಲ್ಲಿ ಪೋಸ್ಟ್ ಮಾಡಿರುವ ಸೇನೆ ಪಾಕಿಸ್ತಾನವು ರಾತ್ರಿಯಿಡೀ ಸರಣಿ ದಾಳಿಗಳನ್ನು

## ಕೆಪಿಸಿಎಲ್ ವಿದ್ಯುತ್ ಸ್ಥಾವರ ಜಲಾಶಯಗಳಿಗೆ ಹೆಚ್ಚಿನ ಭದ್ರತೆ



**ಬೆಂಗಳೂರು, ಮೇ.9 –** ದೇಶದಲ್ಲಿನ ಪ್ರಸ್ತುತ ಬೆಳವಣಿಗೆಗಳ ಹಿನ್ನೆಲೆಯಲ್ಲಿ ಕರ್ನಾಟಕ ವಿದ್ಯುತ್ ನಿಗಮ (ಕೆಪಿಸಿಎಲ್) ವ್ಯಾಪ್ತಿಗೆ ಬರುವ ಜಲಾಶಯಗಳು ಮತ್ತು ವಿದ್ಯುತ್ ಸ್ಥಾವರಗಳಿಗೆ ಹೆಚ್ಚಿನ ಭದ್ರತೆ ಒದಗಿಸಲಾಗಿದೆ.

ಈ ಕುರಿತಂತೆ ಕೆಪಿಸಿಎಲ್ ಆದೇಶ ಹೊರಡಿಸಿದ್ದು, ನಿಗಮ ವ್ಯಾಪ್ತಿಯಲ್ಲಿ ಬರುವ ಸೂಕ್ಷ್ಮ ಸ್ಥಾವರಗಳ ಭದ್ರತೆಯು ಅತಿ ಮುಖ್ಯವಾಗಿದ್ದು, ಎಲ್ಲಾ ಜಲಾಶಗಳು ಮತ್ತು ವಿದ್ಯುತ್ ಸ್ಥಾವರಗಳಿಗೆ ರಾಜ್ಯ ಪೊಲೀಸ್ ಇಲಾಖೆ ಸಮನ್ವಯದೊಂದಿಗೆ ಹೆಚ್ಚಿನ ಭದ್ರತಾ ಸಿಬ್ಬಂದಿಯನ್ನು ನಿಯೋಜಿಸಿ ಸಂಪೂರ್ಣ ಭದ್ರತೆ ಒದಗಿಸಬೇಕು. ಒಂದು ವೇಳೆ ಭದ್ರತೆಯಲ್ಲಿ ಯಾವುದೇ ಲೋಪವಾದಲ್ಲಿ ಸಂಬಂಧಪಟ್ಟ ಅಧಿಕಾರಿಗಳನ್ನು ಹೊಣೆ ಮಾಡಲಾಗುವುದು ಎಂದು ತಿಳಿಸಿದೆ.

ಕೆಪಿಸಿಎಲ್ ವತಿಯಿಂದ ಜಲ, ಉಷ್ಣ, ಪವನ, ಸೌರ, ಅನಿಲ ಮತ್ತು ತ್ಯಾಜ್ಯದಿಂದ ವಿದ್ಯುತ್ ಉತ್ಪಾದನಾ ಸ್ಥಾವರಗಳನ್ನು ನಿರ್ಮಿಸಲಾಗಿದೆ. ಜಲ ವಿದ್ಯುತ್ ಉತ್ಪಾದನೆಗಾಗಿ ಹಲವು ಜಲಾಶಯಗಳನ್ನು ನಿರ್ಮಿಸಲಾಗಿದೆ.

ಈ ಎಲ್ಲಾ ವಿದ್ಯುತ್ ಸ್ಥಾವರಗಳು ಮತ್ತು ಜಲಾಶಯಗಳಿಗೆ ಸೂಕ್ತ ಭದ್ರತೆ ಒದಗಿಸುವಂತೆ ಆದೇಶದಲ್ಲಿ ಸೂಚಿಸಲಾಗಿದೆ. ಇದರ ಬೆನ್ನಲ್ಲೇ, ಪ್ರಮುಖ ಜಲಾಶಯಗಳು ಮತ್ತು ಸ್ಥಾವರಗಳ ವ್ಯಾಪ್ತಿಯಲ್ಲಿ ಸಂಬಂಧಿಸಿದ ಅಧಿಕಾರಿಗಳು ಪೊಲೀಸ್ ಇಲಾಖೆಯೊಂದಿಗೆ ಸಭೆ ನಡೆಸಿ ಭದ್ರತಾ ವ್ಯವಸ್ಥೆ ಕುರಿತಂತೆ ಸಮಾಲೋಚನೆ ನಡೆಸಿದ್ದಾರೆ. ಜತೆಗೆ ಹೆಚ್ಚಿನ ಸಹಕಾರ ನೀಡುವಂತೆ ಕೆಪಿಸಿಎಲ್ ಅಧಿಕಾರಿಗಳು ಪೊಲೀಸರಿಗೆ ಮನವಿ ಮಾಡಿದ್ದಾರೆ.

ಮತ್ತೊಂದೆಡೆ, ಕೆಪಿಸಿಎಲ್ ವ್ಯಾಪ್ತಿಯ ಜಲಾಶಯಗಳು ಮತ್ತು ಪವರ್ ಹೌಸ್ ಗಳಿಗೆ ಇಂಜಿನಿಯರಿಂಗ್ ವಿದ್ಯಾರ್ಥಿಗಳು, ಗಣ್ಯರು ಸೇರಿದಂತೆ ಸಾರ್ವಜನಿಕರ ಪ್ರವೇಶವನ್ನು ನಿರ್ಬಂಧಿಸಿ ಆದೇಶ ಹೊರಡಿಸಲಾಗಿದೆ.

ವಿದ್ಯಾರ್ಥಿಗಳು ಅದರಲ್ಲೂ ಮುಖ್ಯವಾಗಿ ಇಂಜಿನಿಯರಿಂಗ್ ವಿದ್ಯಾರ್ಥಿಗಳು ಅಧ್ಯಯನ ದೃಷ್ಟಿಯಿಂದ ಜಲಾಶಯಗಳು ಮತ್ತು ಪವರ್‌ಹೌಸ್‌ಗಳಿಗೆ ಭೇಟಿ ನೀಡುತ್ತಾರೆ. ಪ್ರಸ್ತುತ ಸೂಕ್ಷ್ಮ ಪ್ರದೇಶಗಳಲ್ಲಿ ಹೆಚ್ಚಿನ ಭದ್ರತೆ ಒದಗಿಸಬೇಕು ಮತ್ತು ಸಾರ್ವಜನಿಕರ ಪ್ರವೇಶ ನಿರ್ಬಂಧಿಸಬೇಕು ಎಂಬ ಕೇಂದ್ರ ಸರ್ಕಾರದ ಸೂಚನೆಯಂತೆ ಸಾರ್ವಜನಿಕರ ಪ್ರವೇಶ ನಿರ್ಬಂಧಿಸ ಲಾಗಿದೆ.

## ಡಾ. ಅಂಬೇಡ್ಕರ್ 134ನೇ ಜನ್ಮದಿನೋತ್ಸವ

**ಬೆಂಗಳೂರು, ಮೇ 9:** ಶ್ರೀ ನುಲಿಯ ಚಂದಯ್ಯ ರಾಜ್ಯ ಕೊರಮ ಜನಾಂಗದ ಅಂಬೇಡ್ಕರ್ ಸಿದ್ದಂತ ವೇದಿಕೆಯ ಮೊದಲನೇ ವರ್ಷದ ವಾರ್ಷಿಕೋತ್ಸವ ಹಾಗೂ ಡಾ. ಬಾಬಾಸಾಹೇಬ್ ಅಂಬೇಡ್ಕರ್ 134 ನೇ ಜನ್ಮದಿನೋತ್ಸವ ಅಂಗವಾಗಿ ಬೆಂಗಳೂರಿನ ರವೀಂದ್ರ ಕಲಾಕ್ಷೇತ್ರದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿತ್ತು.



ದಲಿತ ಸೇನೆ ಹಾಗು ಎಲ್.ಜೆ.ಪಿ ಪಕ್ಷದ ರಾಜ್ಯಾಧ್ಯಕ್ಷರಾದ ಎಂ.ಎಸ್. ಜಗನ್ನಾಥ್, ಸಂಘದ ಸಂಸ್ಥಾಪಕರಾದ ಎಂ. ಶ್ರೀನಿವಾಸ್, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಹಾಗೂ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಎಂ. ವೆಂಕಟೇಶ್, ಮಾಜಿ ಕೆಇಬಿ ಅಧ್ಯಕ್ಷರ ಎಂ. ನಾಗರಾಜು, ಜಿ.ಮಾದೇಶ್, ಪದವಿ ಪೂರ್ವ ಶಿಕ್ಷಣ ಇಲಾಖೆಯ ಬಾಲಾಜಿ ಯತಿರಾಜು, ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಎಸ್.ಸಿ. ರಾಮಾಂಜಿನಿ, ಎಂ.ಗಂಗಾಧರ್, ಎಚ್.ಕೆ.ಎಸ್ ಫೌಂಡೇಶನ್ ನ ಹೇಮಂತ್ ಕುಮಾರ್, ಅಖಿಲಾ ಕರ್ನಾಟಕ ಕೊರಚ ಮಹಾಸಭಾದ ಸಂಪತ್ ಕುಮಾರ್, ಸಂಘದ ರಾಜ್ಯ ಸಂಚಾಲಕಿ ವಿ. ಸೌಭಾಗ್ಯ, ಉಪಾಧ್ಯಕ್ಷ ಲಕ್ಷ್ಮಯ್ಯ ಅಮ್ಮಿ, ಖಜಾಂಚಿಗಳಾದ ಆರ್, ಸಂಪತ್ ಕುಮಾರ್ ಹಾಗೂ ರಾಜ್ಯ ಸಂಚಾಲಕರಾದ ಲಿಂಗರಾಜು ಉಪಸ್ಥಿತರಿದ್ದರು.

## ಧರ್ಮದ ದಿಕ್ಸೂಚಿ ಬಾಳಿನ ಭಾಗ್ಯೋದಯಕ್ಕೆ ಅಡಿಪಾಯ: ಶ್ರೀ ರಂಭಾಪುರಿ ಜಗದ್ಗುರು

**ಚಿಕ್ಕಮಗಳೂರು– ಮೇ.9–** ಮಾನವನ ಮನಸ್ಸು ಬುದ್ಧಿ ಮತ್ತು ಸದ್ವಿಚಾರಗಳು ಬೆಳೆದು ಬಂದಾಗ ಶ್ರೇಯಸ್ಸು ನಿಶ್ಚಿತ. ಆದರ್ಶ ಬದುಕಿಗೆ ಗುರು ಕಾರುಣ್ಯ ಧರ್ಮಶ್ರದ್ಧೆ ಅವಶ್ಯಕ. ಧರ್ಮದ ದಿಕ್ಸೂಚಿ ಮಾನವನ ಬಾಳಿನ ಭಾಗ್ಯೋದಯಕ್ಕೆ ಅಡಿಪಾಯ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಶುಕ್ರವಾರ ತಾಲೂಕಿನ ಮುಗುಳವಳ್ಳಿ ಗ್ರಾಮದಲ್ಲಿ ಶ್ರೀ ವೀರಭದ್ರೇಶ್ವರ ದೇವಾಲಯದ ಪ್ರವೇಶೋತ್ಸವ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.



ಆಧುನಿಕ ಜಗತ್ತಿನಲ್ಲಿ ಪ್ರಗತಿಪರ ವಿಚಾರಧಾರೆಗಳ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶಗೊಳ್ಳಬಾರದು. ಧರ್ಮ ಮತ್ತು ದೇಶ ಮನುಷ್ಯನ ಎರಡು ಕಣ್ಣು. ಧರ್ಮಶ್ರದ್ಧೆ ಸಾಮರಸ್ಯ ರಾಷ್ಟ್ರಾಭಿಮಾನ ಬೆಳೆಸುವ ಗುರಿ ಎಲ್ಲರದೂ ಆಗಬೇಕು. ರವಿಕಿರಣದಿಂದ ಪುಷ್ಪ ಅರಳುತ್ತದೆ. ಗುರು ಕರುಣ ಆತ್ಮವನ್ನು ಅರಳಿಸುತ್ತದೆ. ಶ್ರೀ ಜಗದ್ಗುರು ರೇಣುಕಾಚಾರ್ಯರ ಧಾರ್ಮಿಕ ಮತ್ತು ಸಾಮಾಜಿಕ ಚಿಂತನಗಳು ಸಕಲರ ಬಾಳಿಗೆ ಬೆಳಕು ತೋರುತ್ತವೆ. ಮುಗುಳವಳ್ಳಿ ಗ್ರಾಮದ ಸಕಲ ಸದ್ಭಕ್ತರ ಸಹಕಾರದಿಂದ ಭವ್ಯ ದಿವ್ಯ ಶ್ರೀ ವೀರಭದ್ರೇಶ್ವರ ದೇವಾಲಯ ನಿರ್ಮಿಸಿರುವುದು ಅತ್ಯಂತ ಸಂತೋಷ ಉಂಟು ಮಾಡುತ್ತದೆ. ಇದಕ್ಕಾಗಿ ಶ್ರಮಿಸಿದ ಎಲ್ಲ ಭಕ್ತರಿಗೆ ಶ್ರೀ ವೀರಭದ್ರೇಶ್ವರ ಸ್ವಾಮಿ ಶುಭವನ್ನು ಅನುಗ್ರಹಿಸಲೆಂದು ಶುಭ ಹಾರೈಸಿದರು.

ಹುಲಿಕೆರೆ ವಿರೂಪಾಕ್ಷಲಿಂಗ ಶಿವಾಚಾರ್ಯರು, ಶಂಕರದೇವರಮಠದ ಚಂದ್ರಶೇಖರ ಶಿವಾಚಾರ್ಯರು, ಬೇರುಗಂಡಿ ಮಠದ ರೇಣುಕ ಮಹಂತ ಶಿವಾಚಾರ್ಯರು ಪಾಲ್ಗೊಂಡು ನುಡಿ ನಮನ ಸಲ್ಲಿಸಿದರು. ಫಲಹಾರಸ್ವಾಮಿ ಮಠದ ಮುರುಘೇಂದ್ರ ಶಿವಾಚಾರ್ಯರು ನೇತೃತ್ವ ವಹಿಸಿದ್ದರು.

## ಹಿಂದೂ ಧಾರ್ಮಿಕ ದತ್ತಿ ಕಾಯ್ದೆಯ ಸೆ.53ರಡಿ ನೋಂದಣಿ ಎಂದರೇನು

**ಬೆಂಗಳೂರು, ಮೇ.9–**ಕರ್ನಾಟಕ 'ದಲ್ಲಿದ್ದ 5 ಹಿಂದೂ ಧಾರ್ಮಿಕ ದತ್ತಿ ಕಾಯ್ದೆಗಳನ್ನು ರದ್ದುಮಾಡಿ 'ಕರ್ನಾಟಕ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ಕಾಯ್ದೆ' 1997ರಲ್ಲಿ ಜಾರಿಗೆ ಬಂತು. ಇದರ ತಿದ್ದುಪಡಿ ಕಾಯ್ದೆ 2011ರಲ್ಲಿ ಬಂತು. ಕರ್ನಾಟಕದಲ್ಲಿ ಧಾರ್ಮಿಕ ದತ್ತಿ ಇಲಾಖೆಗೆ ಒಳಪಟ್ಟ ಅಧಿಸೂಚಿತ ದೇವಸ್ಥಾನಗಳ ವಿವರ ಇಲಾಖೆಯ ವೆಬ್‌ಸೈಟ್‌ನಲ್ಲಿದೆ: ಪ್ರವರ್ಗ ಎ 205, (ರೂ: 25 ಲಕ್ಷಕ್ಕೆ ಮೀರಿ ಆದಾಯ), ಪ್ರವರ್ಗ ಬಿ 193 (ರೂ: 5ರಿಂದ 25 ಲಕ್ಷ ತನಕ ಆದಾಯ), ಪ್ರವರ್ಗ ಸಿ 34166 (ರೂ: 5 ಲಕ್ಷ ತನಕ ಆದಾಯ), ಒಟ್ಟು 34564. ಕಾಯ್ದೆಯ ಕಲಂ. 53ರಂತೆ ಎಲ್ಲಾ ದೇವಸ್ಥಾನಗಳು ಇಲಾಖೆಯಲ್ಲಿ ಕಡ್ಡಾಯವಾಗಿ ನೋಂದಣಿ ಮಾಡಬೇಕು. ಮಾಡದಿದ್ದಲ್ಲಿ ಇಲಾಖೆಯ ಸಹಾಯಕ ಆಯುಕ್ತರು ದೇವಳದ ಮುಖ್ಯಸ್ಥರಿಗೆ ನೋಟೀಸು ಕೊಟ್ಟು ಮಾಡಿಸಬೇಕು. ದೇವಸ್ಥಾನದ ಹೆಸರು, ಇತಿಹಾಸ–ಮೂಲ, ವಿಳಾಸ, ಸ್ಥಾಪಕರ ಹೆಸರು, ಈಗಿನ ಮುಖಸ್ಥರ ಹೆಸರು, ಭೂಮಿ–ಕಟ್ಟಡ ಸ್ಥಿರ ಆಸ್ತಿಗಳು, ಆಭರಣ–ಚಿನ್ನ–ಬೆಳ್ಳಿ ಇತರ ಚರ ಸಂಪತ್ತು, ಆದಾಯ–ಖರ್ಚುಗಳ ವಿವರ ನಿಗದಿತ ನಮೂನೆಯಲ್ಲಿ ಕೊಡಬೇಕು. ಹೀಗೆ ನೋಂದಣಿ ಮಾಡಿದರೆ ಅದು ಮುಜರಾಯಿ ಇಲಾಖೆಯ ಸ್ವಾಧೀನಕ್ಕೆ ಹೋಗುವುದಿಲ್ಲ. ಪ್ರತಿವರ್ಷ ಇಲಾಖೆಗೆ ಲೆಕ್ಕಪತ್ರ ನೀಡಬೇಕಾಗುತ್ತದೆ; ಇದು ಮಾಹಿತಿ ಹಕ್ಕಿನ ವ್ಯಾಪ್ತಿಗೆ ಬರುತ್ತದೆ. ಸಾರ್ವಜನಿಕರಿಂದ ಕಾಣಿಕೆ–ದೇಣಿಗೆ ಪಡೆಯುವ ಎಲ್ಲಾ ದೇವಸ್ಥಾನ, ದೈವಸ್ಥಾನಗಳು "ಸಾರ್ವಜನಿಕ" ವಾಗಿರುತ್ತದೆ. ಮಠಗಳು ಈ ಕಾಯ್ದೆಯ ವ್ಯಾಪ್ತಿಗೆ ಬರುವುದಿಲ್ಲ.

> **ಕರ್ನಾಟಕ ಸರ್ಕಾರದ ಹಿಂದೂ ಧಾರ್ಮಿಕ ಸಂಸ್ಥೆಗಳು ಮತ್ತು ಧರ್ಮಾದಾಯ ದತ್ತಿಗಳ ಇಲಾಖೆಯ ವ್ಯಾಪ್ತಿಯಲ್ಲಿ 34,564** ಅಧಿಸೂಚಿತ ಸಂಸ್ಥೆಗಳು, ಮೈಸೂರು ಮಹಾರಾಜ ಸಂಸ್ಕೃತ ಕಾಲೇಜು, ಆಗಮ ವಿಭಾಗ ಮತ್ತು ಮೇಲುಕೋಟೆ ಸರ್ಕಾರಿ ಸಂಸ್ಕೃತ ಕಾಲೇಜು ಹಾಗೂ ಆಂಧ್ರಪ್ರದೇಶದ ತಿರುಮಲ, ಮಂತ್ರಾಲಯ, ಶ್ರೀಶೈಲ, ಮಹಾರಾಷ್ಟ್ರದ ತುಳಜಾಪುರ ಮತ್ತು ಉತ್ತರ ಪ್ರದೇಶದ ವಾರಣಾಸಿಯಲ್ಲಿರುವ ಕರ್ನಾಟಕ ರಾಜ್ಯ ಛತ್ರಗಳು ಒಳಪಟ್ಟಿರುತ್ತವೆ.
>
> **ಅಧಿಸೂಚಿತ ಸಂಸ್ಥೆಗಳ ಎ,ಬಿ ಮತ್ತು ಸಿ ಪ್ರವರ್ಗವಾರು ವಿವರ ಕೆಳಕಂಡಂತಿದೆ:**
>
> **205+193 + 34166=34,564**
>
> · **205 ಪ್ರವರ್ಗ " ಎ " - ರೂ ವಾರ್ಷಿಕ ರೂ.25 ಲಕ್ಷ** ಮೀರುವ ವರಮಾನ ಹೊಂದಿರುವ ಅಧಿಸೂಚಿತ ಸಂಸ್ಥೆಗಳು.

**ಧರ್ಮಸ್ಥಳ ದೇವಸ್ಥಾನ ಸೆ.53ರಡಿ ನೋಂದಣಿಯಾಗಬೇಕು:** ಧರ್ಮಸ್ಥಳ ಮಂಜುನಾಥ ಸ್ವಾಮಿ ದೇವಸ್ಥಾನ ಕುಟುಂಬದ ದೇವಸ್ಥಾನ ಅಲ್ಲ. ಇದನ್ನು ಇದರ ಧರ್ಮಾಧಿಕಾರಿಯಾಗಿರುವ ವೀರೇಂದ್ರ ಹೆಗ್ಗಡೆಯವರು ಕಾಯ್ದೆ ಪ್ರಕಾರ ಸೆ.53ರಡಿ ನೋಂದಣಿ ಮಾಡಬೇಕಿತ್ತು. ಆದರೆ ಈವರೆಗೆ ಮಾಡಿಲ್ಲ! ಧಾರ್ಮಿಕ ದತ್ತಿ ಆಯುಕ್ತರ ನಿರ್ದೇಶನದಂತೆ, ಸಹಾಯಕ ಆಯುಕ್ತರು ಈ ಕುರಿತು ಪ್ರಸ್ತಾವನೆ ಕಳಿಸುವಂತೆ ಬೆಳ್ತಂಗಡಿ ತಹಶೀಲ್ದಾರರಿಗೆ ನಿರ್ದೇಶನ ನೀಡಿದ್ದಾರೆ. ಯಾವುದೇ ದೇವಳ ನೋಂದಣಿಗೆ ಸಹಕರಿಸದಿದ್ದರೆ ಎ.ಸಿ.ಯವರು ಹೇಗೆ ಮುಂದುವರಿಯಬೇಕೆಂಬ ನಿಯಮಗಳು ಕಾಯ್ದೆಯಲ್ಲಿದೆ.

**ದೇವಸ್ಥಾನಗಳ ನೌಕರರಿಗೆ** 




ನೋಂದಣಿಗೆ ಸಲ್ಲಿಸುವ ಅರ್ಜಿಯಲ್ಲಿರಬೇಕಾದ ವಿವರಗಳು. ನೋಂದಣಿಗೆ ಅರ್ಜಿ ಸಲ್ಲಿಸದಿದ್ದಲ್ಲಿ ಸಹಾಯಕ ಆಯುಕ್ತರು ನೋಂದಣಿಗೆ ನೋಟೀಸು ಕೊಟ್ಟು ಕೈಗೊಳ್ಳಬೇಕಾದ ಕ್ರಮಗಳು.

**ಪಿ.ಎಫ್. ಕೊಡಬೇಕು:** ದೇಶದ ಎಲ್ಲಾ ದೇವಸ್ಥಾನಗಳ ನೌಕರರಿಗೆ ಪ್ರೊವಿಡೆಂಟ್ ಫಂಡ್ ಕೊಡಬೇಕೆಂದು ಕೇಂದ್ರ ಸರಕಾರ 2015ರಲ್ಲಿ ಆದೇಶ ಮಾಡಿದೆ. ರಾಜ್ಯಸಭಾ ಸದಸ್ಯರೂ ಆಗಿರುವ ವೀರೇಂದ್ರ ಹೆಗ್ಗಡೆಯವರು "ಪಿಎಫ್ ಕೊಡಲು ತಾನು ಬದ್ಧನಲ್ಲ" ಎಂದು ಹೈಕೋರ್ಟ್‌ನಲ್ಲಿ ಪಿಎಫ್ ಕಮಿಷನರ್ ವಿರುದ್ಧ ದಾಖಲಿಸಿದ ರಿಟ್‌ಅರ್ಜಿ ಹೈಕೋರ್ಟ್ ಡಿಸ್‌ಮಿಸ್ ಮಾಡಿ ವಾಗ್ದಂಡನೆ ಮಾಡಿತ್ತು (2017). ಈ ಆದೇಶದ ವಿರುದ್ಧ ಮೇಲ್ಮನವಿ ಆಗಿದೆ.

**ಮಂಜುನಾಥ ಸ್ವಾಮಿ ದೇವಸ್ಥಾನವೋ? ದಿ ಇನ್‌ಸ್ಟಿಟ್ಯೂಷನ್ ಎಟ್ ಧರ್ಮಸ್ಥಳವೋ?:**

ಆದಾಯಕರ ಇಲಾಖೆಯಲ್ಲಿ 'ಮಂಜುನಾಥಸ್ವಾಮಿ ದೇವಸ್ಥಾನ' ಎಂದು ಹೆಗ್ಗಡೆಯವರು ಪ್ರಮಾಣಪತ್ರ ಸಲ್ಲಿಸಿಲ್ಲ!! ಎಂದೂ ಈ ದೇವಳ "ಸಾರ್ವಜನಿಕ" ಎಂದೂ ಪ್ರಮಾಣಪತ್ರ ಸಲ್ಲಿಸಿ, 100% ಆದಾಯಕರ ವಿನಾಯ್ತಿ ಪಡೆದಿದ್ದಾರೆ.! 2012ರಲ್ಲಿ ಇಲಾಖೆಗೆ ಸಲ್ಲಿಸಿದ ಅಧಿಕೃತ ರಿಟರ್ನ್‌ನಲ್ಲಿ ದೇವಳದ ವಾರ್ಷಿಕ ಆದಾಯ ರೂ:127.25 ಕೋಟಿ! ನಿಜವಾದ ಆದಾಯ ಎಷ್ಟು ಎಂದು ಊಹೆಗೆ ಬಿಟ್ಟದ್ದು! ಈಗಿನ ಆದಾಯ ರೂ: 500ರಿಂದ 600 ಕೋಟಿ ಇರಬಹುದೆಂದು ಮಾಧ್ಯಮಗಳಲ್ಲಿ ಪ್ರಚಾರ ಇದೆ. 240 ಅಂಗಡಿಗಳ ಬಾಡಿಗೆ ಮತ್ತು 16 ಬೃಹತ್ ಅತಿಥಿ ಗೃಹಗಳ ಕೋಣೆಗಳ ಬಾಡಿಗೆಯೂ ಇದರಲ್ಲಿ ಸೇರಿದೆ.



ಜಿಲ್ಲಾ ಪೊಲೀಸರು ಶುಕ್ರವಾರ ರಾಯಚೂರಿನ ಶಕ್ತಿನಗರ ಹೆಲಿಪ್ಯಾಡ್‌ನಲ್ಲಿ ಅಣಕು ಪ್ರದರ್ಶನ ನಡೆಸಿದರು.

# ತುರ್ತು ಪರಿಸ್ಥಿತಿ ಎದುರಿಸಲು ಕ್ರಮ: ರಾಯಚೂರು ಜಿಲ್ಲೆಯಲ್ಲಿ ನಾಗರಿಕ ರಕ್ಷಣಾ ಸಿದ್ಧತಾ ಕಾರ್ಯಾಚರಣೆ



ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಯ ಸಭಾ ಭವನದಲ್ಲಿ ಭಾರತ–ಪಾಕ್ ನಡುವೆ ಯುದ್ಧ ಸನ್ನಿವೇಶದ ಹಿನ್ನೆಲೆಯಲ್ಲಿ ಸಚಿವರು, ಸಂಸದರು, ಶಾಸಕರು, ಜಿಲ್ಲಾಧಿಕಾರಿಗಳು, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಸೇರಿದಂತೆ ವಿವಿಧ ಇಲಾಖೆಗಳ ಉನ್ನತ ಅಧಿಕಾರಿಗಳ ಸಮ್ಮುಖದಲ್ಲಿ ತುರ್ತು ಸಭೆ ನಡೆಯಿತು. ಸಚಿವರಾದ ಡಾ.ಶರಣಪ್ರಕಶ ಪಾಟೀಲ್, ಭೋಸರಾಜು, ಸಂಸದ ಜಿ.ಕುಮಾರ ನಾಯಕ್, ಶಾಸಕರಾದ ಬಸನಗೌಡ ಪಾಟೀಲ್ ದದ್ದಲ್, ಬಸನಗೌಡ ತುರ್ವಿಹಾಳ್, ಜಿಲ್ಲಾಧಿಕಾರಿ ಮತ್ತು ಜಿಪಂ ಸಿಇಓ ಅವರಿದ್ದರು.

**ರಾಯಚೂರು, ಮೇ. 9–** ಭಾರತ–ಪಾಕ್ ಮಧ್ಯೆ ನಡೆಯುತ್ತಿರುವ ಯುದ್ಧ ಸನ್ನಿವೇಶದ ಹಿನ್ನೆಲೆಯಲ್ಲಿ ತುರ್ತು ಪರಿಸ್ಥಿತಿಯ ಪ್ರತಿಕೂಲ ಸಂದರ್ಭದಲ್ಲಿ ನಾಗರಿಕ ರಕ್ಷಣೆ, ಹಾನಿ ಕಡಿಮೆಗೊಳಿಸುವುದು, ಸಶಸ್ತ್ರ ಪಡೆಗಳ ಕಾರ್ಯದಕ್ಷತೆ ಬಲಗೊಳಿಸುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಮುಂಜಾಗ್ರತಾ ಕ್ರಮವಾಗಿ ರಾಯಚೂರ ಜಿಲ್ಲೆಯಲ್ಲಿ ಸಹ ನಾಗರಿಕ ರಕ್ಷಣಾ ಸಿದ್ಧತೆ ಕಾರ್ಯಾಚರಣೆ ಆರಂಭವಾಗಿದೆ.

ನಾಗರಿಕ ರಕ್ಷಣೆ, ನಾಗರಿಕ ರಕ್ಷಣಾ ಯೋಜನೆ, ಸೇನಾ ದಾಳಿ ಸಂದರ್ಭದಲ್ಲಿ ತೆಗೆದುಕೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು, ನಾಗರಿಕ ರಕ್ಷಣಾ ಕಾಯಿದೆ–1968, ಭಾರತ ರಕ್ಷಣಾ ಕಾಯಿದೆ 1962, 1971, ಜಿನೀವಾ ಕನ್ವೆನ್ಶನ್ ಕಾಯಿದೆ–2010, ನಾಗರಿಕೆ ರಕ್ಷಣೆ ಮತ್ತು ತರಬೇತಿ ಸೇರಿದಂತೆ ನಾನಾ ವಿಷಯಗಳ ಬಗ್ಗೆ ಸಭೆಯಲ್ಲಿ ವಿಸ್ತೃತ ಚರ್ಚೆ ನಡೆಯಿತು.

ತುರ್ತು ಪರಿಸ್ಥಿತಿಯ ಪ್ರತಿಕೂಲ ಸಂದರ್ಭದಲ್ಲಿ ಅಗ್ನಿಶಾಮಕ ಸೇವೆ, ರಕ್ಷಣಾ ಸೇವೆ, ತುರ್ತು 'ೀವೆ, 'ಲ್ಯಾಣ ಸೇವೆ, ಶವ ವಿಲೇವಾರಿ ಕ್ರಮಗಳು, ಸರ್ಕಾರಿ ಸಿಬ್ಬಂದಿ, ವಾರ್ಡನ್ ಮತ್ತು ಸ್ವಯಂ ಸೇವಕರನ್ನು ನೋಂದಾಯಿಸಿ ತರಬೇತಿ ನೀಡುವುದು, ಸಿವಿಲ್ ಡಿಫೆನ್ಸ್ ಕಂಟ್ರೋಲ್ ರೂಮ್‌ಗಳನ್ನು ಹಾಗೂ ಸಿವಿಲ್ ಡಿಫೆನ್ಸ್ ಸೈರನಗಳನ್ನು ಕಾರ್ಯಗತಗೊಳಿಸುವುದು ಮತ್ತು ಅಗತ್ಯ ಉಪಕರಣಗಳು ಮತ್ತು ಸರಬರಾಜಿನೊಂದಿಗೆ ನಾಗರಿಕ ರಕ್ಷಣಾ ಮತ್ತು ಸ್ಥಳೀಯ ತುರ್ತು ಸೇವೆಗಳನ್ನು ಸಜ್ಜುಗೊಳಿಸುವುದು, ವಸತಿಗಾಗಿ ಸುರಕ್ಷಿತ ಕಟ್ಟಡ ಮತ್ತು ಸೇನಾರಹಿತ ವಲಯವನ್ನು ಗುರುತಿಸುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಸಭೆಯಲ್ಲಿ ಚರ್ಚೆ ನಡೆಯಿತು.

ಮಾಕ್ ಡ್ರಿಲ್ ರೂಪುರೇಷಗಳ ಬಗ್ಗೆ ಸಹ ಸಭೆಯಲ್ಲಿ ಚರ್ಚೆ ನಡೆಯಿತು. ವಾಯುದಾಳಿಯ ಸಂದರ್ಭದಲ್ಲಿ ಸೈರನಗಳ ಸಕ್ರಿಯಗೊಳಿಸುವಿಕೆ, ತೆಗೆದುಕೊಳ್ಳಬೇಕಾದ ಕ್ರಮಗಳು, ಯಾವುದೇ ಕಟ್ಟಡದಲ್ಲಿ ಬೆಂಕಿಕಾಣಿಸಿಕೊಂಡಲ್ಲಿ ಪಾರಾಗುವ ಕ್ರಮಗಳು, ಹಾನಿಗೊಳಗಾದ ಕಟ್ಟಡದಿಂದ ಸ್ಥಳಾಂತರ ಕ್ರಮ, ತಾತ್ಕಾಲಿಕ ಆಸ್ಪತ್ರೆಯ ಸ್ಥಾಪನೆ, ಆಕ್ರಮಿತ ಪ್ರದೇಶದಿಂದ ನಾಗರಿಕನ್ನು ಸೇನಾರಹಿತ ವಲಯಗಳಿಗೆ ಸ್ಥಳಾಂತರಿಸುವುದು, ಕಂಟ್ರೋಲ್ ರೂಮ್ ಗೆ ವರದಿ ನೀಡುವುದು ಸೇರಿದಂತೆ ನಾನಾ ವಿಷಯಗಳ ಬಗ್ಗೆ ಮಾಕ್ ಡ್ರಿಲ್ ಸಂದರ್ಭದಲ್ಲಿ ಸರಿಯಾಗಿ ಅಭ್ಯಾಸ ನಡೆಸಬೇಕು ಎಂದು ಸಭೆಯಲ್ಲಿ ನಿರ್ಣಯಿಸಲಾಯಿತು.

ಸಾರ್ವಜನಿಕರಲ್ಲಿ ಮನವಿ: ಈ ವೇಳೆ ರಾಯಚೂರ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ ಪಾಟೀಲ ಅವರು ಮಾತನಾಡಿ, ತುರ್ತು ಪರಿಸ್ಥಿತಿಯ ಬಗ್ಗೆ ನಾಗರಿಕರು ಯಾವುದೇ ಆತಂಕಕ್ಕೆ ಒಳಗಾಗಬಾರದು ಎಂದು ಸಭೆಯ ಮೂಲಕ ಜಿಲ್ಲೆಯ ಜನರಲ್ಲಿ ಮನವಿ ಮಾಡಿದರು.

ಆಯಾ ವಿಧಾನಸಭಾ ಕ್ಷೇತ್ರಗಳ ಎಲ್ಲ ಶಾಸಕರು ತಮ್ಮ ತಮ್ಮ ಕ್ಷೇತ್ರಗಳಲ್ಲಿದ್ದು ಈ ಬಗ್ಗೆ ವಿಶೇಷ ನಿಗಾವಹಿಸಬೇಕು. ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಅಧಿಕಾರಿಗಳು ಕೇಂದ್ರ ಸ್ಥಾನದಲ್ಲಿರಬೇಕು ಎಂದು ತಿಳಿಸಿದರು. ನಾಗರಿಕ ರಕ್ಷಣಾ ಕಾರ್ಯಚರಣೆಗೆ ಸಂಬಂಧಿಸಿದಂತೆ ಸರ್ವ ಪಕ್ಷಗಳ ಮತ್ತು ಎಲ್ಲ ಸಂಘಟನೆಗಳ ಸಭೆ ಕರೆದು ಚರ್ಚಿಸಲು ಕ್ರಮ ವಹಿಸಬೇಕು ಎಂದು ಸಚಿವರು ಎಲ್ಲ ತಹಸೀಲ್ದಾರಗಳಿಗೆ ಸೂಚನೆ ನೀಡಿದರು.

ರಾಯಚೂರಿನ ವೈಟಿಪಿಎಸ್, ಆರ್‌ಟಿಪಿಎಸ್‌ಗಳು, ರಸಾಯನಿಕ ಪ್ಯಾಕ್ಟರಿಗಳನ್ನು ಗುರಿಯಾಗಿಸುವ ತಂತ್ರಗಾರಿಕೆಯ ಬಗ್ಗೆ ಮುನ್ನೆಚ್ಚರಿಕೆ ವಹಿಸಬೇಕು. ವಿಶೇಷವಾಗಿ ಭದ್ರತಾ ಪಡೆಗಳು ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ತಾವಿರುವ ಸ್ಥಳದಲ್ಲಿ ಜಾಗೃತರಾಗಿರಬೇಕು. ಅವಶ್ಯಕ ಸಂದರ್ಭದಲ್ಲಿ ಸಹಾಯವಾಗಲು ಅಗ್ನಿಶಾಮಕ ವಾಹನಗಳ ಖರೀದಿಗೆ ಕ್ರಮ ವಹಿಸಬೇಕು. ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಆಸ್ಪತ್ರೆಯಲ್ಲಿ ಸುಸಜ್ಜಿತ ವೈದ್ಯಕೀಯ ಸೇವೆ ಇರುವಂತೆ ನೋಡಿಕೊಳ್ಳಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

ಮುಖ್ಯವಾಗಿ ವಿವಿಧ ಭದ್ರಾತಾ ಪಡೆಗಳು ಮತ್ತು ಪೊಲೀಸ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿ ಸೂಕ್ತ ತರಬೇತಿ ಯೊಂದಿಗೆ ಕಾರ್ಯಾಚರಣೆಯಲ್ಲಿ ಸಕ್ರಿಯವಾಗಬೇಕು. ಆರೋಗ್ಯ, ಅಗ್ನಿಶಾಮಕ ಮತ್ತು ಇನ್ನಿತರ ಇಲಾಖೆಗಳೊಂದಿಗೆ ಸಮನ್ವಯದಿಂದ ಕಾರ್ಯ ನಡೆಸಿ ಸಾಕಷ್ಟು ಪೂರ್ವ ಸಿದ್ಧತೆ ಮಾಡಿಕೊಂಡಲ್ಲಿ ಯಾವುದೇ ಬಗೆಯ ತುರ್ತು ಪರಿಸ್ಥಿತಿಯ ಪ್ರತಿಕೂಲ ಸಂದರ್ಭವನ್ನು ಸಮರ್ಥವಾಗಿ ಎದುರಿಸಬಹುದಾಗಿದೆ ಎಂದು ಸಚಿವರಾದ ಎನ್.ಎಸ್.ಬೋಸರಾಜು ಅವರು ಮತ್ತು ಸಂಸದರಾದ ಜಿ.ಕುಮಾರ ನಾಯಕ ಅವರು ಅಧಿಕಾರಿಗಳಿಗೆ ಸಲಹೆ ಮಾಡಿದರು.

ಅಣಕು ಪರೀಕ್ಷೆ ಮತ್ತು ಇನ್ನಿತರ ವಿಷಯಗಳ ಬಗ್ಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪುಟ್ಟಮಾದಯ್ಯ ಅವರು ಸಭೆಗೆ ಮಾಹಿತಿ ನೀಡಿದರು.

# ಮುಂದಿನ ಮೂರು ವರ್ಷಗಳಲ್ಲಿ ಕಲಬುರಗಿ ಸ್ಮಾರ್ಟ್‌ಸಿಟಿ ಆಗಲಿದೆ: ಖರ್ಗೆ



ಕಲಬುರಗಿ ನಗರವನ್ನು ಮಾದರಿಯಾಗಿ ಸ್ಮಾರ್ಟ್ ಸಿಟಿ ರೂಪದಲ್ಲಿ ಅಭಿವೃದ್ಧಿ ಪಡಿಸುವ ಹಿನ್ನೆಲೆಯಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ನಡೆಸಿದ ಸಮಾಲೋಚನಾ ಸಭೆಯಲ್ಲಿ ಶಾಸಕರಾದ ಅಲ್ಲಮಪ್ರಭು ಪಾಟೀಲ್, ಕನೀಜ್ ಫಾತಿಮಾ ಬೇಗಂ, ಮೇಯರ್ ಯಲ್ಲಪ್ಪ ನಾಯ್ಕೋಡಿ, ಪಾಲಿಕೆ ಆಯುಕ್ತ ಅವಿನಾಶ ಶಿಂದೆ ಮುಂತಾದವರಿದ್ದರು.

**ಕಲಬುರಗಿ, ಮೇ.9–** ನಗರವನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ ಸೌಲಭ್ಯಗಳನ್ನು ಹೆಚ್ಚಿಸುವದರೊಂದಿಗೆ 'ಸ್ಮಾರ್ಟ್ ಸಿಟಿ' ರೂಪಿಸುವ ಸಲುವಾಗಿ ತಜ್ಞರೊಂದಿಗೆ ಜಿಲ್ಲಾ ಉಸ್ತುವಾರಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯಿತಿ ರಾಜ್ ಹಾಗೂ ಮಾಹಿತಿತಂತ್ರಜ್ಞಾನ ಸಚಿವ ಪ್ರಿಯಾಂಕ್ ಖರ್ಗೆ ಅವರು ಚರ್ಚಿಸಿ, ಮುಂದಿನ ಮೂರು ವರ್ಷದ ಒಳಗೆ ಕಲಬುರಗಿ ನಗರವನ್ನು ಅತ್ಯುತ್ತಮ ನಗರವಾಗಿ ರೂಪಿಸಲು ಯೋಜನೆಗಳನ್ನು ರೂಪಿಸುವುದಾಗಿ ಹೇಳಿದರು.

ಗುಣಮಟ್ಟದ ಶುದ್ಧ ಕುಡಿಯುವ ನೀರು ಸರಬರಾಜು, ಸುಸ್ಥಿರ ಒಳಚರಂಡಿ ವ್ಯವಸ್ಥೆ, ತ್ಯಾಜ್ಯ ನೀರು ಮರುಬಳಕೆ, ಘನತ್ಯಾಜ್ಯ ಬೇರ್ಪಡಿಸುವಿಕೆ ಹಾಗೂ ವಿಲೇವಾರಿ, ಉತ್ತಮ ಸಂಚಾರಿ ವ್ಯವಸ್ಥೆ, ಹಸಿರೀಕರಣ ಮುಂತಾದ ಮೂಲ ಭೂತ ಸೌಲಭ್ಯಗಳನ್ನು ಕಲಬುರಗಿ ನಗರಕ್ಕೆ ಒದಗಿಸಲು ಯೋಜಿಸಲಾಗಿದೆ ಎಂದು ಈ ಸಂದರ್ಭದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಅವರು ತಿಳಿಸಿದರು.

ನಗರವನ್ನು ಅತ್ಯುತ್ತಮ ಮೂಲಭೂತ ಸೌಲಭ್ಯಗಳ ನಗರವಾಗಿ ಸುವ ಮೂಲಕ ಹೆಚ್ಚು ಉದ್ದಿಮೆಗಳನ್ನು ಆಕರ್ಷಿಸುವುದರೊಂದಿಗೆ ಹೆಚ್ಚು ಹೆಚ್ಚು ಮಂದಿ ಯುವಕ ಯುವತಿಯರಿಗೆ ಉದ್ಯೋಗ ಸೃಷ್ಟಿಸಲು ಸಾಧ್ಯವಾಗುತ್ತದೆಂದು ಈ ಸಂದರ್ಭದಲ್ಲಿ ಸಚಿವರು ಅಭಿಪ್ರಾಯಪಟ್ಟರು.

ನಗರದ ನೈರ್ಮಲ್ಯ ವ್ಯವಸ್ಥೆಯನ್ನು ಸುಧಾರಿಸುವ ಅವಶ್ಯಕತೆ ಇದೆ ಎಂದು ಹೇಳಿದ ಸಚಿವರು, ಈಗಿನ ಶೇಕಡಾ 50ರಷ್ಟಿರುವ ನೈರ್ಮಲ್ಯ ವ್ಯವಸ್ಥೆಯನ್ನು ನೂರಕ್ಕೆ ನೂರರಷ್ಟು ಬಲಪಡಿಸುವ ಗುರಿಯನ್ನು ಇರಿಸಿಕೊಳ್ಳಲಾಗಿದೆ. ಈ ಸಲುವಾಗಿ ನೈರ್ಮಲ್ಯ ನೌಕರರ ಸಂಖ್ಯೆಯನ್ನು ಹೆಚ್ಚಿಸಲಾಗುವುದು ಎಂಬ ಅಂಶವನ್ನು ವಿವರಿಸಿದರಲ್ಲದೆ, ನಗರದ ನೂರು ಲಕ್ಷ ಚದರ ಅಡಿ ಪ್ರದೇಶದಲ್ಲಿ ಉದ್ಯಾನ ಹಾಗೂ ಮರಗಳನ್ನು ಪೋಷಿಸುವುದರೊಂದಿಗೆ ಕಲಬುರಗಿ ನಗರವನ್ನು ಹಸಿರೀಕರಣಗೊಳಿಸುವ ಯೋಜನೆ ರೂಪಿಸಲಾಗುವುದು ಎಂದು ಪ್ರಕಟಿಸಿದರು.

# ಕಾರ್ಮಿಕರ ಸಮಸ್ಯೆಗಳನ್ನು ಕಾರ್ಖಾನೆ ಮಟ್ಟದಲ್ಲೇ ಪರಿಹರಿಸಿ: ಲಾಡ್ ಸೂಚನೆ



**ಕಲಬುರಗಿ, ಮೇ.9–** ಕಾರ್ಖಾನೆ ನೌಕರರ ಸಮಸ್ಯೆಗಳನ್ನು ಸೌಹಾರ್ದಯುತವಾಗಿ ಪರಿಹರಿಸಿಕೊಳ್ಳಬೆಕು. ಸಮಸ್ಯೆಗಳನ್ನು ನಮ್ಮ ವರೆಗೆ ಬಎಂಗಳೂರಿಗೆ ತರಬಾರದು. ಒಂದೇ ಕಡೆ ಕೆಲಸ ಮಾಡುವವರು ಒಂದು ಕುಟುಂಬದಂತಿರಬೇಕು ಎಂದು ಕಾರ್ಮಿಕ ಸಚಿವ ಸಂತೋಷ್ ಲಾಡ್ ಸಲಹೆ ನೀಡಿದರು.

ಕಲಬುರಗಿ ಜಿಲ್ಲೆಯ ಮಳಖೇಡದಲ್ಲಿರುವ ರಾಜಶ್ರೀ ಅಲ್ಟ್ರಾಟೆಕ್ ಸಿಮೆಂಟ್ ಕಾರ್ಖಾನೆ ನೌಕರರ ಸಮಸ್ಯೆಗಳ ಬಗ್ಗೆ ಚರ್ಚಿಸಲು ಕರೆದಿದ್ದ ತುರ್ತು ಸಭೆಯಲ್ಲಿ ಮಾತನಾಡಿದ ಅವರು, ಆಡಳಿತ ಮಂಡಳಿಗಳು ಕಾರ್ಮಿಕರ ಸಮಸ್ಯೆಗಳ ಬಗ್ಗೆ ತಿಳಿಯದೇ ಇದ್ದರೆ, ಕೇಳದೇ ಇದ್ದರೆ ಅವುಗಳು ಹೆಚ್ಚಾಗುತ್ತವೆ. ಸಮಸ್ಯೆಗಳನ್ನು ಅಲ್ಲಿಯೇ ಪರಿಹರಿಸಿ ಕೊಳ್ಳಬೇಕು. ನೌಕರರ ಸಮಸ್ಯೆಗಳನ್ನು ಮಾನವೀಯತೆಯಿಂದ ಬಗೆಹರಿಸಿಕೊಳ್ಳಬೇಕು. ಪ್ರೀತಿ ಮತ್ತು ಕಾಳಜಿಯಿಂದ ನೌಕರರನ್ನು ನೋಡಿ. ಆಗ ಅವರೂ ದಕ್ಷತೆಯಿಂದ, ಬದ್ಧತೆಯಿಂದ ಕೆಲಸ ಮಾಡುತ್ತಾರೆ ಎಂದು ಸಂತೋಷ್ ಲಾಡ್ ಹೇಳಿದರು.

ಕಾರ್ಮಿಕರಿಲ್ಲದೆ ಕಾರ್ಖಾನೆ ಇಲ್ಲ. ಹಾಗೇಯೇ ಕಾರ್ಖಾನೆಗೆ ಕಾರ್ಮಿಕರೇ ಜೀವಾಳ. ಕಾರ್ಮಿಕರ ಸಮಸ್ಯೆ ಹೊತ್ತುಕೊಂಡು ಬೆಂಗಳೂರಿನ ವರೆಗೆ ಬರುವುದಕ್ಕಿಂತ ಸ್ಥಳದಲ್ಲೇ ಪರಿಹರಿಸಿಕೊಳ್ಳಿ. ಅಲ್ಲದೇ, ಕಾರ್ಮಿಕರ ಬಗ್ಗೆ ಕಾಳಜಿ ತೋರಿ, ಗೌರವ ಕೊಡಿ ಎಂದು ಮನವಿ ಮಾಡಿಕೊಳ್ಳುತ್ತೇನೆ. ಇನ್ನು ಮುಂದೆ ಸಮಸ್ಯೆ ಹೊತ್ತುಕೊಂಡು ನನ್ನ ಬಳಿ ಬರಬೇಡಿ ಎಂದು ಅವರು ಸೂಚಿಸಿದರು.

ಈ ವೇಳೆ ನೌಕರರು ತಮಗೆ ವೈದ್ಯಕೀಯ ಮತ್ತು ಇತರ ಸೌಲಭ್ಯಗಳನ್ನು ಒದಗಿಸುವಂತೆ ಸಚಿವರಲ್ಲಿ ಮನವಿ ಮಾಡಿದರು. ಇವುಗಳ ಬಗ್ಗೆ ಕ್ರಮ ಕೈಗೊಳ್ಳುವುದಾಗಿ ಸಂತೋಷ್ ಲಾಡ್ ಭರವಸೆ ನೀಡಿದರು.

# ಕಲಿಕೆಯ ಜೊತೆ ಕೌಶಲ್ಯ ಕುರಿತು ಪ್ರಗತಿ ಪರಿಶೀಲನೆ

**ವಿಜಯಪುರ,ಮೇ.9–**ವಿಜಯಪುರದ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದಲ್ಲಿ ಕಲಿಕೆಯ ಜೊತೆ ಕೌಶಲ್ಯ ಯೋಜನೆಗೆ ಸಂಬಂಧಿಸಿದಂತೆ ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶಿವಕಾಂತಮ್ಮ ನಾಯಕ ಅವರ ಅಧ್ಯಕ್ಷತೆಯಲ್ಲಿ ಗೂಗಲ್ ಮೀಟ್ ಮೂಲ ಪ್ರಗತಿ ಪರಿಶೀಲನಾ ಸಭೆ ನಡೆಸಲಾಯಿತು.

ಕರ್ನಾಟಕ ಕೌಶಲ್ಯ ಅಭಿವೃದ್ಧಿ ನಿಗಮದ ವತಿಯಿಂದ 7 ವಿಶ್ವವಿದ್ಯಾಲಯಗಳಡಿ 17 ಪ್ರಥಮ ದರ್ಜೆ ಮಹಿಳಾ ಸರ್ಕಾರಿ ಕಾಲೇಜ್‌ಗಳಲ್ಲಿ ಕಲಿಕೆಯ ಜೊತೆ ಕೌಶಲ್ಯ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದ್ದು, ಡಿಜಿಟಲ್ ಮಾರ್ಕೆಟಿಂಗ್, ಫಂಡಾಮೆಂಟಲ್ ಆಫ್ ಬಿಸಿನೆಸ್ ಅನಾಲೆಟಿಕ್ಸ್, ಕಂಟೆಂಟ್ ಆಂಡ್ ಕಮ್ಯುನಿಕೇಶನ್, ಡೇಟಾ ಅನಾಲೈಸಿಸ್ ಮತ್ತು ವಿಜ್ಯೂವಲೈಜೇಶನ್, ಆರ್ಟಿಫಿಸಿಯಲ್ ಇಂಟೆಲಿಜೆನ್ಸ್ ಆಂಡ್ ಮಶಿನ್ ಲರ್ನಿಂಗ್, ಅನಿಮೇಶನ್ ಸಪ್ಲೈ ಚೇನ್ ವ್ಯಾನೇಜ್‌ಮೆಂಟ್, ಜಿಎಸ್‌ಟಿ ಅಕೌಂಟಿಂಗ್ ವಿಷಯಗಳ ಕುರಿತು ವಿದ್ಯಾರ್ಥಿಗಳಿಗೆ ತರಬೇತಿ ನೀಡಬೇಕು.

ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಉದ್ಯೋಗ ಪಡೆಯಲು ಪ್ರೇರೇಪಿಸಿ, ಪ್ರೊತ್ಸಾಹಿಸುವಂತೆ ಹಾಗೂ ಈ ಯೋಜನೆ ಕುರಿತು ವ್ಯಾಪಕವಾಗಿ ಪ್ರಚಾರ ಹಮ್ಮಿಕೊಳ್ಳುವಂತೆ ಸೂಚಿಸಲಾಯಿತು.

# ಪಾಕಿಸ್ತಾನಕ್ಕೆ ಇನ್ನಷ್ಟು ತಕ್ಕ ಶಾಸ್ತಿ ಕಾದಿದೆ ಭಾರತ: ನಳಿನ್ ಕುಮಾರ್ ಕಟೀಲ್



ಮಂಗಳೂರು, ಮೇ.9– ಪಹಲ್ಗಾಮ್‌ನಲ್ಲಿ ಪ್ರವಾಸಿಗರು, ಜನಸಾನ್ಯರ ಮೇಲೆ ದಾಳಿ ನಡೆಸಿದ ಪಾಕಿಸ್ತಾನಕ್ಕೆ ಭಾರತ ಸೈನ್ಯ ತಕ್ಕ ಉತ್ತರ ನೀಡಿದೆ. ಪಾಕಿಸ್ತಾನದ ಪಾಪದ ಕೊಡ ತುಂಬಿದ್ದು, ಮುಂದಿನ ದಿನಗಳಲ್ಲಿ ತಕ್ಕ ಶಾಸ್ತಿ ಅನುಭವಿಸಲಿದೆ ಎಂದು ಮಾಜಿ ಸಂಸದ ನಳಿನ್ ಕುಮಾರ್ ಕಟೀಲ್ ಹೇಳಿದರು.

ಸುದ್ದಿಗಾರರೊಂದಿಗೆ ಶುಕ್ರವಾರ ಮಾತನಾಡಿದ ಅವರು, ಹಲವು ವರ್ಷಗಳಿಂದ ಉಗ್ರರನ್ನು ಸಾಕಿ ಭಾರತದ ಮೇಲೆ ಛೂ ಬಿಡುವ ಕೆಲಸ ಪಾಕಿಸ್ತಾನ ಮಾಡಿಕೊಂಡು ಬಂದಿದೆ. ಇದಕ್ಕೆ ಸಮರ್ಥ ಉತ್ತರ ನೀಡಲಾಗಿದ್ದು, ಉಗ್ರರ ಡೇರೆಗಳನ್ನು ಹುಡುಕಿ ಹೊಡೆಯುವ ಕೆಲಸ ನಡೆದಿದೆ. ಭಾರತದ ಉತ್ತರದಿಂದ ಪಾಕಿಸ್ತಾನ ಪಾಠ ಕಲಿಯಬೇಕು. ಆದರೆ, ಪಾಠ ಕಲಿತಂತಿಲ್ಲ. ಪಾಕಿಸ್ತಾನದ ಪ್ರತಿದಾಳಿಗೆ ಭಾರತದ ಸೈನಿಕರು ಸಮರ್ಥವಾಗಿ ಉತ್ತರ ನೀಡುವ ಕೆಲಸ ಮಾಡುತ್ತಿದ್ದಾರೆ. ಭಾರತದಿಂದ ಉಗ್ರವಾದಿಗಳ ಡೇರೆ ಮಾತ್ರ ಹೊಡೆದುರುಳಿದ್ದು ಹೊರತಾಗಿ ಪಾಕಿಸ್ತಾನದ ಪ್ರಜೆಗಳ ಮೇಲೆ ದಾಳಿ ನಡೆಸಿಲ್ಲ. ಆದರೆ ಪಾಕಿಸ್ತಾನ ತನ್ನ ಬುದ್ಧಿಯನ್ನು ಬಿಡದೆ ನಮ್ಮ ಜನಸಾಮಾನ್ಯರ ಮೇಲೆ ದಾಳಿ ಮಾಡಿದೆ. ಎಲ್ಲವನ್ನೂ ನಿಗ್ರಹಿಸುವ ಕೆಲಸ ನಮ್ಮ

# ಕೋಟ್ಪಾ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ

**ವಿಜಯಪುರ, ಮೇ.9–** ಜಿಲ್ಲೆಯಾದ್ಯಂತ ಇರುವ ಶಾಲಾ–ಕಾಲೇಜ್ ಆವರಣದ 100 ಮೀಟರ್ ವ್ಯಾಪ್ತಿಯಲ್ಲಿ ಯಾವುದೇ ತಂಬಾಕು ಉತ್ಪನ್ನಗಳ ಮಾರಾಟವಾಗದಂತೆ ನಿಗಾ ವಹಿಸಲು ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಟಿ.ಭೂಬಾಲನ್ ಸೂಚನೆ ನೀಡಿದರು.

ಮಾರ್ಗಸೂಚಿಯನ್ವಯ ಗ್ರಾಮೀಣ ಪ್ರದೇಶಗಳಲ್ಲಿ ತಂಬಾಕು ಸೇವನೆಯಿಂದ ಉಂಟಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಕೋಟ್ಪಾ–2003ರ ಕಾಯ್ದೆ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಿ, ತಂಬಾಕು ಸೇವನೆ ತ್ಯಜಿಸಲು ಅಗತ್ಯ ಆರೋಗ್ಯ ಚಿಕಿತ್ಸೆ ಹಾಗೂ ಆಪ್ತ ಸಮಾಲೋಚನೆ ನಡೆಸಿ, ತಂಬಾಕು ತ್ಯಜಿಸಲು ಪ್ರೇರೆಪಿಸಬೇಕು, ಯುವ ಸಮುದಾಯದಲ್ಲಿ ಅರಿವು ಮೂಡಿಸಬೇಕು. ಕೇಂದ್ರ ಸರ್ಕಾರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಅಧಿಸೂಚನೆಯ ಮಾರ್ಗಸೂಚಿಯಂತೆ ಪ್ರತಿ ಗ್ರಾಮಗಳಲ್ಲಿ ಹಮ್ಮಿಕೊಳ್ಳಲು ಸಮನ್ವಯ ಸಮಿತಿಯನ್ನು ರಚಿಸಿಕೊಳ್ಳಲು ಪತ್ರ ಬರೆಯುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಅವರು ಸೂಚನೆ ನೀಡಿದರು.

# ಭಾರತೀಯ ಸೇನೆಗೆ ಹೊರನಾಡು ಅನ್ನಪೂರ್ಣೇಶ್ವರಿ ದೇವಾಲಯದಿಂದ 10 ಲಕ್ಷ ರೂ. ದೇಣಿಗೆ



**ಚಿಕ್ಕಮಗಳೂರು, ಮೇ9–** ಪಾಕಿಸ್ತಾನದ ಉಗ್ರರ ಹುಟ್ಟಡಗಿಸಲು ಭಾರತೀಯ ಸೇನೆಗೆ ಹೊರನಾಡು ಅನ್ನಪೂರ್ಣೇಶ್ವರಿ ದೇವಾಲಯದಿಂದ 10 ಲಕ್ಷ ರೂ. ದೇಣಿಗೆ ನೀಡಲಾಗಿದೆ. ಕಳಸ ತಾಲೂಕಿನ ಆದಿಶಕ್ತ್ಯಾತ್ಮಕ ಹೊರನಾಡು ಅನ್ನಪೂರ್ಣೇಶ್ವರಿ ಕ್ಷೇತ್ರದಿಂದ ಕೇಂದ್ರ ಸಚಿವ ಗಜೇಂದ್ರ ಸಿಂಗ್ ಅವರಿಗೆ ಈ ಹಣವನ್ನು ಹಸ್ತಾಂತರ ಮಾಡಲಾಗಿದೆ.

ಕ್ಷೇತ್ರದ 5ನೇ ಧರ್ಮಕರ್ತರ ಕಂಚಿನ ಪುತ್ಥಳಿ ಅನಾವರಣ ಕಾರ್ಯಕ್ರಮದಲ್ಲಿ ಧರ್ಮಕರ್ತ ಭೀಮೇಶ್ವರ ಜೋಶಿ ಅವರು ಚೆಕ್ ಹಸ್ತಾಂತರಿಸಿದ್ದಾರೆ.

ಭಾರತ ಹಾಗೂ ಪಾಕಿಸ್ತಾನದ ನಡುವೆ ಯುದ್ಧದ ಕಾರ್ಮೋಡ ಕವಿದಿದೆ. ಗುರುವಾರ ರಾತ್ರಿ ಡ್ರೋನ್‌ಗಳ ದಾಳಿ ನಡೆಸಿತ್ತು. ಆದರೆ ಭಾರತೀಯ ಸೇನೆ ಆ ದಾಳಿಯನ್ನು ವಿಫಲಗೊಳಿಸಿತ್ತು. ಇದರ ಬೆನ್ನಲ್ಲೇ ಆಪರೇಷನ್ ಸಿಂದೂರ ಕಾರ್ಯಾಚರಣೆಯನ್ನು ಭಾರತ ಮತ್ತಷ್ಟು ತೀವ್ರಗೊಳಿಸಿದ್ದರಿಂದ ಪಾಕ್ ತತ್ತರಿಸಿ ಹೋಗಿದೆ. ಜಮ್ಮುವಿನಲ್ಲಿ ಇದುವರೆಗೆ ಪಾಕಿಸ್ತಾನದ 50ಕ್ಕೂ ಹೆಚ್ಚು ಡ್ರೋನ್ ದಾಳಿಯನ್ನು ಭಾರತ ವಿಫಲಗೊಳಿಸಿದೆ.

ಭಾರತೀಯ ಗಡಿ ನಿಯಂತ್ರಣ ರೇಖೆ (ಎಲ್‌ಒಸಿ) ಹಾಗೂ ವಿವಿಧ ಪ್ರದೇಶಗಳನ್ನು ಗುರಿಯಾಗಿಸಿ ಪಾಕಿಸ್ತಾನ ಡ್ರೋನ್ ದಾಳಿ ನಡೆಸಿತ್ತು. ಅವಂತಿಪುರ, ಶ್ರೀನಗರ, ಜಮ್ಮು, ಪಠಾಣ್‌ಕೋಟ್, ಅಮೃತಸರ, ಕಪುರ್ತಲ, ಜಲಂಧರ್, ಲುಧಿಯಾನ, ಆದಂಪುರ, ಬಟಿಂಡಾ, ಚಂಡೀಗಢ, ನಾಲ್, ಫಲೋಡಿ, ಉತ್ತರಲೈ, ಭುಜ್ ಸೇರಿ ಒಟ್ಟು 15 ನಗರಗಳ ಮೇಲೂ ದಾಳಿಗೆ ಸಂಚುಮಾಡಿತ್ತು. ಆದರೆ ಭಾರತೀಯ ಸೇನೆ ಎಲ್ಲಾ ದಾಳಿಯನ್ನು ವಿಫಲಗೊಳಿಸಿದೆ.

ಮೇ 7ರಂದು ಭಾರತ ಪಾಕಿಸ್ತಾನ ಹಾಗೂ ಪಿಒಕೆಯಲ್ಲಿದ್ದ 9 ಭಯೋ ತ್ಪಾದಕರ ಶಿಬಿರಗಳ ಮೇಲೆ ಆಪರೇಷನ್ ಸಿಂಧೂರ ಕಾರ್ಯಾ ಚರಣೆ ನಡೆಸಿ ಉಗ್ರರನ್ನು ಧ್ವಂಸ ಮಾಡಿತ್ತು. ಇದಕ್ಕೆ ಪ್ರತಿಯಾಗಿ ಪಾಕ್ ಅಮಾಯಕ ನಾಗರಿಕರ ಮೇಲೆ ದಾಳಿ ಮಾಡಿ 16 ಜನರನ್ನು ಕೊಂದಿತ್ತು.

# ಕನ್ಯಕಾಪರಮೇಶ್ವರಿ ದೇವಸ್ಥಾನದಲ್ಲಿ ಶ್ರದ್ಧಾ–ಭಕ್ತಿಯಿಂದ ವಾಸವಿ ಜಯಂತಿ ಮಹೋತ್ಸವ ಆಚರಣೆ



**ಬಳ್ಳಾರಿ, ಮೇ.9–** ಬಳ್ಳಾರಿ ನಗರದಲ್ಲಿ ಪ್ರತಿ ವರ್ಷದಂತೆ ಈ ವರ್ಷ ಕೂಡ ಶ್ರೀ ಕನ್ಯಕಾಪರಮೇಶ್ವರಿ ದೇವಸ್ಥಾನದಲ್ಲಿ ಶ್ರೀ ವಾಸವಿ ಜಯಂತಿ ಮಹೋತ್ಸವ ಬಹಳ ವಿಜೃಂಭಣೆಯಿಂದ ನಡೆಯಿತು. ಪ್ರತಿ ದಿನ ಬೆಳಗ್ಗೆ 7.00 ಗಂಟೆಯಿಂದ 12.00 ವರೆಗೆ ವಾಸವಿ ಹೋಮ ಮತ್ತು ಅಮ್ಮನವರಿಗೆ ಪಂಚಾಮೃತ ಅಭಿಷೇಕ, ಹೂವಿನ ಅಲಂಕಾರ, ಲಕ್ಷಕುಂಕುಮಾರ್ಚನೆ, ಲಕ್ಷಪುಷ್ಪಾರ್ಚನೆ ಮತ್ತು 12.00 ಗಂ ಮಹಾ ಮಂಗಳಾರತಿ ನಂತರ ಪ್ರಸಾದ ವಿನಿಯೋಗ ನಡೆಯಿತು.

ದಿನಾಂಕ 03–05–2025 ಬೆಳಿಗ್ಗೆ 7.00 ಗಂಟೆಗೆ ದೇವಸ್ಥಾನದ ಆಡಳಿತ ಮಂಡಳಿ, ಕಾರ್ಯಕಾರಿ ಸಮಿತಿ ಸದಸ್ಯರು ಹಾಗು ಭಜನಾ ಸಂಘದ ಸದಸ್ಯರು ಸೇರಿ ಗಂಗೆಯನ್ನು ಶ್ರೀ ನಗರೇಶ್ವರ ಸ್ವಾಮಿ ದೇವಸ್ಥಾನದಿಂದ ಮೆರವಣಿಗೆ ಮುಖಾಂತರ ಶ್ರೀ ಕನ್ಯಕಾಪರಮೇಶ್ವರಿ ದೇವಸ್ಥಾನಕ್ಕೆ ತರಲಾಯಿತು. ನಂತರ ಅಮ್ಮನವರಿಗೆ ಲಕ್ಷಕುಂಕುಮಾರ್ಚನೆ, ಲಕ್ಷಪುಷ್ಪಾರ್ಚನೆಯನ್ನು ನೆರವೇರಿಸಲಾಯಿತು. ವಾಸವಿ ಜಯಂತಿಯ ಮೊದಲನೆಯ ದಿನ ಶ್ರೀ ಸತ್ಯನಾರಾಯಣ ಸ್ವಾಮಿಯ ಪೂಜೆಯನ್ನು ನೆರವೇರಿಸಿ ಬಂದ ಭಕ್ತರಿಗೆ ಉಪಹಾರ, ಮಧ್ಯಾಹ್ನದ ಊಟದ ವ್ಯವಸ್ಥೆಯನ್ನು ಮಾಡಲಾಯಿತು. ವಿವಿದ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆದವು. ಬಳ್ಳಾರಿಯ ಜಿಲಾನಿ ಭಾಷರವರ ನೃತ್ಯ ಶಾಲೆಯ ಮಕ್ಕಳಿಂದ ನೃತ್ಯ ಕಾರ್ಯಕ್ರಮ, ಶ್ರೀ ಕನ್ಯಕಾಪರಮೇಶ್ವರಿ ಭಜನ ಸಂಘದ ಮಹಿಳೆಯರ ಮತ್ತು ಮಕ್ಕಳ ನೃತ್ಯ ಕಾರ್ಯಕ್ರಮ, ವಾಸವಿ ಸ್ಕೂಲ್ ಮಕ್ಕಳಿಂದ ಕಿರು ನಾಟಕ ಹಾಗು ನೃತ್ಯ ಪ್ರದರ್ಶನ, ಆರ್ಯವೈಶ್ಯ ಮಹಿಳಾ ಮಂಡಳಿಯವರಿಂದ ಮಡಿಲಕ್ಕಿಯ ಮಹತ್ವ ಹಾಗು ವಾಗ್ದೇವಿ ತಂಡದಿಂದ ಗೀತ ಗಾಯನ ಕಾರ್ಯಕ್ರಮ ಆಕರ್ಷಣೀಯವಾಗಿದ್ದವು. ಪ್ರತಿ ದಿನ ಈ ಕಾರ್ಯಕ್ರಮದ ನಂತರ ಬಂದ ಪ್ರೇಕ್ಷಕರಿಗೆ ಮತ್ತು ಕಾರ್ಯಕ್ರಮದಲ್ಲಿ ಭಾಗವಹಿಸದವರಿಗೆ ಸುಮಾರು 1000 ಜನಕ್ಕೆ ಊಟದ ವ್ಯವಸ್ಥೆಯನ್ನು ದೇವಸ್ಥಾನದ ಆಡಳಿತ ಮಂಡಳಿಯಿಂದ ಮಾಡಲಾಗಿತ್ತು.

ದಿನಾಂಕ 07–05–2025 ಬುಧವಾರ ಬೆಳಿಗ್ಗೆ 7.00 ಗಂಟೆಯಿಂದ 9.00 ವರಿಗೆ ಹೋಮ, ಅಭಿಷೇಕ ಮತ್ತು ನವ ಕನ್ನಿಕೆಯರ ಪೂಜೆ ನಡೆಯಿತು ತರುವಾಯ 10.00 ಗಂಟೆಯಿಂದ ಮಧ್ಯಾಹ್ನ 1.00 ವರೆಗೆ ಬಳ್ಳಾರಿಯ ಮುಖ್ಯ ಪುರಬೀದಿಗಳಲ್ಲಿ ಶ್ರೀ ಕನ್ಯಕಾಪರಮೇಶ್ವರಿ ದೇವಿಯ ಉತ್ಸವದಲ್ಲಿ 500 ದಿಂದ 800 ಆರವೈಶ್ಯ ಬಂಧುಗಳು ತಮ್ಮ ಅಂಗಡಿಗಳನ್ನು ಮುಚ್ಚಿ ಪಾಲ್ಗೊಂಡಿದ್ದರು. ಈ ಉತ್ಸವದಲ್ಲಿ ಗೊಂಬೆಗಳ ನಡೆತ, ಮಹಿಳೆಯರ ಕೋಲಾಟ ಹಾಗು ತಾಳ ಪ್ರದರ್ಶನ, ಮತ್ತು ಬ್ಯಾಂಡ್ ವಾದ್ಯಗಳೊಂದಿಗೆ ಮಹಿಳೆಯರ ನೃತ್ಯಗಳು ಬಹಳ ಆಕರ್ಷಕವಾಗಿದ್ದವು. ಈ ಉತ್ಸವ ಪ್ರಾರಂಭಕ್ಕೆ ಮೊದಲು ಬಂದ ಅರವೈಶ್ಯ ಬಂಧುಗಳಿಗೆಲ್ಲಾ ಉಪಹಾರ ವ್ಯವಸ್ಥೆ ಮಾಡಲಾಗಿತ್ತು ಮತ್ತು ಮಧ್ಯಾಹ್ನ 12.00 ಗಂ ಯಿಂದ 3.00 ವರೆಗೆ ಸುಮಾರು 5000 ಜನಕ್ಕೆ ಊಟದ ವ್ಯವಸ್ಥೆಯನ್ನು ದೇವಸ್ಥಾನದ ಆಡಳಿತ ಮಂಡಳಿ ಮತ್ತು ಕಾರ್ಯಕಾರಿ ಸಮಿತಿಯ ಸದಸ್ಯರು ಮತ್ತು ಬಳ್ಳಾರಿ ನಗರದ ಆರವೈಶ್ಯ ಜನಾಂಗದ ಸಹಕಾರದಿಂದ ಮಾಡಲಾಗಿತ್ತು.

ಈ ವಾಸವಿ ಜಯಂತಿ ಕಾರ್ಯಕ್ರಮ ನಡೆಸಲು ಶ್ರೀ ಕನ್ಯಕಾಪರಮೇಶ್ವರಿ ದೇವಸ್ಥಾನದ ಆಡಳಿತ ಮಂಡಳಿಯೊಂದಿಗೆ, ಶ್ರೀ ಕನ್ಯಕಾಪರಮೇಶ್ವರಿ ಭಜನಾ ಸಂಘ, ಅರವೈಶ್ಯ ಅಸೋಷಿಯೇಷನ್, ನಗರೇಶ್ವರ ಸ್ವಾಮಿದೇವಸ್ಥಾನದ ಆಡಳಿತ ಮಂಡಳಿ, ವಾಸವಿ ಕಲ್ಯಾಣ ಮಂಟಪ, ವಾಸವಿ ಕ್ಲಬ್, ವಾಸವಿ ವನಿತಾ ಕ್ಲಬ್, ವಾಸವಿ ಎಜ್ಯುಕೇಷನ್ ಟ್ರಸ್ಟ್ ಮತ್ತು ಅರವೈಶ್ಯರ ಎಲ್ಲಾ ಸಂಘಗಳು ಸಹಕರಿಸಿದರು. ಈ ಉತ್ಸವವನ್ನು ಸೊಂತಾ ಗಿರಿಧರ್‌ರವರ ನೇತೃತ್ವದಲ್ಲಿ ದೇವಸ್ಥಾನದ ಆಡಳಿತ ಮಂಡಳಿಯವರೊಂದಿಗೆ ನೆರವೇರಿಸಲಾಯಿತು.

ಈ ಎಲ್ಲಾ ಕಾರ್ಯಕ್ರಮಗಳು ದೇವಸ್ಥಾನದ ಮ್ಯಾನೇಜಿಂಗ್ ಟ್ರಸ್ಟಿ ಗಾದಂ ಗೋಪಾಲಕೃಷ್ಣರವರ ನೇತೃತ್ವದಲ್ಲಿ ಖಾಯಂ ಜಾಯಿಂಟ ಟ್ರಸ್ಟಿ ಪಿ.ಗೋವಿಂದಯ್ಯ ಶೆಟ್ಟಿ, ಜಾಯಿಂಟ್ ಟ್ರಸ್ಟಿಗಳಾದ ವಿಟ್ಟಾ ಕೃಷ್ಣ ಕುಮಾರ್, ಟಿ. ಅಶ್ವಥನಾರಾಯಣ ಶೆಟ್ಟಿ, ಜಯಂತಿ ಕಿಶೋರ್ ಕುಮಾರ್, ನಾಮಾ ರಮೇಶ್, ಸೊಂತ ಗಿರಿಧರ್, ಪಾಪಯ್ಯ, ರಾಜ ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು, ಭಜನಾ ಸಂಘದ ಆಡಳಿತ ಮಂಡಳಿಯ ಕಾರ್ಯಕಾರಿ ಸಮಿತಿ ಸದಸ್ಯರು ಹಾಗು ಡಾ|ರಮೇಶ್ ಗೋಪಾಲ್ ಅವರ ಸಹಕಾರದಿಂದ ಮತ್ತು ಬಳ್ಳಾರಿ ನಗರದ 102 ಗೋತ್ರದ ಆರ್ಯವೈಶ್ಯ ಬಂಧುಗಳ ಪ್ರೋತ್ಸಾಹದಿಂದ ಜಯಪ್ರದವಾಗಿ ನಡೆಸಲಾಯಿತು ಎಂದು ಸೊಂತ ಗಿರಿಧರ್ ಅವರು ತಿಳಿಸಿದರು.

# ರಾಯಚೂರಿನಲ್ಲಿ ರೈಲ್ವೆ ಇಲಾಖೆಯಿಂದ ಅಣಕು ಪ್ರದರ್ಶನ, ತಾಲೀಮು

**ರಾಯಚೂರು, ಮೇ.9–** ಜಮ್ಮು ಕಾಶ್ಮೀರದ ಪೆಹಲ್ಗಾಮ್ ದಾಳಿ ಸಂಬಂಧ ಕೇಂದ್ರದ ಸೂಚನೆಯಂತೆ ನಿನ್ನೆಯಷ್ಟೇ ರಾಯಚೂರಿನಲ್ಲಿ ನಡೆಯಬೇಕಿದ್ದ ಮಾಕ್ ಡ್ರಿಲ್ ಕೇಂದ್ರ ರೈಲ್ವೆ ನಿಲ್ದಾಣದ ಆವರಣದಲ್ಲಿ ರೈಲ್ವೆ ಇಲಾಖೆಯಿಂದ ಜರುಗಿತು.



ರೈಲ್ವೆ ಇಲಾಖೆ ರಾಯಚೂರು ಸೇರಿ ಕಾಚಗೂಡು, ಔರಂಗಾಬಾದ್ ನಲ್ಲೂ ಇದೇ ಮಾದರಿಯಲ್ಲಿ ಮಾಕ್ ಡ್ರಿಲ್ ಮಾಡಲಾಯ್ತು. ಆಂಧ್ರದ ಕಡಪ ಮೂಲದ ಸಿವಿಲ್ ಡಿಫೆನ್ಸ್ ಟೀಂನಿಂದ ಮಾಕ್ ಡ್ರಿಲ್ ಮಾಡಲಾಗಿದೆ. ಒಟ್ಟು 30 ಕ್ಕು ಹೆಚ್ಚು ಜನ ಸಿವಿಲ್ ಡಿಫೆನ್ಸ್ ತಂಡ ರಾಯಚೂರಿನ ರೈಲ್ವೆ ನಿಲ್ದಾಣದಲ್ಲಿ ಲಕ್ಷ್ಮೀ ಬಾಂಬ್ ಹಾಗೂ ಸ್ಮೋಕ್ ಬಾಂಬ್ ಸಿಡಿಸೊ ಮೂಲಕ ಯುದ್ಧದ ದಾಳಿಯ ಸನ್ನಿವೇಶ ಸೃಷ್ಟಿಸಿತ್ತು.

ಈ ಮಾಕ್ ಡ್ರಿಲ್‌ನ ದಾಳಿ ವೇಳೆ ಗಾಯಗೊಂಡು ನರಳಾಡುತ್ತಿದ್ದವರಿಗೆ ಭದ್ರತಾ ಸಿಬ್ಬಂದಿ, ಪೊಲೀಸ್ ಸಿಬ್ಬಂದಿ ಕೂಡಲೇ ಗಾಯಾಳುಗಳ ರಕ್ಷಣೆ ಮಾಡಿದ್ರು. ಅಲ್ಲದೇ ದಾಳಿ ವೇಳೆ ಹೇಗೆಲ್ಲಾ ರಕ್ಷಣೆಗೊಳಪಡಬೇಕು, ಹೇಗೆಲ್ಲಾ ವೈದ್ಯಕೀಯ ಸಿಬ್ಬಂದಿ ತುರ್ತು ಚಿಕಿತ್ಸೆ ನೀಡಬೇಕು ಅನ್ನೋದನ್ನ ಮಾಕ್ ಡ್ರಿಲ್ ಮೂಲಕ ಜಾಗೃತಿ ಮೂಡಿಸಿದರು.

ಒಟ್ಟು 30 ಜನ ರೈಲ್ವೆ ಸಿವಿಲ್ ಡಿಫೆನ್ಸ್ ತಂಡ ಇಂಥದ್ದೊಂದು ಅಣಕು ಪ್ರದರ್ಶನ ಮಾಡೋ ಮೂಲಕ ಯುದ್ಧದ ದಾಳಿ ಸಂದರ್ಭಗಳಲ್ಲಿ ನಾಗರೀಕ ರಕ್ಷಣೆ ಬಗ್ಗೆ ಜಾಗೃತಿ ಮೂಡಿಸಲಾಗಿದೆ. ಶೆಲ್ ಅಥವಾ ಗುಂಡಿನ ದಾಳಿ ವೇಳೆ ಹೇಗೆ ರಕ್ಷಣೆ ಮಾಡಿಕೊಳ್ಳಬೇಕು. ಅದರಿಂದ ಹೇಗೆ ಬಚಾವ್ ಆಗಬೇಕೆಂದು ರೈಲ್ವೆ ಇಲಾಖೆ ಸಿಬ್ಬಂದಿ ಅಣುಕು ಪ್ರದರ್ಶನ ಮೂಲಕ ತೋರಿಸಿದೆ.

ರೈಲ್ವೆ ಇಲಾಖೆ ಸಿಬ್ಬಂದಿ ಯುದ್ಧದ ಸಂದರ್ಭದಲ್ಲಿ ಬೆಂಕಿ ನಂದಿಸುವುದು ಸೇರಿದಂತೆ ಶೆಲ್ ದಾಳಿ ವೇಳೆ ಹೇಗೆಲ್ಲಾ ರಕ್ಷಣೆ ಮಾಡಿಕೊಳ್ಳಬೇಕೆನ್ನುವುದನ್ನು ನಾಗರಿಕರಿಗೆ ಮುಂದೆ ಪ್ರದರ್ಶನ ಮಾಡಿ ತೋರಿಸಿದರು.

ಅಲ್ಲದೇ ರೈಲ್ವೆ ಇಲಾಖೆಯಂತೆ ವಿವಿಧ ಇಲಾಖೆಗಳು ಕೂಡ ನಾಳೆ ಈ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸಲಿದ್ದಾರೆ. ರಾಯಚೂರಿನ ಆರ್‌ಟಿಪಿಎಸ್ ವಿದ್ಯುತ್ ಉತ್ಪಾದನಾ ಘಟಕದಲ್ಲಿ ಮಾಕ್ ಡ್ರಿಲ್‌ಗೆ ನಿರ್ದೇಶನ ನೀಡಲಾಗಿದೆ. ಆದ್ರೆ ನಿನ್ನೆಯಷ್ಟೇ ರಾಯಚೂರಿನಲ್ಲಿ ನಡೆಯಬೇಕಿದ್ದ ಮಾಕ್ ಡ್ರಿಲ್ ಮುಂದೂಡಲಾಗಿದ್ದು, ಮಾಕ್ ಡ್ರಿಲ್ ಬಗ್ಗೆ ಜಿಲ್ಲಾಡಳಿತ ನಾಳೆ ಸಭೆ ನಡೆಸಿ ರೂಪುರೇಷೆ ಸಿದ್ಧಪಡಿಸಲಿದೆ.

ಪಹಲ್ಗಾಮ್ ದಾಳಿ ಸಂಬಂಧ ಕೇಂದ್ರದ ಸೂಚನೆಯಂತೆ ದೇಶದ ವಿವಿಧ ಜಿಲ್ಲೆಗಳಲ್ಲಿ ಯುದ್ಧದ ಮಾಕ್ ಡ್ರಿಲ್ ಮಾಡಲು ಆದೇಶಿಸಲಾತ್ತು. ಆ ಪೈಕಿ ರಾಜ್ಯದಲ್ಲಿ ರಾಯಚೂರು ಜಿಲ್ಲೆಯನ್ನ ಕೇಂದ್ರ ಗೃಹ ಇಲಾಖೆ ಆಯ್ಕೆ ಮಾಡಿತ್ತು.

# ಸಿಂಧೂರ ಅಳಿಸಿದ ಪಾಪಿಗಳ ಸರ್ವನಾಶ ಶಾಸಕ ಶೈಲೇಂದ್ರ ಬೆಲ್ದಾಳೆ ಶ್ಲಾಘನೆ



**ಬೀದರ್, ಮೇ.9–** ಪಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತದ ಸೇನೆ ಆಪರೇಷನ್ "ಸಿಂಧೂರ್" ಕಾರ್ಯಾಚರಣೆ ಮುಖಾಂತರ ಪಾಕಿಸ್ತಾನದೊಳಗೆ ನುಗ್ಗಿ ಭಯೋತ್ಪಾದಕರ 9 ಪ್ರಮುಖ ನೆಲೆಗಳನ್ನು ಧ್ವಂಸಗೊಳಿಸಿ ಶತ್ರು ರಾಷ್ಟ್ರ ಮಾತ್ರವಲ್ಲ, ಇಡೀ ವಿಶ್ವಕ್ಕೆ ತನ್ನ ಶಕ್ತಿ, ಸಾಹಸ, ಸಾಮರ್ಥ್ಯ ಹಾಗೂ ಪರಾಕ್ರಮ ತೋರಿಸಿಕೊಟ್ಟಿದೆ. ಸಿಂಧೂರ ಅಳಿಸಿದ ಪಾಪಿಗಳ ಸರ್ವನಾಶವಾಗಲಿದೆ ಎಂದು ಬಿಜೆಪಿ ರಾಜ್ಯ ಕಾರ್ಯದರ್ಶಿ ಹಾಗೂ ದಕ್ಷಿಣ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಅವರು ಬಣ್ಣಿಸಿದ್ದಾರೆ.

ಕಳೆದ ಏಪ್ರಿಲ್ 22ರಂದು ಪಹಲ್ಗಾಮ್ ದಾಳಿಯಲ್ಲಿ ಅಮಾಯಕ 27 ಪ್ರವಾಸಿಗರನ್ನು ಕ್ರೂರವಾಗಿ ಹತ್ಯೆಗೈದ ಭಯೋತ್ಪಾದಕರ ವಿರುದ್ಧ ಕಠೋರ ಕ್ರಮ ಕೈಗೊಳ್ಳುವುದು ನಿಶ್ಚಿತ ಎಂದು ಪ್ರಧಾನಿ ನರೇಂದ್ರ ಮೋದಿ ಘೋಷಿಸಿದ್ದರು. ನುಡಿದಂತೆ ನಡೆದು ತೋರಿಸಿದ್ದಾರೆ. ಭಾರತದ ಸೇನಾ ವಿಮಾನಗಳು ಪಾಕಿಸ್ತಾನದೊಳಗೆ ನುಗ್ಗಿ ಉಗ್ರರ ಬೇಟೆಯಾಡುತ್ತಿದೆ. ಉಗ್ರರನ್ನು ಬೇರು ಸಮೇತ ಕಿತ್ತೊಗೆಯಲು ಕೇಂದ್ರ ಸರ್ಕಾರ ಸಜ್ಜಾಗಿದೆ. ಭಯೋತ್ಪಾದಕರ ಕುರಿತು ನಮ್ಮದು ಜಿರೋ ಟಾಲರೆನ್ಸ್ ಇದೆ ಎಂದು ಮೋದಿಜಿ ಸ್ಪಷ್ಟವಾಗಿ ಹೇಳಿದ್ದಾರೆ. ಉಗ್ರರ ದಮನ, ಪಾಪಿಗಳ ಸರ್ವನಾಶ ಈಗ ನಿಶ್ಚಿತವಾಗಿದೆ. ಉಗ್ರರ ರಕ್ಷಕ ಪಾಕಿಸ್ತಾನಕ್ಕೂ ಸಹ ತಕ್ಕ ಪಾಠ ಸಿಗಲಿದೆ. ಕೇಂದ್ರ ಸರ್ಕಾರ, ಭಾರತೀಯ ಸೇನೆಗೆ ಸೆಲ್ಯೂಟ್ ಹೇಳುವೆ. ನಮ್ಮ ಸೇನೆ–ನಮ್ಮ ಹೆಮ್ಮೆ ಎನಿಸಿದೆ ಎಂದು ಅವರು ಹೇಳಿಕೆಯಲ್ಲಿ ಸಂತೋಷ ವ್ಯಕ್ತಪಡಿಸಿದ್ದಾರೆ.

ಭಾರತದ ಸ್ವಾತಂತ್ರ್ಯದ ಬಳಿಕ ಪಾಕಿಸ್ತಾನ ನಿರಂತರವಾಗಿ ಭಯೋತ್ಪಾದಕರ ಮೂಲಕ ದೇಶದಲ್ಲಿ ವಿಧ್ವಂಸಕ ಕೃತ್ಯಗಳು ನಡೆಸುತ್ತಿದೆ. ದೇಶದೊಳಗೆ ಅತಿಕ್ರಮ ಪ್ರವೇಶ ಮಾಡುತ್ತಿದೆ. ಈ ಹಿಂದೆ ಭಾರತದೊಂದಿಗೆ ನಾಲ್ಕು ಯುದ್ಧ ಮಾಡಿದೆ. ಈ ನಾಲ್ಕೂ ಯುದ್ಧದಲ್ಲಿ ಹೀನಾಯ ಸೋಲು ಕಂಡಿದೆ. ಆದರೂ ಪಾಠ ಕಲಿಯದೆ ಭಂಡತನ ಪ್ರದರ್ಶಿಸುತ್ತಿದೆ. ಆರ್ಥಿಕವಾಗಿ ದಿವಾಳಿಯಾಗಿ ಕಂಗಾಲಾದ ಪಾಪಿ ಪಾಕಿಸ್ತಾನಕ್ಕೆ ನಿರೀಕ್ಷೆಗೂ ಮೀರಿದ ರೀತಿಯಲ್ಲಿ ಭಾರತ ಈ ಬಾರಿ ಮಣ್ಣು ಮುಕ್ಕಿಸಲಿದೆ. ಪಾಕ್ ಆಕ್ರಮಿತ ಕಾಶ್ಮೀರ ಸಹ ಭಾರತದ ಸುಪರ್ದಿಗೆ ಬರುವ ದಿನಗಳು ಈಗ ಸನ್ನಿಹಿತವಾಗಿವೆ. ಮೋದಿ ಹೈ ತೊ ಸಬ್ ಮುಮಕಿನ್ ಹೈ ಎಂಬುದು ಮತ್ತೆ ಸಾಬೀತಾಗಲಿದೆ ಎಂದು ಅವರು ಹೆಮ್ಮೆ ವ್ಯಕ್ತಪಡಿಸಿದ್ದಾರೆ.

# ಅನಧಿಕೃತ ಕೋಚಿಂಗ್ ಸೆಂಟರ್ ಸ್ಥಗಿತಕ್ಕೆ ಆಗ್ರಹಿಸಿ ಧರಣಿ

**ಬೀದರ್, ಮೇ.9–** ನಗರದಲ್ಲಿ ಅನಧಿಕೃತವಾಗಿ ನಡೆಸುತ್ತಿರುವ ಕೋಚಿಂಗ್ ಸೆಂಟರ್‌ಗಳು ಹಾಗೂ ಅಧಿಕ ಶುಲ್ಕ ಪಡೆಯುತ್ತಿರುವ ಖಾಸಗಿ ಕಾಲೇಜುಗಳ ವಿರುದ್ಧ ಕ್ರಮ ಕೈಗೊಳ್ಳಲು ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆಯ ಕಾರ್ಯಕರ್ತರು ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ಧರಣಿ ಸತ್ಯಾಗ್ರಹ ಮಾಡಿದರು.



ಬೀದರನಲ್ಲಿ ನಡೆಯುತ್ತಿರುವ ಅನಧಿಕೃತ ಕೋಚಿಂಗ್ ಸೆಂಟ್ ಬಂದ್ ಮಾಡುವುದು ಹಾಗೂ ಅಧಿಕ ಶುಲ್ಕ ಪಡೆಯುತ್ತಿರುವ ಖಾಸಗಿ ಕಾಲೇಜುಗಳ ವಿರುದ್ಧ ಕ್ರಮಕ್ಕೆ ಅಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧಿಕಾರಿಗಳ ಕಚೇರಿ ಮುಮದೆ ಧರಣಿ ಸತ್ಯಾಗ್ರಹ ನಡೆಸಿತು.

ವೇದಿಕೆ ಜಿಲ್ಲಾ ಘಟಕದ ಅಧ್ಯಕ್ಷ ಸೋಮನಾಥ ಮುಧೋಳ್ ಅವರ ನೇತೃತ್ವದಲ್ಲಿ ಧರಣಿ ನಡೆಸಿ, ಪದವಿಪೂರ್ವ ಶಿಕ್ಷಣ ಇಲಾಖೆಯ ನಿರ್ದೇಶಕರಿಗೆ ಬರೆದ ಮನವಿ ಪತ್ರವನ್ನು ಸ್ಥಳಕ್ಕೆ ಬಂದ ಇಲಾಖೆಯ ಉಪ ನಿರ್ದೇಶಕ ಚಂದ್ರಕಾಂತ್ ಶಹಾಬಾದಕರ್ ಅವರಿಗೆ ಸಲ್ಲಿಸಿದರು.

ನಗರದ ಚಿದ್ರಿ ರಸ್ತೆಯಲ್ಲಿ ಇರುವ ಹನುಮಾನ್ ನಗರದಲ್ಲಿ ಫಿಜಿಕ್ಸ್ ವಾಲಾ ವಿದ್ಯಾಪೀಠ ಪಾಠಶಾಲಾ ಕೋಚಿಂಗ್ ಸೆಂಟರ್ ಅನಧಿಕೃತವಾಗಿ ನಡೆಸಲಾಗುತ್ತಿದೆ. ಬೇರೆ ಬೇರೆ ಕಾಲೇಜುಗಳ ಹೆಸರಲ್ಲಿ ದಾಖಲಾತಿ ಮಾಡಿಸಿಕೊಂಡು, ವಿದ್ಯಾರ್ಥಿಗಳಿಂದ ಲಕ್ಷಾಂತರ ರೂ.ಗಳನ್ನು ಪಡೆದು, ಆನ್‌ಲೈನ್, ಆಫ್‌ಲೈನ್ ಕೋಚಿಂಗ್ ಕೊಡಲಾಗುತ್ತಿದೆ ಎಂದು ಅವರು ಆರೋಪಿಸಿದರು.

ಬನ್ಸಾಲ್ ಹಾಗೂ ಆಕಾಶ್ ಕೋಚಿಂಗ್ ಸೆಂಟರ್ ಹೆಸರಲ್ಲಿಯೂ ದಾಖಲಾತಿ ಮಾಡಿಸಿಕೊಂಡು ನೂರಾರು ವಿದ್ಯಾರ್ಥಿಗಳನ್ನು ವಂಚಿಸಲಾಗುತ್ತಿದೆ ಎಂದು ಆಪಾದಿಸಿದ ಅವರು, ಅಧಿಕೃತ ಕಾಲೇಜುಗಳು ಸಹ ನೀಟ್, ಕೆಸಿಇಟಿ, ಜೆಇಇ ಹೆಸರಿನಲ್ಲಿ ವಿದ್ಯಾರ್ಥಿಗಳಿಂದ ವರ್ಷಕ್ಕೆ 1.50 ಲಕ್ಷದಿಂದ 2 ಲಕ್ಷ ರೂ.ಗಳವರೆಗೆ ಶುಲ್ಕ ವಸೂಲಿ ಮಾಡುತ್ತಿವೆ ಎಂದು ದೂರಿದರು.

ಶಿಕ್ಷಣ ಸಂಸ್ಥೆಗಳು ಹೆಚ್ಚಿನ ಶುಲ್ಕ ಪಡೆಯುತ್ತಿರುವುದರಿಂದ ಮಕ್ಕಳ ಶಿಕ್ಷಣ ಪಾಲಕರಿಗೆ ಹೊರೆಯಾಗಿದೆ. ಶುಲ್ಕ ಕಟ್ಟಲು ವಿಳಂಬ ಮಾಡಿದ ವಿದ್ಯಾರ್ಥಿಗಳಿಗೆ ಕಿರುಕುಳ ನೀಡುತ್ತಿರುವ ಘಟನೆಗಳೂ ನಡೆಯುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದ ಅವರು, ಅಧಿಕಾರಿಗಳು ಕೂಡ ಕೋಚಿಂಗ್ ಸೆಂಟರ್ ಮಾಫಿಯಾ ಜತೆ ಕೈಜೋಡಿಸಿದ್ದಾರೆ ಎಂದು ಆರೋಪಿಸಿದರು.

ಹೆಚ್ಚು ಶುಲ್ಕ ಪಡೆಯುತ್ತಿರುವ ಕಾಲೇಜುಗಳು ಹಾಗೂ ಅನಧಿಕೃತ ಕೋಚಿಂಗ್ ಸೆಂಟರ್‌ಗಳ ವಿರುದ್ಧ ಕ್ರಮ ಜರುಗಿಸಬೇಕು. ಇಲ್ಲವಾದಲ್ಲಿ ಶಾಲಾ, ಕಾಲೇಜುಗಳ ಎದುರು ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಅನುಮತಿ ಇಲ್ಲದೆ ನಡೆಸುತ್ತಿರುವ ಫಿಜಿಕ್ಸ್‌ವಾಲಾ, ಬನ್ಸಾಲ್ ಹಾಗೂ ಆಕಾಶ್ ಕೋಚಿಂಗ್ ಸೆಂಟರ್‌ಗಳನ್ನು ನಾಳೆಯೇ ಬಂದ್ ಮಾಡಿಸಲಾಗುವುದು ಎಂದು ಚಂದ್ರಕಾಂತ್ ಶಹಾಬಾದಕರ್ ಭರವಸೆ ನೀಡಿದರು. ಧರಣಿಯಲ್ಲಿ ಜಿಲ್ಲಾ ಘಟಕದ ಉಪಾಧ್ಯಕ್ಷರಾದ ಸೋಮಶೇಖರ್ ಸಜ್ಜನ್, ಶಿವರುದ್ರ ಕೀರ್ತಾ, ವಿಜಯಕುಮಾರ್ ಅಷ್ಟೂರೆ, ಮಲ್ಲು ಸಿಕೇನಪುರ, ಸಚಿನ್ ಬೆನಕನಳ್ಳಿ, ಪ್ರಧಾನ ಕಾರ್ಯದರ್ಶಿ ವಿಶ್ವನಾಥ ಗೌಡ, ಔರಾದ್ ತಾಲ್ಲೂಕು ಘಟಕದ ಅಧ್ಯಕ್ಷ ಅನಿಲ್ ಹೇಡೆ, ಭಾಲ್ಕಿ ತಾಲ್ಲೂಕು ಅಧ್ಯಕ್ಷ ಬಂಡೆಪ್ಪ ಕರಬಸಣ್ಣ, ಬೀದರ್ ನಗರ ಘಟಕದ ಅಧ್ಯಕ್ಷ ಶಿವಕುಮಾರ್, ಕಮಲನಗರ ತಾಲ್ಲೂಕು ಘಟಕದ ಉಪಾಧ್ಯಕ್ಷ ಮಂಜುನಾಥ ಸ್ವಾಮಿ, ಮುಖಂಡರಾದ ಮಲ್ಲಪ್ಪ ಚಿಡಪಳ್ಳಿ, ವಿವೇಕ್ ನಿರ್ಮಳೆ, ಜಮೀರ್ ಬಗದಲ್, ನಾಗೇಶ್ ಮನ್ನಳ್ಳಿ, ದಯಾನಂದ್ ವೀರಶೆಟ್ಟೆ, ಕರಬಸಪ್ಪ ವೀರಶೆಟ್ಟೆ, ಪ್ರತಯ್ಯ ಸ್ವಾಮಿ, ಪ್ರಶಾಂತ್ ಖಾನಾಪುರೆ, ಅಯೂಬ್ ಖುರೇಷಿ, ಇರ್ಷಾದ್ ಮತ್ತಿತರರು ಪಾಲ್ಗೊಂಡಿದ್ದರು.

# ಸಮುದಾಯ ಅಭಿವೃದ್ಧಿಗೆ ರೆಡ್‌ಕ್ರಾಸ್ ಕೊಡುಗೆ ಅಪಾರ: ಎಚ್.ಬಿ.ಪಾಟೀಲ್



ಕಲಬುರಗಿ ಜಿಲ್ಲೆಯ ಜೇವರ್ಗಿ ಸರ್ಕಾರಿ ಕಾಲೇಜ್‌ನಲ್ಲಿ ರೆಡ್ ಕ್ರಾಸ್ ಸಂಸ್ಥೆಯ ಸ್ಥಾಪಕ ಹೆನ್ರಿಡ್ಯೂನಾಂಟ್ ಜನ್ಮ ದಿನಾಚರಣೆ ನಡೆಯಿತು.

**ಕಲಬುರಗಿ, ಮೇ.9–** ನೈಸರ್ಗಿಕ ವಿಪತ್ತುಗಳ ನಿರ್ವಹಣೆ, ಜನಜಾಗೃತಿ ಕಾರ್ಯಕ್ರಮ, ರಕ್ತದಾನ, ಪ್ರವಾಹ, ಸಂಕಷ್ಟದಲ್ಲಿರುವ ಜನರಿಗೆ ಸಹಾಯ, ಶಾಂತಿ ಕಾಪಾಡುವುದು, ಗಾಯಗೊಂಡ ವ್ಯಕ್ತಿಗಳಿಗೆ ಚಿಕಿತ್ಸೆ ನೀಡುವುದು, ಆಕಸ್ಮಿಕ ಮರಣದ ಪ್ರಮಾಣವನ್ನುತಗ್ಗಿಸುವುದು, ಸಮುದಾಯದ ಅಭಿವೃದ್ಧಿ ಸೇರಿದಂತೆ ಅನೇಕ ಸಮಾಜಮುಖಿ ಕಾರ್ಯಗಳನ್ನು ಕಳೆದ ಅನೇಕ ವರ್ಷಗಳಿಂದ ಮಾಡುವ ಮೂಲಕ ರೆಡ್‌ಕ್ರಾಸ್ ಸಂಸ್ಥೆಯು ವಿಶ್ವದ ಅಭಿವೃದ್ಧಿಗೆತನ್ನದೇ ಆದ ಅಪಾರವಾದ ಕೊಡುಗೆ ನೀಡುತ್ತಿದೆ ಎಂದು ಕಿರಿಯ ರೆಡ್‌ಕ್ರಾಸ್ ಘಟಕದ ಕೌನ್ಸಲರ್ ಎಚ್.ಬಿ. ಪಾಟೀಲ ಹೇಳಿದರು.

ಜಿಲ್ಲೆಯ ಜೇವರ್ಗಿ ಬಸವೇಶ್ವರ ವೃತ್ತದ ಸಮೀಪವಿರುವ ಸರ್ಕಾರಿ ಪಿಯು ಕಾಲೇಜಿನಲ್ಲಿ ಕಾಲೇಜಿನ 'ಕಿರಿಯರೆಡ್ ಕ್ರಾಸ್' ಘಟಕದ ವತಿಯಿಂದ ಏರ್ಪಡಿಸಿದ್ದ 'ವಿಶ್ವ ರೆಡ್‌ಕ್ರಾಸ್ ದಿನಾಚರಣೆ'ಯಲ್ಲಿ ಮಾತನಾಡಿದ ಅವರು, ಸಮಾಜದ ಪ್ರತಿಯೊಂದು ಕ್ಷೇತ್ರದಲ್ಲೂ ರೆಡ್ ಕ್ರಾಸ್ ಸಂಸ್ಥೆ ವಿವಿಧ ಸೇವೆಗಳನ್ನು ಸಲ್ಲಿಸುತ್ತ ಬಂದಿದೆ. ಸಾರ್ವಜನಿಕರಿಗೂ ಕೂಡ ರೆಡ್ ಕ್ರಾಸ್ ಸಂಸ್ಥೆಯ ಮೇಲೆ ಅಪಾರವಾದ ನಂಬಿಕೆ ಇರುವುದರಿಂದಲೇ ಸಹಾಯ ಸಹಕಾರ ನೀಡುತ್ತ ಬಂದಿರುವುದರಿಂದಲೇ ಸಂಸ್ಥೆಯು ಇಷ್ಟೊಂದು ದೊಡ್ಡ ಪ್ರಮಾಣದ ಸೇವೆ ಸಲ್ಲಿಸಲು ಸದ್ಯವಾಗಿದೆ ಎಂದರು.

ಕಾಲೇಜಿನ ಪ್ರಾಚಾರ್ಯ ರವೀಂದ್ರ ಕುಮಾರ ಸಿ. ಬಟಗೇರಿ ಮಾತನಾಡಿ, ಹೆನ್ರಿಡ್ಯೂನಾಂಟ್ ಅವರ ದೂರದೃಷ್ಠಿಯ ಫಲವೇ ಈ ಸಂಸ್ಥೆಯ ಉಗಮಕ್ಕೆ ಕಾರಣವಾಗಿದೆ. ಈ ಸಂಸ್ಥೆಯು ಯುದ್ಧಪೀಡಿತ ಸಂದರ್ಭದಲ್ಲಿ ಕಂಡುಬರುವ ಜೀವಹಾನಿಯನ್ನು ತಪ್ಪಿಸಲು ಪ್ರಯತ್ನಿಸುತ್ತದೆ.ಈ ಸಂದರ್ಭದಲ್ಲಿ ತಮ್ಮ ಜೀವದ ಹಮಗು ತೊರೆದು ಸಲ್ಲಿಸುವ ಸೇವೆಯನ್ನು ಮರೆಯುವಂತಿಲ್ಲ. ಎಲ್ಲಾ ವಿದ್ಯಾರ್ಥಿಗಳು ರೆಡ್‌ಕ್ರಾಸ್ ಸದಸ್ಯರಾಗಿ ಸೇವೆ ಸಲ್ಲಿಸಬೇಕು ಎಂದರು.

## ಸುರಪುರ ಆರೋಗ್ಯಾಧಿಕಾರಿಗೆ ಸೇರಿದ ಐದು ಸ್ಥಳಗಳಲ್ಲಿ ಲೋಕಾಯುಕ್ತ ದಾಳಿ



**ಕಲಬುರಗಿ, ಮೇ.9–** ಆದಾಯ ಮೀ ರಿ ಆಸ್ತಿ ಗಳಿಕೆ ಆರೋಪದ ಹಿನ್ನೆಲೆಯಲ್ಲಿ ನೆರೆಯ ಯಾದಗಿರಿ ಜಿಲ್ಲೆಯ ಸುರಪುರ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ಆರ್.ವಿ. ನಾಯಕ್‌ಗೆ ಸೇರಿದ ಕಲಬುರಗಿ ನಗರದ ಮನೆ ಸೇರಿ ಐದು ಸ್ಥಳಗಳಲ್ಲಿ ಲೋಕಾಯುಕ್ತ ಪೊಲೀಸರು ದಾಳಿ ಮಾಡಿ ಹಣ, ಮಹತ್ವದ ದಾಖಲೆಗಳನ್ನು ಸಂಗ್ರಹಿಸಿದ್ದಾರೆ.

ಯಾದಗಿರಿ ಲೋಕಾಯುಕ್ತ ಡಿವೈಎಸ್ಪಿ ಜೆ.ಎಚ್. ಇನಾಂದಾರ ನೇತೃತ್ವದಲ್ಲಿ ಸುರ ಪುರ ತಾಲ್ಲೂಕುಆರೋಗ್ಯ ಅಧಿಕಾರಿಗಳ ಕಚೇರಿ, ಅದಿತಿ ಹೊಟೇಲ್, ಪೆಟ್ರೋಲ್ ಪಂಪ್, ಖಾಸಗಿ ಆಸ್ಪತ್ರೆ ಸೇರಿಐದುಕಡೆ ಲೋಕಾಯುಕ್ತ ಅಧಿಕಾರಿಗಳು ದಾಳಿ ಮಾಡಿದರು. ಅದೇ ರೀತಿ ಸುರಪುರ ನಗರದಲ್ಲಿರುವ ಡಾ.ಆರ್.ವಿ. ನಾಯಕ್ ಮನೆ, ಕಲಬುರಗಿಯ ಮನೆ ಮೇಲೂ ದಾಳಿ ಮಾಡಿದರು.

ಲೋಕಾಯುಕ್ತರ ದಾಳಿ ವೇಳೆ ಸುರಪುರ ಪಟ್ಟಣದ ಮನೆಯಲ್ಲೇ ಇದ್ದ ಡಾ.ಆರ್.ವಿ. ನಾಯಕ್, ಅಂದಾಜು ಸ್ಥಿರ ಆಸ್ತಿಗಳ ಮೌಲ್ಯ 11.5 ಕೋಟಿ ರೂ.ಗಳು ಆಗಿದೆಎಂದು ಲೋಕಾಯುಕ್ತ ಪೊಲೀಸರು ಮಾಹಿತಿ ನೀಡಿದ್ದಾರೆ. 11 ನಿವೇಶನಗಳ ಮೌಲ್ಯ 45 ಲಕ್ಷ ರೂ.ಗಳ 2 ಮನೆಗಳಿದ್ದು, 3 ಕೋಟಿ ರೂ.ಗಳ ಮೌಲ್ಯ ಹೊಂದಿವೆ. 13 ಎಕರೆ ಕೃಷಿ ಭೂಮಿ ಇದ್ದು, 20 ಲಕ್ಷ ರೂ.ಗಳ ಮೌಲ್ಯ ಹೊಂದಿವೆ.

ಅದರ ಜೊತೆಗೆ 40 ರೂ.ಗಳ ಮೌಲ್ಯದ ಒಂದು ಪೆಟ್ರೋಲ್ ಪಂಪ್, ಖಾಸಗಿ ನರ್ಸಿಂಗ್ ಹೋಮ್, 1.5 ಕೋಟಿ ರೂ, ಗಳ ಮೌಲ್ಯದ ಖಾಸಗಿ ಲಾಡ್ಜ್ ಮತ್ತು ಬಾರ್ ಮೌಲ್ಯ 5.5 ಕೋಟಿ ರೂ,ಗಳು, ಚರ ಆಸ್ತಿ 1.54 ಕೋಟಿ ರೂ.ಗಳು, ದಾಳಿ ವೇಳೆ 4.10 ಲಕ್ಷ, 60 ಲಕ್ಷ ರೂ.ಗಳ ಮೌಲ್ಯದ ಆಭರಣಗಳು, 70 ಲಕ್ಷ ರೂ.ಗಳ ಮೌಲ್ಯದಕಾರು ಸೇರಿದಂತೆ ಇತರೆ 20 ಲಕ್ಷ ರೂ.ಗಳನ್ನು ವಶಕ್ಕೆ ಪಡೆಯಲಾಗಿದೆ ಎಂದು ಲೋಕಾಯುಕ್ತರು ತಿಳಿಸಿದ್ದಾರೆ.

## ಬುದ್ಧ ಜಯಂತಿಯಂದು ಕವಿಗೋಷ್ಠಿ, ನಿಬಂಧ, ಪ್ರಬಂಧ ಸ್ಪರ್ಧೆ, ಗಾಯನ ಕಾರ್ಯಕ್ರಮ



**ಬೀದರ್, ಮೇ.9–** ನಗರದ ಜನವಾಡ ರಸ್ತೆ ಶಾಹಗಂಜ್ ಅಂಬೇಡ್ಕರ್ ಭವನದಲ್ಲಿ ಮೇ 10ರಿಂದಲೇ ಬುದ್ಧ ಜಯಂತಿ ಆಚರಣೆ ಕಾರ್ಯಕ್ರಮಗಳು ನಡೆಯಲಿದ್ದು, ಅಂದು ಬೆಳಿಗ್ಗೆ 11 ಗಂಟೆಗೆ ಕವಿಗೋಷ್ಠಿ, ಭಾಷಣ, ನಿಬಂಧ, ಪ್ರಬಂಧ, ಗಾಯನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಈ ಕುರಿತು ಹಿರಿಯ ಸಾಹಿತಿ ಎಸ್.ಎಂ. ಜನವಾಡಕರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತೀರ್ಮಾನ ಮಾಡಲಾಗಿದೆ.

ಹಿರಿಯ ಸಾಹಿತಿ ಡಾ. ಕಾಶಿನಾಥ ಚಲುವಾ ಅವರು ವಿಷಯ ಪ್ರಸ್ತಾಪ ಮಾಡಿ, ಕರ್ನಾಟಕ ರಾಜ್ಯ ಸರ್ಕಾರ ಈ ವರ್ಷ ಸರ್ಕಾರದಿಂದ ಬುದ್ಧ ಜಯಂತಿ ಆಚರಣೆ ಮಾಡಲು ಆದೇಶವನ್ನು ಹೊರಡಿಸಿದ್ದು, ಬುದ್ಧನ ಬೋಧನೆಗಳು, ಧಮ್ಮ ಚಿಂತನೆಗಳು, ಅನಿವಾರ್ಯವಾಗಿವೆ ಬುದ್ಧನ ಜೀವನ ಮತ್ತು ಬುದ್ಧ ಧಮ್ಮ ಕುರಿತು ಸಾಹಿತ್ಯ ಸಂಗೀತ ಗೋಷ್ಠಿಗಳು ಹಮ್ಮಿಕೊಂಡು ಜನಸಾಮಾನ್ಯರಿಗೆ ಬುದ್ಧನ ನೀತಿ ಬೋಧನೆಗಳು ತಿಳಿಸಿಕೊಡಬೇಕಾಗಿದೆ ಎಂದರು.

ಭಾರತೀಯ ಬೌದ್ಧ ಮಹಾ ಸಭಾದ ಜಿಲ್ಲಾಧ್ಯಕ್ಷ ರಾಜೆಪ್ಪ ಗುನ್ನಳ್ಳಿ ಅವರು ಮಾತನಾಡಿ, ಬುದ್ಧ, ಧಮ್ಮ ಸಂಘ ವಂದನೆಗಳು, ಧಮ್ಮ ಪದ, ಸುತ್ತಗಳು ಗಾಥಾಗಳು ವಾಚನ ಮಾಡುವವರಿಗೂ ಅವಕಾಶ ನೀಡಬೇಕು ಎಂದರು. ಮಹೇಶ್ ಗೋರನ್ನಾಳಕರ್ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಯುವ ಜನಾಂಗದಲ್ಲಿ ಅಶಾಂತಿ ಹೆಚ್ಚಾಗುತ್ತಿದೆ. ಯುವಕರಲ್ಲಿ ಶಾಂತಿ ಜೀವನ ಪ್ರಗತಿ ಜೀವನ ನಡೆಸಲು ಬುದ್ಧ ಧಮ್ಮ ಚಿಂತನೆಗಳು ಅವಶ್ಯವಾಗಿವೆ. ಬುದ್ಧನನ್ನು ಕುರಿತು ಸಾಹಿತ್ಯ ಗೋಷ್ಠಿ ಸಂಗೀತ ಗೋಷ್ಠಿಗಳು ನಡೆಸಬೇಕು. ಮಾನವನ ಆರೋಗ್ಯತನ ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದರು.

ಹಿರಿಯರಾದ ನಾಗೇಂದ್ರ ದಂಡೆ, ದಶರಥ ಗುರು, ಗೋವಿಂದ್ ಪೂಜಾರಿ, ಪಾಂಡುರಂಗ ಬೆಲ್ದಾರ್, ತಾತ್ಯಾರಾವ್ ಕಾಂಬಳೆ, ಸಾಹಿತಿಗಳಾದ ಡಾ.ಸುಬ್ಬಣ್ಣ ಕರಕನಳ್ಳಿ, ಶರಣಬಸಪ್ಪ ಫುಲೆ, ಅಶೋಕ್ ಆಲ್ಲೂರಕರ್ ಮಂತಾದವರ ನಿರ್ಣಯದಂತೆ, ವಿಶ್ವ ಕನ್ನಡಿಗರ ಸಂಸ್ಥೆ ಕರ್ನಾಟಕ ಹಾಗೂ ಬೌದ್ಧ ಸಾಹಿತಿ ಪರಿಷತ್ತು ಸಂಯುಕ್ತಾಶ್ರಯದಲ್ಲಿ ಕವಿಗೋಷ್ಠಿ ಜರುಗಲಿದ್ದು ಜಿಲ್ಲೆಯ ಕವಿಗಳು ಸ್ವ ರಚಿತ ಕವಿತೆಗೊಳೊಂದಿಗೆ ಮೇ 10ರಂದು ಬೆಳಗ್ಗೆ 11 ಗಂಟೆಗೆ ಹಾಜರಾಗಿ ಕವಿತೆಗಳು ವಾಚಿಸಬೇಕು. ಹೆಸರು ನೊಂದಾಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಡಾ. ಸುಬ್ಬಣ್ಣ ಕರಕನಳ್ಳಿ, ಅಧ್ಯಕ್ಷರು, ವಿಶ್ವ ಕನ್ನಡಿಗರ ಸಂಸ್ಥೆ ಅವರನ್ನು ಸಂಪರ್ಕಿಸುವಂತೆ ಕೋರಲಾಯಿತು.

# ಆಪರೇಷನ್ ಸಿಂಧೂರ ಯಶಸ್ವಿ– ಕನಕ ದುರ್ಗಮ್ಮ ದೇಗುಲದಲ್ಲಿ ಪೂಜೆ

**ಬಳ್ಳಾರಿ ಮೇ.9–** ಭಾರತೀಯ ಸೇನೆಯು ಪಾಕಿಸ್ತಾನ ಮತ್ತು ಪಾಕ್ ಆಕ್ರಮಿತ ಕಾಶ್ಮೀರದಲ್ಲಿ ಆಪರೇಷನ್ ಸಿಂಧೂರ ಯಶಸ್ವಿಯಾಗಿ ನಡೆಸಿದೆ, ಆದ್ದರಿಂದ ಬಳ್ಳಾರಿ ಬಿಜೆಪಿ ಘಟಕದ ವತಿಯಿಂದ ಕನಕ ದುರ್ಗಮ್ಮ ದೇಗುಲದಲ್ಲಿ ವಿಶೇಷ ಪೂಜೆ ಸಲ್ಲಿಸಿ 101 ತೆಂಗಿನಕಾಯಿ ಒಡೆದು ಪ್ರಾರ್ಥನೆ ಮಾಡಲಾಯಿತು.



ಭಾರತೀಯ ಯೋಧರಿಗೆ ಒಳ್ಳೆಯದಾಗಲಿ ಎಂದು ಹಾರೈಸಿ ಸೈನಿಕರಿಗಾಗಿ ಮತ್ತು ಪ್ರಧಾನಿ ಮೋದಿಗೆ, ದೇವಿಗೆ ವಿಶೇಷ ಪೂಜೆ ಸಲ್ಲಿಕೆ ಮಾಡಲಾಗಿದೆ. ದೇಶಕಾಯುವ ಯೋಧರಿಗೆ ಯಾವುದೇ ತೊಂದರೆ ಆಗದಂತೆ ಕಾಪಾಡುವಂತೆ ಪ್ರಾರ್ಥಿಸಿ ಸಂಕಲ್ಪ ಮಾಡಿದ್ದಾರೆ. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್, ಬಿಜೆಪಿ ಜಿಲ್ಲಾಧ್ಯಕ್ಷ ಅನಿಲ್ ನಾಯ್ಡು, ಬಿಜೆಪಿ ಮುಖಂಡ ದಿವಾಕರ್, ಪಾಲಿಕೆ ಸದಸ್ಯ ಗೋವಿಂದ ರಾಜುಲು, ಶ್ರೀನಿವಾಸ್ ಮೋತ್ಕರ್, ಗುಡಿ ಘಂಟಿ ಹನುಮಂತಪ್ಪ, ಆಶಾ ಸುರೇಖಾ ಮಲ್ಲನಗೌಡ, ಕೆ.ಎಸ್.ರಾಮಾಂಜಿನಿ, ಗಡ್ಡಂ ತಿಮ್ಮಪ್ಪ, ರಾಣಿತೋಟ ವೀರೇಶ್, ಉಜ್ವಲ, ರಘು, ಮತ್ತಿತರರು ಭಾಗವಹಿಸಿದ್ದರು.

# ಮೇ 12ರಂದು ಜಿಲ್ಲಾಡಳಿತದಿಂದ ಭಗವಾನ್ ಬುದ್ಧ ಜಯಂತಿ

**ವಿಜಯಪುರ, ಮೇ.9–** ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಹಯೋಗದಲ್ಲಿ ಮೇ.12 ರಂದು ನಗರದ ಡಾ. ಬಿ.ಆರ್.ಅಂಬೇಡ್ಕರ ವೃತ್ತದ ಮುಂಭಾಗದಲ್ಲಿರುವ ಅಂಬೇಡ್ಕರ್ ಭವನದಲ್ಲಿ ಭಗವಾನ್ ಬುದ್ಧ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಂದು ಬೆಳಿಗ್ಗೆ 8:30 ಗಂಟೆಗೆ ನಗರದ ಬುದ್ಧ ವಿಹಾರದಿಂದ ಅಂಬೇಡ್ಕರ್ ಭವನದವರೆಗೆ ಭಗವಾನ್ ಬುದ್ಧ ಭಾವಚಿತ್ರ ಮೆರವಣಿಗೆ ಹಾಗೂ ಬೆಳಿಗ್ಗೆ 10 ಗಂಟೆಗೆ ಜಯಂತಿ ಕಾರ್ಯಕ್ರಮದ ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ.

ಜಯಂತಿ ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಖಾತೆ ಸಚಿವರಾದ ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಬಿ.ಪಾಟೀಲ ಅವರು ಉದ್ಘಾಟಿಸಲಿದ್ದಾರೆ.

ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರಾದ ಶಿವಾನಂದ ಎಸ್. ಪಾಟೀಲ ಅವರು ಗೌರವ ಉಪಸ್ಥಿತರಿರಲಿದ್ದಾರೆ. ವಿಜಯಪುರ ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ತಿನ ವಿರೋಧ ಪಕ್ಷದ ಮುಖ್ಯ ಸಚೇತಕರಾದ ರವಿಕುಮಾರ್ ಎನ್, ಪರಿಷತಿನ ಶಾಸಕರಾದ ನವದೆಹಲಿಯಲ್ಲಿನ ಕರ್ನಾಟಕ ಸರ್ಕಾರದ ವಿಶೇಷ ಪ್ರತಿನಿಧಿ–2 ಪ್ರಕಾಶ ಹುಕ್ಕೇರಿ, ಕರ್ನಾಟಕ ಸೋಪ್ಸ್ ಮತ್ತು ಡಿಟರ್ಜೆಂಟ್ ನಿಯಮಿತದ ಅಧ್ಯಕ್ಷರೂ ಆದ ಶಾಸಕ ಅಪ್ಪಾಜಿ ಸಿ.ಎಸ್.ನಾಡಗೌಡ, ಸಂಸದರಾದ ರಮೇಶ ಜಿಗಜಿಣಗಿ ಹಾಗೂ ಡಾ.ಸುಧಾ ಮೂರ್ತಿ, ಶಾಸಕರಾದ ಯಶವಂತರಾಯಗೌಡ ವಿ.ಪಾಟೀಲ, ಹಣಮಂತ ಆರ್ ನಿರಾಣಿ, ಸುನೀಲಗೌಡ ಬಿ.ಪಾಟೀಲ, ಪಿ.ಎಚ್.ಪೂಜಾರ, ವಿಠ್ಠಲ ಕಟಕಧೋಂಡ, ರಾಜುಗೌಡ ಪಾಟೀಲ, ಅಶೋಕ ಮನಗೂಳಿ ಹಾಗೂ ಕೇಶವ ಪ್ರಸಾದ ಎಸ್, ಕರ್ನಾಟಕ ಕೌಶಲ್ಯಾಭಿವೃದ್ಧಿ ನಿಗಮದ ಅಧ್ಯಕ್ಷರಾದ ಶ್ರೀಮತಿ ಕಾಂತಾ ನಾಯ್ಕ, ಧಾರವಾಡ ಕರ್ನಾಟಕ ಬಾಲ ವಿಕಾಸ ಅಕಾಡೆಮಿ ಅಧ್ಯಕ್ಷರಾದ ಸಂಗಮೇಶ ಬಬಲೇಶ್ವರ, ವಿಜಯಪುರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಕನಾನ್ ಮುಶ್ರೀಫ್ ಹಾಗೂ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಇಲಿಯಾಸ ಬೋರಾಮಣಿ ಬಿನ್ ಮೈಬೂಬ್ ಬೋರಾಮಣಿ ಅವರು ಭಾಗವಹಿಸಲಿದ್ದಾರೆ.

## ಆಪರೇಷನ್ ಸಿಂಧೂರ ಯಶಸ್ವಿಗೆ ಶುಭ ಹಾರೈಕೆ ಸಿದ್ದಪ್ಪ ನೇತೃತ್ವದಲ್ಲಿ ಮಹಾಂಕಾಳಮ್ಮ ಪೂಜೆ

**ಬಳ್ಳಾರಿ, ಮೇ.9–** ಬಳ್ಳಾರಿ ಜಿಲ್ಲೆಯ ಸಿರುಗುಪ್ಪ ವಿಧಾನಸಭಾ ಕ್ಷೇತ್ರದ ಬಲಕುಂದಿ ಗ್ರಾಮದ ಆರಾಧ್ಯ ದೇವರಾದ ಶ್ರೀ ಬನ್ನಿ ಮಹಾಂಕಾಳಮ್ಮ ದೇವಸ್ಥಾನಕ್ಕೆ ಬಿಜೆಪಿ ಯುವ ಮೋರ್ಚಾ ಜಿಲ್ಲಾಧ್ಯಕ್ಷರಾದ ಸಿದ್ದಪ್ಪ ಮತ್ತು ಅವರ ಅಭಿಮಾನಿಗಳು ತೆರಳಿ ಭಾರತ ಮತ್ತು ಪಾಕಿಸ್ತಾನದ ನಡುವೆ "ಆಪರೇಷನ್ ಸಿಂಧೂರ" ಮೂಲಕ ಕಳೆದ ಮೂರು ದಿನಗಳಿಂದ ಯುದ್ಧ ನಡೆಯುತ್ತಿದ್ದು ಯುದ್ಧ ಮಾಡುತ್ತಿರುವ ನಮ್ಮ ಭಾರತೀಯ ಸೈನಿಕರಿಗೆ ಮತ್ತು ನಮ್ಮ ದೇಶದ ಹೆಮ್ಮೆಯ ಪ್ರಧಾನ ಮಂತ್ರಿ ನರೇಂದ್ರ ಮೋದಿಗೆ ಹೆಚ್ಚಿನ ಧೈರ್ಯ ಶಕ್ತಿ ಮತ್ತು ಆತ್ಮಸ್ಥೈರ್ಯ ಕೊಟ್ಟು ಕಾಪಾಡಲಿ" ಆಪರೇಷನ್ ಸಿಂಧೂರ" ಯಶಸ್ವಿಯಾಗಲಿ ಎಂದು ಆ ತಾಯಿಯಲ್ಲಿ ವಿಶೇಷ ಪೂಜೆ ಸಲ್ಲಿಸಿದ್ದಾರೆ.



# ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಶಾಲಾ-ಕಾಲೇಜಿಗೆ ಅತಿಥಿ ಶಿಕ್ಷಕರ ಹುದ್ದೆಗೆ ಅರ್ಜಿ ಆಹ್ವಾನ

ವಿಜಯಪುರ,ಮೇ.9–ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧೀನದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆ ಹಾಗೂ ಮೌಲಾನಾ ಆಜಾದ ಮಾದರಿ ವಸತಿ ಶಾಲೆ–ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ 157 ಹುದ್ದೆಗಳಿಗೆ ತಾತ್ಕಾಲಿಕವಾಗಿ ಅತಿಥಿ ಶಿಕ್ಷಕ / ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಮೇ.19 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ.

ಪ್ರೌಢಶಾಲಾ ವಿಭಾಗದಲ್ಲಿ ಕನ್ನಡ ಭಾಷಾ ಶಿಕ್ಷಕರು, ಇಂಗ್ಲೀಷ ಭಾಷಾ ಶಿಕ್ಷಕರು, ಹಿಂದಿ ಭಾಷಾ, ಉರ್ದು ಭಾಷಾ, ಗಣಿತ, ವಿಜ್ಞಾನ,ಸಮಾಜ ವಿಜ್ಞಾನ, ದೈಹಿಕ ಶಿಕ್ಷಣ, ಕಂಪ್ಯೂಟರ ಶಿಕ್ಷಕರು ಹಾಗೂ ಕಾಲೇಜು ವಿಭಾಗದಲ್ಲಿ ಕನ್ನಡ ಭಾಷಾ ಉಪನ್ಯಾಸಕರು, ಆಂಗ್ಲ ಭಾಷಾ, ಉರ್ದು ಭಾಷಾ, ಗಣಿತಶಾಸ್ತ್ರ, ಜೀವಶಾಸ್ತ್ರ,ಭೌತಶಾಸ್ತ್ರ ಹಾಗೂ ರಸಾಯನಶಾಸ್ತ್ರ ವಿಷಯಗಳ ಉಪನ್ಯಾಸಕರು ಹಾಗೂ ವಾಣಿಜ್ಯ ವಿಭಾಗದಲ್ಲಿ ಲೆಕ್ಕಶಾಸ್ತ್ರ, ವ್ಯವಹಾರ ಅಧ್ಯಯನ, ಅರ್ಥಶಾಸ್ತ್ರ, ಕಂಪ್ಯೂಟರ್ ಸೈನ್ಸ್ ವಿಷಯಗಳಲ್ಲಿ ಅಗತ್ಯ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ https://dom.karnataka.gov.in ವೆಬ್ಸೈಟ್‌ನ್ನು, ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ,ಮೌಲಾನಾ ಆಜಾದ್ ಭವನ, ವಿಜ್ಞಾನ ಚಟುವಟಿಕೆಗಳ ಕೇಂದ್ರದ ಹತ್ತಿರ, ಜಿಲ್ಲಾ ಪಂಚಾಯತಿ ರಸ್ತೆ ಕನಕದಾಸ ಬಡಾವಣೆ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ತಾಲೂಕು ಮಾಹಿತಿ ಕೇಂದ್ರಗಳಾದ ವಿಜಯಪುರ, ಇಂಡಿ, ಮುದ್ದೇಬಿಹಾಳ, ಸಿಂದಗಿ ಹಾಗೂ ಬಸವನ ಬಾಗೇವಾಡಿ ಮತ್ತು ಸಂಬಂಧಿಸಿದ ವಸತಿ ಶಾಲೆ–ಕಾಲೇಜಳಲ್ಲಿ ಸಂಪರ್ಕಿಸಬಹುದಾಗಿದೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಯೋತ್ಪಾದನೆಗೆ ಬೆಂಬಲ ನೀಡುವುದು ನಿಲ್ಲಿಸುವಂತೆ ಪಾಕಿಸ್ತಾನಕ್ಕೆ ಸೂಚಿಸಿ: ಭಾರತದ ರಾಯಭಾರಿ ಒತ್ತಾಯ

**ವಾಷಿಂಗ್ಟನ್/ನವದೆಹಲಿ, ಮೇ 9:** ಭಾರತ ಮತ್ತು ಪಾಕಿಸ್ತಾನ ನಡುವಿನ ಉದ್ವಿಗ್ನತೆಯ ಬಗ್ಗೆ ವಿಶ್ವದಲ್ಲಿ ಹೆಚ್ಚುತ್ತಿರುವ ಕಳವಳದ ನಡುವೆ, ಭಾರತದ ಮೇಲೆ ಕ್ಷಿಪಣಿ ಮತ್ತು ಡ್ರೋನ್ ದಾಳಿಗಳನ್ನು ನಡೆಸುವ ಪಾಕಿಸ್ತಾನದ ಕ್ರಮಗಳು ಇಸ್ಲಾಮಾಬಾದ್ ಭಯೋತ್ಪಾದನೆಯನ್ನು ಬೆಂಬಲಿಸುತ್ತದೆ ಮತ್ತು ಭಯೋತ್ಪಾದನೆಯನ್ನು ಬೆಂಬಲಿಸುವುದನ್ನು ನಿಲ್ಲಿಸುವಂತೆ ಜಗತ್ತು ಪಾಕಿಸ್ತಾನಕ್ಕೆ ಹೇಳಬೇಕು ಎಂದು ಅಮೆರಿಕದಲ್ಲಿನ ಭಾರತೀಯ ರಾಯಭಾರಿ ವಿನಯ್ ಮೋಹನ್ ಕ್ವಾತ್ರ ಹೇಳಿದ್ದಾರೆ. ಭಾರತವು ಭಯೋತ್ಪಾದಕರೊಂದಿಗೆ ಯುದ್ಧದಲ್ಲಿದೆ ಮತ್ತು ಪಹಲ್ಯಾಮ್ ದಾಳಿಯ ಬಲಿಪಶುಗಳಿಗೆ ನ್ಯಾಯ ಒದಗಿಸಲಿದೆ ಎಂದು ಅಮೆರಿಕಕ್ಕೆ ಭಾರತದ ರಾಯಭಾರಿ ವಿನಯ್ ಕ್ವಾತ್ರ ಹೇಳಿದ್ದಾರೆ. ಎಪ್ರಿಲ್ 22ರಂದು ನಡೆದಿರುವುದು ಅತ್ಯಂತ ಘೋರ ಭಯೋತ್ಪಾದಕ ಕೃತ್ಯವಾಗಿತ್ತು. ಈ ಉಗ್ರರಿಗೆ ಮುಕ್ತ ಅವಕಾಶ ನೀಡಬೇಕು ಎಂದು ಯಾರೂ ಹೇಳಲಾರರು. ನಮ್ಮ ಕಾರ್ಯಾಚರಣೆಯ ಉದ್ದೇಶವೂ ಇದೇ ಆಗಿದೆ. ಭಯೋತ್ಪಾದಕ ಕೃತ್ಯಗಳಿಗೆ ಹೊಣೆಗಾರರನ್ನು ಗುರುತಿಸಿ ಶಿಕ್ಷಿಸುವುದು. ಈ ಉಗ್ರರಿಗೆ, ಅವರನ್ನು ತಯಾರಿಸುವ ಫ್ಯಾಕ್ಟರಿಗಳಿಗೆ, ಅವರ ಸಮಗ್ರ ವ್ಯವಸ್ಥೆಗಳಿಗೆ ನಿಖರವಾದ ಪ್ರಹಾರ ನೀಡಿದ್ದೇವೆ ಎಂದು ಸುದ್ದಿಗೋಷ್ಠಿಯಲ್ಲಿ ಹೇಳಿದ್ದಾರೆ.



ಪಹಲ್ಯಾಮ್ ದಾಳಿಯಲ್ಲಿ ಪಾಕಿಸ್ತಾನದ ಯಾವುದೇ ಪಾತ್ರವಿಲ್ಲ ಎಂದು ಪಾಕ್ ಸರಕಾರ ಸ್ಪಷ್ಟಪಡಿಸಿರುವ ಕುರಿತ ಪ್ರಶ್ನೆಗೆ ವಿನಯ್ ಕ್ವಾತ್ರ ' ನಿರಾಕರಣೆ ಮತ್ತು ಅಸ್ಪಷ್ಟತೆ ಯಾವಾಗಲೂ ಪಾಕಿಸ್ತಾನದ ಕಾರ್ಯತಂತ್ರದ ಮೊದಲ ಭಾಗವಾಗಿದೆ. ಅಮೆರಿಕದ ಮೇಲೆ ಸೆಪ್ಟಂಬರ್ 11ರಂದು ನಡೆದಿದ್ದ ದಾಳಿಯ ರೂವಾರಿ, ಅಲ್ಖೈದಾ ಮುಖಂಡ ಒಸಾಮಾ ಬಿನ್ ಲಾದೆನ್ ಯಾವ ದೇಶದಲ್ಲಿದ್ದ ಎಂದು ಪ್ರತಿಕ್ರಿಯಿಸಿರುವುದಾಗಿ ವರದಿಯಾಗಿದೆ.

"ಭಾರತೀಯ ಕಾಶ್ಮೀರ ಭಾಗದಲ್ಲಿ" ಕೇಳಿಬರುತ್ತಿರುವ ಸ್ಫೋಟಗಳ ಬಗ್ಗೆ ಕೇಳಿದಾಗ, ಕ್ವಾತ್ರಾ ಮಧ್ಯಪ್ರವೇಶಿಸಿ, ಇಡೀ ಜಮ್ಮು ಮತ್ತು ಕಾಶ್ಮೀರವು ಭಾರತದ ಅವಿಭಾಜ್ಯ ಮತ್ತು ಬೇರ್ಪಡಿಸಲಾಗದ ಭಾಗವಾಗಿದೆ ಮತ್ತು ಪರಿಹರಿಸಬೇಕಾದ ಏಕೈಕ ಸಮಸ್ಯೆ ಪಾಕಿಸ್ತಾನ ಆಕ್ರಮಿತ ಕಾಶ್ಮೀರದ ಭಾಗವನ್ನು ಹಿಂದಿರುಗಿಸುವುದು ಎಂದು ಗಮನಸೆಳೆದರು.

ಜಮ್ಮು ಮತ್ತು ಕಾಶ್ಮೀರದಲ್ಲಿನ ಸ್ಫೋಟಗಳ ಕುರಿತು ಅವರು, "ಇವುಗಳು ಪಾಕಿಸ್ತಾನವು ಮತ್ತೆ ಭಯೋತ್ಪಾದಕರೊಂದಿಗೆ ನಿಲ್ಲಲು ನಿರ್ಧರಿಸಿದೆ ಎಂದು ತೋರಿಸುತ್ತದೆ; ಅವರ ವಿರುದ್ಧ ಕ್ರಮ ಕೈಗೊಳ್ಳುವ ಬದಲು, ಅವರು ಮೂಲಭೂತವಾಗಿ ಅವರಿಗೆ ಬೆಂಬಲ ನೀಡುತ್ತಿದ್ದಾರೆ" ಎಂದು ಹೇಳಿದರು.

"ಅವರು ಸ್ವತಃ ಇದರಲ್ಲಿ ಭಾಗಿಯಾಗಿದ್ದರೆ ನಮಗೆ ಆಶ್ಚರ್ಯವಾಗುವುದಿಲ್ಲ; ಆದರೆ ಅವರು ಜಗತ್ತಿಗೆ ಹೇಳುತ್ತಿರುವ ಸಂದೇಶ ಅದು, ನಾವು ಭಯೋತ್ಪಾದಕರೊಂದಿಗಿದ್ದೇವೆ, ನಾವು ನಾಗರಿಕ ಪ್ರಪಂಚದೊಂದಿಗಿಲ್ಲ. ಮತ್ತು ಪಾಕಿಸ್ತಾನದ ನಂಬಿಕೆ ಭಯೋತ್ಪಾದಕ ಹತ್ಯೆಗಳ, ನಾಗರಿಕರ ಕ್ರೂರ ಹತ್ಯೆಗಳ ಈ ಪ್ರಾಕ್ಸಿಗಳನ್ನು ಮಾಡುವುದರಲ್ಲಿದೆ."

# ಭಾರತದ ವಿರೋಧದ ಮಧ್ಯೆಯೂ ಪಾಕ್‌ಗೆ 19 ಸಾವಿರ ಕೋಟಿ ಸಾಲ

**ನವದೆಹಲಿ,ಮೇ 9:** ಅಂತಾರಾಷ್ಟ್ರೀಯ ಹಣಕಾಸು ನಿಧಿ ಬಿಕಾರಿ ಪಾಕಿಸ್ತಾನಕ್ಕೆ ಭಾರತದ ವಿರೋಧದ ಮಧ್ಯೆಯೂ 19 ಸಾವಿರ ಕೋಟಿ ರೂ. ಸಾಲ ನೀಡಿದೆ. ಐಎಂಎಫ್ ಕಾರ್ಯಕಾರಿ ಮಂಡಳಿಯು ತನ್ನ ವಿಸ್ತ್ರತ ನಿಧಿ ಸೌಲಭ್ಯ ಅಡಿಯಲ್ಲಿ 1 ಬಿಲಿಯನ್ ಡಾಲರ್‌ಗಳ ಎರಡನೇ ಸಾಲದ ಕಂತನ್ನು ಬಿಡುಗಡೆ ಮಾಡಿದೆ. ಆದರೆ, ಇಎಫ್ ಎಫ್ ನಿರ್ಧಾರವನ್ನು ಭಾರತವು ತೀವ್ರವಾಗಿ ಖಂಡಿಸಿದೆ. ಇದು ಭಯೋತ್ಪಾದನೆಗೆ ಹಣಕಾಸಿನ ನೆರವು ಎಂದು ಆಕ್ರೋಶ ವ್ಯಕ್ತಪಡಿಸಿದೆ. ಪಾಕಿಸ್ತಾನಕ್ಕೆ ಹಣಕಾಸಿನ ಸಹಾಯ ಮಾಡುವ ವಿಚರಾವಾಗಿ ಭಾರತ ಮತದಾನದಿಂದ ದೂರ ಉಳಿಯಿತು. ಐಎಂಎಫ್ ಸಾಲಗಳನ್ನು ಪರಿಣಾಮಕಾರಿಯಾಗಿ ಬಳಸುವಲ್ಲಿ ಪಾಕಿಸ್ತಾನದ ನಿರಂತರ ವೈಫಲ್ಯದ ಬಗ್ಗೆ ಭಾರತ ಎಚ್ಚರಿಕೆ ನೀಡಿತ್ತು. ಪಾಕಿಸ್ತಾನವು ಆರ್ಥಿಕ ಅಸ್ಥಿರತೆಯನ್ನು ಎದುರಿಸುತ್ತಲೇ ಇದೆ ಎಂದು ಭಾರತ ಎತ್ತಿ ತೋರಿಸಿದೆ. ಆದರೂ ಸಾಲ ನೀಡಿರುವುದು ಕಳವಳ ಎಂದು ಭಾರತ ತೀವ್ರ ವಿರೋಧ ವ್ಯಕ್ತಪಡಿಸಿದೆ



ರಷ್ಯಾದ ಮಾಸ್ಕೋದ ಕ್ರೆಮ್ಲಿನ್‌ನಲ್ಲಿ ನಡೆದ ಮಾತುಕತೆಯ ನಂತರ, ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಮತ್ತು ರಷ್ಯಾ ಅಧ್ಯಕ್ಷ ವ್ಲಾಡಿಮಿರ್ ಪುಟಿನ್ ಅವರು ಹೊಸ ಯುಗಕ್ಕಾಗಿ ಚೀನಾ-ರಷ್ಯಾ ಸಮಗ್ರ ಕಾರ್ಯತಂತ್ರದ ಸಮನ್ವಯ ಪಾಲುದಾರಿಕೆಯನ್ನು ಮತ್ತಷ್ಟು ಆಳಗೊಳಿಸುವ ಕುರಿತು ಜಂಟಿ ಹೇಳಿಕೆಗೆ ಸಹಿ ಹಾಕಿದರು.

# ನೂತನ ಪೋಪ್ ಲಿಯೋಗೆ ಪ್ರಧಾನಿ ಮೋದಿ ಅಭಿನಂದನೆ

**ನವದೆಹಲಿ, ಮೇ 9:** ಪ್ರಧಾನಿ ನರೇಂದ್ರ ಮೋದಿ ಇಂದು ಪೋಪ್ ಲಿಯೋ XIV ಅವರಿಗೆ ಹೃತ್ಪೂರ್ವಕ ಅಭಿನಂದನೆಗಳು ಮತ್ತು ಶುಭಾಶಯಗಳನ್ನು ತಿಳಿಸಿದರು ಮತ್ತು ಭಾರತವು "ನಮ್ಮ ಹಂಚಿಕೆಯ ಮೌಲ್ಯಗಳನ್ನು ಮತ್ತಷ್ಟು ಹೆಚ್ಚಿಸಲು ಹೋಲಿ ಸಿಇಒ ಜೊತೆ ನಿರಂತರ ಸಂವಾದ ಮತ್ತು ಸಂಪರ್ಕಕ್ಕೆ ಬದ್ಧವಾಗಿದೆ" ಎಂದು ಹೇಳಿದರು.

**ಎಕ್ಸ್ ಕುರಿತ ಪೋಸ್ಟ್‌ನಲ್ಲಿ ಪ್ರಧಾನಿ ಹೀಗೆ ಹೇಳಿದರು:** ನಾನು ಭಾರತದ ಜನರಿಂದ ಗೌರವಾನ್ವಿತ ಅಭಿನಂದನೆಗಳು ಮತ್ತು ಶುಭಾಶಯಗಳನ್ನು ಸಲ್ಲಿಸುತ್ತೇನೆ. ಶಾಂತಿ, ಸಾಮರಸ್ಯ, ಒಗ್ಗಟ್ಟು ಮತ್ತು ಸೇವೆಯ ಆದರ್ಶಗಳನ್ನು ಮುನ್ನಡೆಸುವಲ್ಲಿ ಕ್ಯಾಥೋಲಿಕ್ ಚರ್ಚ್ನ ಅವರ ನಾಯಕತ್ವವು ಆಳವಾದ



ಮಹತ್ವದ ಕ್ಷಣದಲ್ಲಿ ಬರುತ್ತದೆ. "ನಮ್ಮ ಹಂಚಿಕೆಯ ಮೌಲ್ಯಗಳನ್ನು ಮತ್ತಷ್ಟು ಹೆಚ್ಚಿಸಲು ಹೋಲಿ ಸಿಇಒ ಜೊತೆ ನಿರಂತರ ಸಂವಾದ ಮತ್ತು ನಿಶ್ಚಿತಾರ್ಥಕ್ಕೆ ಭಾರತ ಬದ್ಧವಾಗಿದೆ."

ವ್ಯಾಟಿಕನ್ ನಗರದಲ್ಲಿ ನಡೆದ ಕಾರ್ಡಿನಲ್ಸ್ ಸಮಾವೇಶದಲ್ಲಿ ಎರಡನೇ ದಿನದ ರಹಸ್ಯ ಮತದಾನದಲ್ಲಿ ಯುನೈಟೆಡ್ ಸ್ಟೇಟ್ಸ್ನ ಕಾರ್ಡಿನಲ್ ರಾಬರ್ಟ್ ಫ್ರಾನ್ಸಿಸ್ ಪ್ರೆವೋಸ್ಟ್ ಹೊಸ ಪೋಪ್ ಆಗಿ ಆಯ್ಕೆಯಾದರು. ಹೊಸ ಪೋಪ್ ಆಗಿ ಅವರು ಆಯ್ಕೆ ಮಾಡಿದ ಹೆಸರು ಲಿಯೋ 133 ಕಾರ್ಡಿನಲ್‌ಗಳನ್ನು ಒಳಗೊಂಡ ಕಾರ್ಡಿನಲ್ಸ್ ಕಾಲೇಜು, ಮೇ 7ರಂದು ಹೊಸ ಪೋಪ್ ಅನ್ನು ಆಯ್ಕೆ ಮಾಡಲು ರಹಸ್ಯ ಮತದಾನ ಪ್ರಕ್ರಿಯೆಯನ್ನು ಪ್ರಾರಂಭಿಸಿತು. ಹಿಂದಿನ ಪೋಪ್ ಫ್ರಾನ್ಸಿಸ್ ಏಪ್ರಿಲ್ 21 ರಂದು ಅನಾರೋಗ್ಯದಿಂದ ನಿಧನರಾದರು.

# ರಷ್ಯಾ-ಉಕ್ರೇನ್ ನಡುವೆ 30 ದಿನಗಳ ಬೇಷರತ್ ಕದನ ವಿರಾಮಕ್ಕೆ ಟ್ರಂಪ್ ಕರೆ

ವಾಷಿಂಗ್ಟನ್/ಮಾಸ್ಕೋ, ಮೇ 9 (ಗಓಖ) ವಾಷಿಂಗ್ಟನ್ ಇನ್ನೂ ಮಾಸ್ಕೋ ಮತ್ತು ಕೀವ್ ಜೊತೆ ಚರ್ಚೆಯಲ್ಲಿ ತೊಡಗಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ ಮತ್ತು ಉಕ್ರೇನ್ನಲ್ಲಿ 30 ದಿನಗಳ ಬೇಷರತ್ತಾದ ಕದನ ವಿರಾಮಕ್ಕೆ ಕರೆ ನೀಡಿದ್ದಾರೆ, ಕದನ ವಿರಾಮವನ್ನು ಎತ್ತಿಹಿಡಿಯದಿದ್ದರೆ ಹೊಸ ನಿರ್ಬಂಧಗಳನ್ನು ವಿಧಿಸಲಾಗುವುದು ಎಂದು ಎಚ್ಚರಿಸಿದ್ದಾರೆ. "ರಷ್ಯಾ/ಉಕ್ರೇನ್ ಜೊತೆ ಮಾತುಕತೆ ಮುಂದುವರಿಯುತ್ತದೆ. ಆದರ್ಶಪ್ರಾಯವಾಗಿ, 30 ದಿನಗಳ ಬೇಷರತ್ತಾದ ಕದನ ವಿರಾಮಕ್ಕೆ ಅಮೆರಿಕ ಕರೆ ನೀಡುತ್ತದೆ. ಸ್ವೀಕಾರಾರ್ಹ ಕದನ ವಿರಾಮವನ್ನು ಆಚರಿಸಲಾಗುತ್ತದೆ ಎಂದು ಆಶಿಸುತ್ತೇವೆ ಮತ್ತು ಈ ನೇರ ಮಾತುಕತೆಗಳ ಪಾವಿತ್ರ್ಯವನ್ನು ಗೌರವಿಸುವ ಜವಾಬ್ದಾರಿಯನ್ನು ಎರಡೂ ದೇಶಗಳು ವಹಿಸಿಕೊಳ್ಳುತ್ತವೆ. ಕದನ ವಿರಾಮವನ್ನು



ಗೌರವಿಸದಿದ್ದರೆ, ಅಮೆರಿಕ ಮತ್ತು ಅದರ ಪಾಲುದಾರರು ಮತ್ತಷ್ಟು ನಿರ್ಬಂಧಗಳನ್ನು ವಿಧಿಸುತ್ತಾರೆ" ಎಂದು ಟ್ರಂಪ್ ಟ್ರೂತ್ ಸೋಶಿಯಲ್ ಪೋಸ್ಟ್‌ನಲ್ಲಿ ಬರೆದಿದ್ದಾರೆ.

ತಮ್ಮ ಪೋಸ್ಟ್‌ನಲ್ಲಿ, ಯುರೋಪಿಯನ್ ಪಾಲುದಾರರ ಸಹಯೋಗದೊಂದಿಗೆ ರಷ್ಯಾ ಮತ್ತು ಉಕ್ರೇನ್ ನಡುವೆ ಶಾಂತಿಯನ್ನು ಸಾಧಿಸುವ ಬದ್ಧತೆಯನ್ನು ಟ್ರಂಪ್ ಒತ್ತಿ ಹೇಳಿದರು, ಸಂಘರ್ಷದ ಶಾಶ್ವತ ಪರಿಹಾರಕ್ಕಾಗಿ ಭರವಸೆ ವ್ಯಕ್ತಪಡಿಸಿದರು.

ಈ ಕದನ ವಿರಾಮವು ಅಂತಿಮವಾಗಿ ಶಾಂತಿ ಒಪ್ಪಂದದತ್ತ ಸಾಗಬೇಕು. ಇದೆಲ್ಲವನ್ನೂ ಬಹಳ ಬೇಗನೆ ಮಾಡಬಹುದು, ಮತ್ತು ನನ್ನ ಸೇವೆಗಳು ಅಗತ್ಯವಿದ್ದರೆ ನಾನು ಒಂದು ಕ್ಷಣದ ಸೂಚನೆಯ ಮೇರೆಗೆ ಲಭ್ಯವಿರುತ್ತೇನೆ" ಎಂದು ಟ್ರಂಪ್ ಹೇಳಿದರು.

ಗುರುವಾರದಂದು, ಉಕ್ರೇನಿಯನ್ ಅಧ್ಯಕ್ಷ ವೊಲೊಡಿಮಿರ್ ಝೆಲೆನ್ಸ್ಕಿ ಅವರು ಘಿ ನಲ್ಲಿ ಪೋಸ್ಟ್ನಲ್ಲಿ ಟ್ರಂಪ್ ಅವರೊಂದಿಗೆ "ಉತ್ತಮ" ಫೋನ್ ಸಂಭಾಷಣೆ ನಡೆಸಿದ್ದಾರೆ ಎಂದು ಹಂಚಿಕೊಂಡರು, ಈ ಸಮಯದಲ್ಲಿ ಅವರು ರಷ್ಯಾದೊಂದಿಗೆ ತಕ್ಷಣದ 30 ದಿನಗಳ ಕದನ ವಿರಾಮಕ್ಕೆ ಕೀವ್ ಸಿದ್ಧವಾಗಿದೆ ಎಂದು ಅಮೆರಿಕ ನಾಯಕರಿಗೆ ತಿಳಿಸಿದರು.

# ಉದ್ವಿಗ್ನ ಸ್ಥಿತಿ ಶಮನಕ್ಕೆ ಪಾಕ್ ಮಾಜಿ ಪ್ರಧಾನಿ ಷರೀಫ್ ಯತ್ನ

**ಲಾಹೋರ್,ಮೇ 9:** ಭಾರತದಲ್ಲಿ ತಮಗಿರುವ ಸಂಪರ್ಕವನ್ನು ಬಳಸಿಕೊಂಡು ಈಗಿನ ಬಿಗುವಿನ ಸ್ಥಿತಿಯನ್ನು ಶಮನಗೊಳಿಸಲು ಮಾಜಿ ಪ್ರಧಾನಿ ನವಾಜ್ ಷರೀಫ್ ಯತ್ನಿಸಿದ್ದಾರೆ ಎಂದು ವರದಿಯಾಗಿದೆ. ಭಾರತದ ದಾಳಿಗೆ ಪ್ರತಿಕ್ರಿಯಿಸಬೇಕು ಎಂದು ಪಕ್ಷಗಳು ಮತ್ತು ಜನರಿಂದ ಒತ್ತಡ ಹೆಚ್ಚಿರುವಂತೆಯೇ ನವಾಜ್ ಷರೀಫ್ ಹಿಂಬಾಗಿಲ ಮೂಲಕ ಪರಿಸ್ಥಿತಿ ಶಮನಕ್ಕೆ ಯತ್ನಿಸಿದ್ದಾರೆ ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ನವಾಜ್ ಷರೀಫ್ ಅವರು ಪ್ರಧಾನಿ ಶಹಬಾಜ್ ಷರೀಫ್ ಅವರ ಅಣ್ಣ. ಗುರುವಾರ ನಡೆದ ಸಭೆಯಲ್ಲಿ ಅವರು 'ರಾಜತಾಂತ್ರಿಕ ಮಾರ್ಗದಲ್ಲಿ ಪರಿಸ್ಥಿತಿ ಶಮನಕ್ಕೆ ಸಲಹೆ ಮಾಡಿದ್ದಾರೆ' ಎಂದು ವರದಿಗಳು ಉಲ್ಲೇಖಿಸಿವೆ. 'ಭಾರತದ ವಿರುದ್ಧ ದಾಳಿಯನ್ನು



ತೀವ್ರಗೊಳಿಸುವುದರ ಪರವಾಗಿ ನಾನಿಲ್ಲ ಎಂದು ಷರೀಫ್ ಹೇಳಿದ್ದಾರೆ' ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ. ದೇಶದ ಸಾರ್ವಭೌಮತೆ ರಕ್ಷಣೆಗಾಗಿ ಸೇನಾ ಪಡೆಗಳು ದಾಳಿ ನಡೆಸಬೇಕು ಎಂದು ವಿವಿಧ ಪಕ್ಷಗಳ ಸದಸ್ಯರು ಒತ್ತಡ ಹೇರಿದ್ದಾರೆ ಎಂದು ನ್ಯೂಸ್ ಇಂಟರ್ನ್ಯಾಷನಲ್ ವರದಿ ಮಾಡಿದೆ.

## ಓಪನ್ ಬ್ಯಾಡ್ಮಿಂಟನ್ ಸೆಮಿಫೈನಲ್‌ಗೆ
# ಆಯುಷ್ ಶೆಟ್ಟಿ, ಉನ್ನತಿ

**ತೈಪೆ,ಮೇ 9:** ಭಾರತದ ಯುವ ಶೆಟ್ಲರ್‌ಗಳಾದ ಆಯುಷ್ ಶೆಟ್ಟಿ ಮತ್ತು ಉನ್ನತಿ ಹೂಡಾ ತೈಪೆ ಓಪನ್ ಬ್ಯಾಡ್ಮಿಂಟನ್ ಪಂದ್ಯಾವಳಿಯ ಸೆಮಿಫೈನಲ್‌ಗೆ ಲಗ್ಗೆ ಹಾಕಿದ್ದಾರೆ. ಕಾರ್ಕಳ ಮೂಲದ 20 ವರ್ಷದ ಆಯುಷ್ ಶೆಟ್ಟಿ ಕೆನಡಾದ ಬ್ರಿಯಾನ್ ಯಂಗ್ ಅವರನ್ನು 16–21, 21–19, 21–14 ಅಂತರದಿಂದ ಪರಾಭವಗೊಳಿಸಿದರು. ಈ ಜಿದ್ದಾಜಿದ್ದಿ ಪಂದ್ಯ 1 ಗಂಟೆ, 11 ನಿಮಿಷ ತನಕ ಸಾಗಿತು. ಇದಕ್ಕೂ ಮುನ್ನ 17 ವರ್ಷದ, ವಿಶ್ವ ಬ್ಯಾಂಕ್‌ನಲ್ಲಿ 53ನೇ ಸ್ಥಾನದಲ್ಲಿರುವ ಉನ್ನತಿ ಹೂಡಾ ಚೈನೀಸ್ ತೈಪೆಯ ಹಂಗ್ ಟಿಂಗ್ ಅವರನ್ನು 21–8, 19–21, 21–19 ಅಂತರದಿಂದ ಮಣಿಸಿದರು. ಮುಂದಿನ ಎದುರಾಳಿ, ಅಗ್ರ ಶ್ರೇಯಾಂಕದ ಜಪಾನ್ ಆಟಗಾರ್ತಿ ಟೊಮೊಕಾ ಮಿಯಜಾಕಿ.



**2ನೇ ಸೆಮಿಫೈನಲ್:** ಉನ್ನತಿ ಹೂಡಾ ಸೂಪರ್ 300' ಪಂದ್ಯಾವಳಿಯ ಸೆಮಿಫೈನಲ್ ಪ್ರವೇಶಿಸಿದ್ದು ಇದು 2ನೇ ಸಲ. ಇದಕ್ಕೂ ಮುನ್ನ 2024ರ "ಸಯ್ಯದ್ ಮೋದಿ ಇಂಡಿಯಾ ಇಂಟರ್‌ನ್ಯಾಶನಲ್ ಪಂದ್ಯಾವಳಿಯಲ್ಲಿ ಉಪಾಂತ್ಯ ತಲುಪಿ, ಅಲ್ಲಿ ಪಿ.ವಿ. ಸಿಂಧು ವಿರುದ್ಧ ಪರಾಭವಗೊಂಡಿದ್ದರು.

# ಭಾರತ-ಪಾಕ್ ಸಂಘರ್ಷ ಅಮೆರಿಕಕ್ಕೆ ಸಂಬಂಧಿಸಿದ್ದಲ್ಲ: ಜೆ.ಡಿ.ವ್ಯಾನ್ಸ್

**ನ್ಯೂಯಾರ್ಕ್,ಮೇ 9:** 'ಭಾರತ ಮತ್ತು ಪಾಕಿಸ್ತಾನ ತಮ್ಮ ನಡುವಿನ ಉದ್ವಿಗ್ನತೆಯನ್ನು ತಗ್ಗಿಸಬೇಕು ಹಾಗೂ ಈ ನಿಟ್ಟಿನ ಪ್ರಯತ್ನಗಳನ್ನು ಅಮೆರಿಕ ಉತ್ತೇಜಿಸಲಿದೆ. ಮೂಲಭೂತವಾಗಿ, ಉಭಯ ದೇಶಗಳ ನಡುವಿನ ಯುದ್ಧ ನಮಗೆ ಸಂಬಂಧಿಸಿದ್ದಲ್ಲ' ಎಂದು ಅಮೆರಿಕ ಹೇಳಿದೆ.

'ಅಮೆರಿಕವು ಭಾರತ ಮತ್ತು ಪಾಕಿಸ್ತಾನವನ್ನು ನಿಯಂತ್ರಿಸಲು ಸಾಧ್ಯವಿಲ್ಲ. ಉಭಯ ದೇಶಗಳ ನಡುವೆ ನಡೆಯುತ್ತಿರುವ ಯುದ್ಧದಲ್ಲಿ ತೊಡಗಿಸಿಕೊಳ್ಳಲು ಅಮೆರಿಕ ಮುಂದಾಗದು' ಎಂದು ಅಮೆರಿಕ ಉಪಾಧ್ಯಕ್ಷ ಜೆ.ಡಿ.ವ್ಯಾನ್ಸ್ ಹೇಳಿದ್ದಾರೆ. ಫಾಕ್ಸ್ ನ್ಯೂಸ್ಗೆ ನೀಡಿರುವ ಸಂದರ್ಶನದಲ್ಲಿ ಈ ಮಾತು ಹೇಳಿರುವ ವ್ಯಾನ್ಸ್, 'ಅಣ್ವಸ್ತ್ರ ಹೊಂದಿರುವ ಈ ಎರಡು ದೇಶಗಳ ನಡುವಿನ ಈ ಸಂಘರ್ಷ ತೀವ್ರಗೊಳ್ಳಬಾರದು ಎಂಬುದೇ ನಮ್ಮ ಕಾಳಜಿ' ಎಂದು ಹೇಳಿದ್ದಾರೆ. 'ಶಸ್ತ್ರಾಸ್ತ್ರಗಳನ್ನು



ಕೆಳಗಿಡುವಂತೆ ಭಾರತ ಹಾಗೂ ಪಾಕಿಸ್ತಾನಕ್ಕೆ ಅಮೆರಿಕ ಹೇಳಲು ಸಾಧ್ಯವಿಲ್ಲ. ಆದರೆ, ರಾಜತಾಂತ್ರಿಕ ಮಾರ್ಗಗಳ ಮೂಲಕ ಈ ಉದ್ದೇಶ ಈಡೇರಿಸುವ ಪ್ರಯತ್ನವನ್ನು ಮುಂದುವರಿ ಸಲಾಗುವುದು. ಇದು, ಬರುವ ದಿನಗಳಲ್ಲಿ ವ್ಯಾಪಕವಾದ ಪ್ರಾದೇಶಿಕ ಯುದ್ಧದ ಹಂತ ತಲುಪದಿರಲಿ ಎಂಬುದೇ ನಮ್ಮ ನಿರೀಕ್ಷೆ' ಎಂದೂ ವ್ಯಾನ್ಸ್ ಹೇಳಿದ್ದಾರೆ.

# ಶ್ರೀಲಂಕಾ ಹೆಲಿಕಾಪ್ಟರ್ ಪತನ 6 ಮಿಲಿಟರಿ ಸಿಬ್ಬಂದಿ ಸಾವು

**ಕೊಲಂಬೋ,ಮೇ 9:** ಶ್ರೀಲಂಕಾ ವಾಯುಪಡೆಯ ಹೆಲಿಕಾಪ್ಟರ್ ಶುಕ್ರವಾರ ಜಲಾಶಯಕ್ಕೆ ಪತನಗೊಂಡಿದ್ದು ವಿಮಾನದಲ್ಲಿದ್ದ 6 ಮಿಲಿಟರಿ ಸಿಬ್ಬಂದಿ ಮೃತಪಟ್ಟಿರುವುದಾಗಿ ಮಿಲಿಟರಿ ಅಧಿಕಾರಿಗಳು ಹೇಳಿದ್ದಾರೆ. ಮಡುರು ಓಯಾ ಪ್ರಾಂತದಲ್ಲಿ ಸೇನೆಯ ವಿಶೇಷ ಪಡೆಗಳ ತುಕಡಿ ವೈಮಾನಿಕ ಕಸರತ್ತು ನಡೆಸುತ್ತಿದ್ದಾಗ ದುರಂತ ಸಂಭವಿಸಿದೆ. ಕಡಿಮೆ ಎತ್ತರದಲ್ಲಿ ಚಲಿಸುವ ಹೆಲಿಕಾಪ್ಟರಿಂದ ನೆಲಕ್ಕೆ ಜಿಗಿಯುವ ಕಸರತ್ತು ಪ್ರದರ್ಶನ ಸಂದರ್ಭ ಹೆಲಿಕಾಪ್ಟರ್ ನಿಯಂತ್ರಣ ಕಳೆದುಕೊಂಡು ಸರೋವರಕ್ಕೆ ಪತನಗೊಂಡಿದೆ. ಹೆಲಿಕಾಪ್ಟರಲ್ಲಿ



12 ಮಂದಿಯಿದ್ದು ವಾಯುಪಡೆಯ ಇಬ್ಬರು ಹಾಗೂ ವಿಶೇಷ ಪಡೆಗಳ ನಾಲ್ವರು ಯೋಧರು ಸ್ಥಳದಲ್ಲೇ ಮೃತಪಟ್ಟಿದ್ದು ಇತರ 6 ಮಂದಿ ಗಾಯಗೊಂಡಿದ್ದಾರೆ ಎಂದು ರಕ್ಷಣಾ ಇಲಾಖೆ ಹೇಳಿದೆ. ದುರಂತದ ಬಗ್ಗೆ ತನಿಖೆ ನಡೆಸಲು 9 ಸದಸ್ಯರ ಸಮಿತಿಯನ್ನು ರಚಿಸಿರುವುದಾಗಿ ಶ್ರೀಲಂಕಾ ವಾಯುಪಡೆ ಹೇಳಿದೆ



ಪಶ್ಚಿಮ ದಂಡೆಯ ನಬ್ಲಸ್ ನಗರದಲ್ಲಿ ಇಸ್ರೇಲಿ ಅಗೆಯುವವರು ನೆಲಸಮ ಮಾಡಿದ ನಂತರ ಮನೆಯ ಅವಶೇಷಗಳನ್ನು ಪರಿಶೀಲಿಸಿದ ಪ್ಯಾಲೆಸ್ತೀನಿ ಮಹಿಳೆ.



ಬ್ರಿಟನ್‌ನ ಲಂಡನ್‌ನಲ್ಲಿರುವ ಸ್ಟ್ಯಾಮ್‌ಫೋರ್ಡ್ ಸೇತುವೆಯಲ್ಲಿ ಚೆಲ್ಸಿಯಾ ಮತ್ತು ಜುರ್ಗಾರ್ಡನ್ ನಡುವಿನ ಕಾನ್ಫರೆನ್ಸ್ ಲೀಗ್ ಸೆಮಿಫೈನಲ್ ಎರಡನೇ ಲೆಗ್ ಫುಟ್‌ಬಾಲ್ ಪಂದ್ಯದ ಸಮಯದಲ್ಲಿ ಚೆಲ್ಸಿಯಾದ ರೀಸ್ ಜೇಮ್ಸ್ ಚೆಂಡಿಗಾಗಿ ಸ್ಪರ್ಧಿಸಿದರು.

# ಪಾಕ್ ಜೊತೆ ಭಾರತದ ಯುದ್ಧ: ಬಿಸಿಸಿಐನಿಂದ ಒಂದು ವಾರದವರೆಗೆ ಐಪಿಎಲ್ ಪಂದ್ಯ ಸ್ಥಗಿತ

ಮುಂಬೈ, ಮೇ 9 (ಗಓಖ) ಇತ್ತೀಚಿನ ಭಯೋತ್ಪಾದಕ ದಾಳಿ ಮತ್ತು ನಂತರದ ಪಾಕಿಸ್ತಾನದ ಸಶಸ್ತ್ರ ಪಡೆಗಳ ಆಕ್ರಮಣದ ನಂತರ ಚಾಲ್ತಿಯಲ್ಲಿರುವ ರಾಷ್ಟ್ರೀಯ ಭದ್ರತಾ ಪರಿಸ್ಥಿತಿಯನ್ನು ಉಲ್ಲೇಖಿಸಿ, ಭಾರತೀಯ ಕ್ರಿಕೆಟ್ ನಿಯಂತ್ರಣ ಮಂಡಳಿ (ಬಿಸಿಸಿಐ) ಶುಕ್ರವಾರ ನಡೆಯುತ್ತಿರುವ ಟಾಟಾ ಇಂಡಿಯನ್ ಪ್ರೀಮಿಯರ್ ಲೀಗ್ (ಐಪಿಎಲ್) 2025 ಅನ್ನು ತಕ್ಷಣದಿಂದ ಜಾರಿಗೆ ಬರುವಂತೆ ಒಂದು ವಾರದ ಅವಧಿಗೆ ಸ್ಥಗಿತಗೊಳಿಸುವುದಾಗಿ ಘೋಷಿಸಿದೆ.

ಫ್ರಾಂಚೈಸಿ ಪ್ರತಿನಿಧಿಗಳು, ಲೀಗ್ನ ಪ್ರಸಾರಕರು, ಪ್ರಾಯೋಜಕರು ಮತ್ತು ಅಭಿಮಾನಿ ಗುಂಪುಗಳು ಸೇರಿದಂತೆ ಎಲ್ಲಾ ಪ್ರಮುಖ ಪಾಲುದಾರರೊಂದಿಗೆ ವಿವರವಾದ



ಸಮಾಲೋಚನೆಯ ನಂತರ ಐಪಿಎಲ್ ಆಡಳಿತ ಮಂಡಳಿಯು ಈ ನಿರ್ಧಾರವನ್ನು ತೆಗೆದುಕೊಂಡಿದೆ ಎಂದು ಬಿಸಿಸಿಐ ಹೇಳಿಕೆ ತಿಳಿಸಿದೆ. ನಮ್ಮ ಸಶಸ್ತ್ರ ಪಡೆಗಳ ಶಕ್ತಿ ಮತ್ತು ಸನ್ನದ್ಧತೆಯ ಬಗ್ಗೆ ನಾವು ಸಂಪೂರ್ಣ ನಂಬಿಕೆಯನ್ನು ಹೊಂದಿದ್ದರೂ, ಎಲ್ಲಾ ಪಾಲುದಾರರ ಸಾಮೂಹಿಕ ಹಿತಾಸಕ್ತಿಯಲ್ಲಿ ಕಾರ್ಯನಿರ್ವಹಿಸುವುದು ವಿವೇಕಯುತವಾಗಿದೆ" ಎಂದು ಬಿಸಿಸಿಐ ಹೇಳಿದೆ.

ಆಪರೇಷನ್ ಸಿಂಧೂರ್ ಅಡಿಯಲ್ಲಿ ನಡೆಯುತ್ತಿರುವ ಮಿಲಿಟರಿ ಪ್ರತಿಕ್ರಿಯೆಯ ಹಿನ್ನೆಲೆಯಲ್ಲಿ ಮಂಡಳಿಯು ಭಾರತ ಸರ್ಕಾರ, ಸಶಸ್ತ್ರ ಪಡೆಗಳು ಮತ್ತು ದೇಶದ ನಾಗರಿಕರೊಂದಿಗೆ ತನ್ನ ಅಚಲ ಒಗ್ಗಟ್ಟನ್ನು ವ್ಯಕ್ತಪಡಿಸಿದೆ.

"ನಮ್ಮ ಸಶಸ್ತ್ರ ಪಡೆಗಳ ಶೌರ್ಯ, ಧೈರ್ಯ ಮತ್ತು ನಿಸ್ವಾರ್ಥ ಸೇವೆಗೆ ನಾವು ನಮಸ್ಕರಿಸುತ್ತೇವೆ, ಅವರ ವೀರೋಚಿತ ಪ್ರಯತ್ನಗಳು ರಾಷ್ಟ್ರವನ್ನು ರಕ್ಷಿಸಲು ಮತ್ತು ಪ್ರೇರೇಪಿಸಲು ಮುಂದುವರಿಯುತ್ತಿವೆ" ಎಂದು ಹೇಳಿಕೆಯಲ್ಲಿ ಸೇರಿಸಲಾಗಿದೆ. ಕ್ರಿಕೆಟ್ ರಾಷ್ಟ್ರದಾದ್ಯಂತ ಉತ್ಸಾಹವಾಗಿ ಉಳಿದಿದ್ದರೂ, "ರಾಷ್ಟ್ರ ಮತ್ತು ಅದರ ಸಾರ್ವಭೌಮತ್ವ, ಸಮಗ್ರತೆ ಮತ್ತು ಭದ್ರತೆಗಿಂತ ದೊಡ್ಡದು ಯಾವುದೂ ಇಲ್ಲ" ಎಂದು ಬಿಸಿಸಿಐ ಒತ್ತಿ ಹೇಳಿದೆ.

ಪರಿಷ್ಕೃತ ಐಪಿಎಲ್ ವೇಳಾಪಟ್ಟಿ ಮತ್ತು ಸ್ಥಳಗಳ ಕುರಿತು ಹೆಚ್ಚಿನ ನವೀಕರಣಗಳನ್ನು ಸಂಬಂಧಿತ ಅಧಿಕಾರಿಗಳು ಮತ್ತು ಪಾಲುದಾರರೊಂದಿಗೆ ಸಮಾಲೋಚಿಸಿ ಪರಿಸ್ಥಿತಿಯ ಸಮಗ್ರ ಮೌಲ್ಯಮಾಪನದ ನಂತರ ಸಕಾಲದಲ್ಲಿ ಹಂಚಿಕೊಳ್ಳಲಾಗುವುದು.

ಈ ಪರೀಕ್ಷಾ ಸಮಯದಲ್ಲಿ ಅವರ ನಿಸ್ಸಂದಿಗ್ಧ ಬೆಂಬಲ ಮತ್ತು ತಿಳುವಳಿಕೆಗಾಗಿ ಲೀಗ್ನ ಅಧಿಕೃತ ಪ್ರಸಾರಕರಾದ ಜಿಯೋಸ್ಟಾರ್ಗೆ, ಶೀರ್ಷಿಕೆ ಪ್ರಾಯೋಜಕರಾದ ಟಾಟಾ ಮತ್ತು ಇತರ ಸಹವರ್ತಿ ಪಾಲುದಾರರಿಗೆ ಮಂಡಳಿಯು ಕೃತಜ್ಞತೆಯನ್ನು ಸಲ್ಲಿಸಿದೆ.